ಸಂಪುಟ: ೦೬/ ಸಂಚಿಕೆ: ೨೪೧/ಶುಕ್ರವಾರ ದಿನಾಂಕ: ೨೨-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 241/ FRIDAY Date : 22-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ॥ ಸಪ್ತಋಷಿವಾಣಿ ॥

ಬದುಕಿನಲ್ಲಿ ನನಗೆ ಯಾರ ಅವಶ್ಯಕತೆಯೂ ಇಲ್ಲ ಎನ್ನುವ ಅಭಿಮಾನ ಒಳ್ಳೆಯದಲ್ಲ. ಹಾಗೆ ಎಲ್ಲರಿಗೂ ನನ್ನ ಅವಶ್ಯಕತೆ ಇದೆ ಎನ್ನುವ ಭ್ರಮೆಯೂ ಒಳ್ಳೆಯದಲ್ಲ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ನಿರ್ಮಲಾ ಸೀತಾರಾಮನ್ ಭೇಟಿ ಮಾಡಿದ ಮುಖ್ಯಮಂತ್ರಿ ಅಲ್ಪಾವಧಿ ಕೃಷಿ ಸಾಲದ ಮಿತಿ ಹೆಚ್ಚಿಸುವಂತೆ ಮನವಿ

ನವದೆಹಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ, 2024–25ರ ಆರ್ಥಿಕ ವರ್ಷದಲ್ಲಿ ಅಲ್ಪಾವಧಿ ಕೃಷಿ ಸಾಲಗಳ (ಎಸ್‌ಎಒ)



ಮಿತಿಯನ್ನು ಹೆಚ್ಚಿಸುವಂತೆ ಒತ್ತಾಯಿಸಿದರು.

ನಬಾರ್ಡ್‌ನ ಕೃಷಿ ಸಾಲವನ್ನು ಶೇ.58 ಕಡಿತ ಮಾಡಿರುವುದರಿಂದ ರಾಜ್ಯದ ರೈತರಿಗೆ ಬಹುದೊಡ್ಡ ಸಂಕಷ್ಟ ಎದುರಾಗಿದೆ, ಹಾಗಾಗಿ ಈ ಸಾಲದ ಮಿತಿಯನ್ನು ಹೆಚ್ಚಿಸಿ ರೈತರ ಹಿತಕಾಯುವಂತೆ ಮನವಿ ಮಾಡಿದ್ದಾರೆ, ಈ ಸಂದರ್ಭದಲ್ಲಿ ಸಚಿವರಾದ ಬೈರತಿ ಸುರೇಶ್, ಚಲುವರಾಯಸ್ವಾಮಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಅವರು ಉಪಸ್ಥಿತರಿದ್ದರು.

ಈ ಮೊದಲು ದೆಹಲಿ ಭೇಟಿ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ್ದ ಮುಖ್ಯಮಂತ್ರಿ, 'ನಬಾರ್ಡ್ ಕಳೆದ ವರ್ಷ ರಾಜ್ಯಕ್ಕೆ ರೂ. 5,600 ಕೋಟಿ ಸಾಲ ನೀಡಿತ್ತು. ಈ ವರ್ಷ 2,340 ಕೋಟಿಗೆ ಕಡಿತ ಮಾಡಿದೆ. ಈ ಬಗ್ಗೆ ಕೇಂದ್ರ ವಿತ್ತ ಸಚಿವರನ್ನು ಭೇಟಿ ಮಾಡಿ ಮನವಿ ಮಾಡಲಾಗುವುದು' ಎಂದಿದ್ದರು. 2024–25ರಲ್ಲಿ 35 ಲಕ್ಷ ರೈತರಿಗೆ 25,000 ಕೋಟಿ ರೂಪಾಯಿಗಳ ಅಲ್ಪಾವಧಿಯ ಕೃಷಿ ಸಾಲವನ್ನು ವಿತರಿಸುವ ಗುರಿಯನ್ನು ಕರ್ನಾಟಕ ಹೊಂದಿದೆ ಎಂದು ಒತ್ತಿ ಹೇಳಿದರು. 2023–24ರಲ್ಲಿ ರಾಜ್ಯವು ಸಹಕಾರಿ ಸಾಲ ರಚನೆಯ ಮೂಲಕ ಈಗಾಗಲೇ 22,902 ಕೋಟಿ ರೂ. ಸಾಲ ನೀಡಿದೆ.

ಸಾಲದ ಮಿತಿಯಲ್ಲಿನ ತೀವ್ರ ಕಡಿತವು ಕೃಷಿ ಸಹಕಾರವನ್ನು ಗಮನಾರ್ಹವಾಗಿ ಅಡ್ಡಿಪಡಿಸಬಹುದು ಮತ್ತು ಆಹಾರ ಧಾನ್ಯ ಉತ್ಪಾದನೆಯನ್ನು ಅಡ್ಡಿಪಡಿಸಬಹುದು ಎಂದು ರಾಜ್ಯ ಸರ್ಕಾರ ಹೇಳಿದೆ. ನವದೆಹಲಿಯಲ್ಲಿ ಕರ್ನಾಟಕಕ್ಕೆ ನಬಾರ್ಡ್ ಅನುದಾನವನ್ನು ಸುಮಾರು ಶೇ. 58ರಷ್ಟು ಕಡಿತಗೊಳಿಸಿರುವ ವಿಷಯದ ಕುರಿತು ಚರ್ಚಿಸಲು ಕರ್ನಾಟಕ ಸಿಎಂ ಸಿದ್ದರಾಮಯ್ಯ ಮತ್ತು ರಾಜ್ಯ ಕ್ಯಾಬಿನೆಟ್ ಸಚಿವರಾದ ಬೈರತಿ ಸುರೇಶ್ ಮತ್ತು ಎನ್. ಚಲುವರಾಯ ಸ್ವಾಮಿ ಅವರೊಂದಿಗೆ ಕೇಂದ್ರದ ಸಚಿವೆ ನಿರ್ಮಲಾ ಸೀತಾರಾಮನ್ ಸಭೆ ನಡೆಸಿದರು. ಕರ್ನಾಟಕವು ಅನುಕೂಲಕರ ಮಾನ್ಸೂನ್ ಪರಿಸ್ಥಿತಿಗಳನ್ನು ಅನುಭವಿಸುತ್ತಿರುವುದರಿಂದ, ರೈತರು ತಮ್ಮ ಕೃಷಿ ಚಟುವಟಿಕೆಗಳನ್ನು ಬೆಂಬಲಿಸಲು ಸಾಲ ವಿತರಣೆಗಾಗಿ ಕುತೂಹಲದಿಂದ ಕಾಯುತ್ತಿದ್ದಾರೆ. ಅಲ್ಪಾವಧಿ ಕೃಷಿ ಸಾಲದ ಮಿತಿಯನ್ನು ಮರುಪರಿಶೀಲಿಸಲು ಮತ್ತು ವಿಸ್ತರಿಸಲು ನಬಾರ್ಡ್ ಮತ್ತು ಆರ್‌ಬಿಐಗೆ ನಿರ್ದೇಶನ ನೀಡುವಂತೆ ಸಿದ್ದರಾಮಯ್ಯ ಅವರು ಸೀತಾರಾಮನ್ ಅವರಿಗೆ ಮನವಿ ಮಾಡಿದ್ದಾರೆ.

## ದೆಹಲಿ: ನಂದಿನಿ ಉತ್ಪನ್ನಗಳ ಮಾರಾಟಕ್ಕೆ ಮುಖ್ಯಮಂತ್ರಿ ಚಾಲನೆ



**ನವದೆಹಲಿ:** ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಕರ್ನಾಟಕ ಹಾಲು ಒಕ್ಕೂಟದ ನಂದಿನಿ ಬ್ರ್ಯಾಂಡ್ ಉತ್ಪನ್ನಗಳ ಅಧಿಕೃತ ಮಾರಾಟಕ್ಕೆ ಸಿಎಂ ಸಿದ್ದರಾಮಯ್ಯ ಗುರುವಾರ ಚಾಲನೆ ನೀಡಿದರು.

ಇದರೊಂದಿಗೆ, ದೇಶದ ರಾಜಧಾನಿಯಲ್ಲೂ ನಂದಿನಿ ಉತ್ಪನ್ನಗಳ ಹವಾ ಆರಂಭವಾಗಲಿದೆ. ಈ ಮೂಲಕ ಅಮುಲ್ ಮತ್ತು ಮದರ್ ಡೇ–ರಿಯಂತಹ ಪ್ರಮುಖ ಬ್ರ್ಯಾಂಡ್‌ಗಳ ಜತೆ ಕರ್ನಾಟಕದ ನಂದಿನಿ ಕೂಡ ಪೈಪೋಟಿ ಒಡ್ಡಲಿದೆ.

ದೆಹಲಿಯ ಅಶೋಕ ಹೋಟೇಲ್‌ನಲ್ಲಿ ನಂದಿನಿ ಬ್ರ್ಯಾಂಡ್ ಉತ್ಪನ್ನಗಳ ಬಿಡುಗಡೆ ಮಾಡುವ ಮೂಲಕ ಅಧಿಕೃತ ಮಾರಾಟಕ್ಕೆ ಚಾಲನೆ ನೀಡಲಾಯಿತು. ಇದಕ್ಕೂ ಮುನ್ನ ದೆಹಲಿಯ ಅಶೋಕ್ ಹೋಟೇಲ್‌ಗೆ ಆಗಮಿಸಿದ ಸಿಎಂ ಸಿದ್ದರಾಮಯ್ಯಗೆ ಕನ್ನಡಿಗರಿಂದ ಪೂರ್ಣಕುಂಭ ಸ್ವಾಗತ ದೊರೆಯಿತು. ಸಚಿವರಾದ ಭೈರತಿ ಸುರೇಶ್, ವೆಂಕಟೇಶ್, ಚಲುವರಾಯಸ್ವಾಮಿ ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಿಎಂಗೆ ಸಾಥ್ ನೀಡಿದರು. **3–4 ಲಕ್ಷ ಲೀಟರ್ ಹಾಲು ಮಾರಾಟ ಗುರಿ** ದೆಹಲಿಯಲ್ಲಿ 3 ರಿಂದ 4 ಲಕ್ಷ ಲೀಟರ್ ಹಾಲನ್ನು ಮಾರಾಟ ಮಾಡಬೇಕು ಎಂಬ ಗುರಿ ಹಾಕಿಕೊಂಡಿದ್ದೇವೆ. ಇನ್ನು ಮುಂದೆ ದೆಹಲಿಯಲ್ಲಿ ಶೇ 100 ರಷ್ಟು ಪರಿಶುದ್ಧ ಹಾಲು ಸಿಗಲಿದೆ. ಶುದ್ಧ ಹಸುವಿನ ಹಾಲನ್ನು ದೆಹಲಿ ಜನರಿಗೆ ನೀಡುತ್ತೇವೆ ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯಕ್ ಹೇಳಿದರು.

**ವಿಶ್ವಮಟ್ಟದಲ್ಲಿ ನಂದಿನಿ ಹವಾ**

ಕೆಲವು ತಿಂಗಳ ಹಿಂದೆ ಅಮೆ–ರಿಕ ಹಾಗೂ ವೆಸ್ಟ್ ಇಂಡೀಸ್‌ನಲ್ಲಿ ನಡೆದಿದ್ದ ಟಿ20 ವಿಶ್ವಕಪ್ ವೇಳೆ ಸ್ಕಾಟ್ಲೆಂಡ್ ಮತ್ತು ಐರ್ಲೆಂಡ್ ತಂಡಗಳ ಪ್ರಾಯೋಜಕತ್ವವನ್ನು ಕೆಎಂಎಫ್ ವಹಿಸಿತ್ತು. ಸ್ಕಾಟ್ಲೆಂಡ್ ಮತ್ತು ಐರ್ಲೆಂಡ್ ತಂಡಗಳ ಜೆರ್ಸಿ ಮೇಲೆ ಪ್ರಾಯೋಜ–ಕರಾಗಿ 'ನಂದಿನಿ' ಬ್ರ್ಯಾಂಡ್ ಹೆಸರು ನಮೂದಿಸಲಾಗಿತ್ತು. ಅಷ್ಟೇ ಅಲ್ಲದೆ, ವಿಶ್ವಕಪ್ ವೇಳೆ ನಂದಿನಿ ಉತ್ಪನ್ನಗಳನ್ನೂ ಪೂರೈಸಲಾಗಿತ್ತು. ಆ ಮೂಲಕ ವಿಶ್ವಮಟ್ಟದಲ್ಲಿ ನಂದಿನಿ ಬ್ರ್ಯಾಂಡ್ ಉತ್ಪನ್ನಗಳು ಗಮನ ಸೆಳೆದಿದ್ದವು.

ವಿಶ್ವಕಪ್ ವೇಳೆ ನಂದಿನಿ ಬ್ರ್ಯಾಂಡ್‌ನ ಫ್ರೋಝುನ್ ಸಿಹಿತಿಂಡಿಗಳು, ಹಾಲಿನಿಂದ ಕೂಡಿದ ಎನರ್ಜಿ ಡ್ರಿಂಕ್ ನಂದಿನಿ ಸ್ಲಾಶ್ ಅನ್ನು ಕೆಎಂಎಫ್ ಅಮೆ–ರಿಕಕ್ಕೆ ಪೂರೈಕೆ ಮಾಡಿತ್ತು. ಕರ್ನಾಟಕ ಹಾಲು ಒಕ್ಕೂಟ ಕೆಎಂಎಫ್ ಈಗ 50 ವರ್ಷದ ಮೈಲಿಗಲ್ಲು ಸಾಧಿಸಿದ್ದು, ಈ ಸಂದರ್ಭದಲ್ಲೇ ಸಂಸ್ಥೆಯ ಉತ್ಪನ್ನಗಳು ದೇಶ ವಿದೇಶಗಳಲ್ಲಿ ಸದ್ದು ಮಾಡುತ್ತಿವೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿಯೂ ಉತ್ಪನ್ನಗಳ ಅಧಿಕೃತ ಮಾರಾಟ ಆರಂಭವಾಗಿದೆ.

## ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ

### ನಾಲ್ಕು ಸರಕಾರಿ ಅಧಿಕಾರಿಗಳ ಬಳಿ 26.66 ಕೋಟಿ ಸಂಪತ್ತು..!

**ಬೆಂಗಳೂರು** : ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದನೆ ಆರೋಪ ಬೆನ್ನಲ್ಲೇ ನಾಲ್ವರು ಸರಕಾರಿ ಅಧಿಕಾರಿಗಳ ನಿವಾಸ, ಕಚೇರಿಗಳ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದು, ಈ ವೇಳೆ 26.66 ಕೋಟಿ ರೂ. ಮೌಲ್ಯದ ಆಸ್ತಿಗಳನ್ನು ಪತ್ತೆ ಹಚ್ಚಿದ್ದಾರೆ.

ಗುರುವಾರ ಬೆಳ್ಳಂ ಬೆಳಗ್ಗೆ ಲೋಕಾಯುಕ್ತ ಪೊಲೀಸರು ನಾಲ್ವರು ಸರಕಾರಿ ಅಧಿಕಾರಿಗಳಿಗೆ ಸಂಬಂಧಿಸಿದ ಮನೆ, ಕಚೇರಿ ಹಾಗೂ ಸಂಬಂಧಿಕರ ಮನೆಗಳು ಸೇರಿದಂತೆ ಒಟ್ಟು 22 ಸ್ಥಳಗಳಲ್ಲಿ ಏಕ ಕಾಲಕ್ಕೆ ಶೋಧನಾ ಕಾರ್ಯ ಕೈಗೊಂಡರು. ಆ ವೇಳೆ ಕೆಜಿಗಟ್ಟಲೆ ಚಿನ್ನ, ಆಸ್ತಿ–ಪಾಸ್ತಿ, ಕಂತೆ ಕಂತೆ ನೋಟುಗಳು ಸೇರಿದಂತೆ ಕೋಟ್ಯಂತರ ರೂ. ಮೌಲ್ಯದ ಆಸ್ತಿಗಳು ಪತ್ತೆಯಾಗಿವೆ ಎಂದು ತಿಳಿದು ಬಂದಿದೆ.

**ಅಧಿಕಾರಿ–ಹೊಂದಿರುವ ಆಸ್ತಿ–ಪಾಸ್ತಿ ವಿವರ:**

* ಕೃಷ್ಣವೇಣಿ ಎಂ.ಸಿ, ಹಿರಿಯ ಭೂ ವಿಜ್ಞಾನಿ, ಮಂಗಳೂರು. (11.93 ಕೋಟಿ ರೂ.).
5 ಸ್ಥಳಗಳಲ್ಲಿ ಶೋಧನಾ ಕಾರ್ಯ. 3 ನಿವೇಶನಗಳು, ಬೆಂಗಳೂರಿನ ಯಲಹಂಕದಲ್ಲಿ 1 ಫ್ಲಾಟ್, ನಿರ್ಮಾಣ ಹಂತದಲ್ಲಿರುವ 1 ವಾಣಿಜ್ಯ ಸಂಕೀರ್ಣ, 26 ಎಕರೆ ಕೃಷಿ ಜಮೀನು (ಕಾಫಿ ಪ್ಲಾಂಟೇಷನ್) ಸೇರಿ ಒಟ್ಟು 10,41,38,286 ರೂ. ಮೌಲ್ಯದ ಸ್ಥಿರ ಆಸ್ತಿ. 56,450 ರೂ. ನಗದು, 66,71,445 ರೂ. ಬೆಲೆ ಬಾಳುವ ಚಿನ್ನಾಭರಣಗಳು, 60 ಲಕ್ಷ ರೂ. ಬೆಲೆಬಾಳುವ ವಾಹನಗಳು, 24.40 ಲಕ್ಷ ರೂ. ಬೆಲೆಬಾಳುವ ಗೃಹೋಪಯೋಗಿ ವಸ್ತುಗಳು ಸೇರಿ




ಒಟ್ಟು 1,51,67,895 ರೂ. ಮೌಲ್ಯದ ಚರ ಆಸ್ತಿ.

* ತಿಪ್ಪೇಸ್ವಾಮಿ ಎನ್.ಕೆ, ನಿರ್ದೇಶಕರು, ನಗರ ಯೋಜನೆ, ಬೆಂಗಳೂರು. (3.46 ಕೊಟಿ ರೂ.)
5 ಸ್ಥಳಗಳಲ್ಲಿ ಶೋಧನಾ ಕಾರ್ಯ. 1 ನಿವೇಶನ, 2 ವಾಸದ ಮನೆಗಳು, 7–5 ಎಕರೆ ಕೃಷಿ ಜಮೀನು, ಎಲ್ಲ ಸೇರಿ 2,50,88,000 ರೂ.
ಅದೇ ರೀತಿ, 8 ಲಕ್ಷ ರೂ. ನಗದು, 58,73,632 ರೂ. ಬೆಲೆ ಬಾಳುವ ಚಿನ್ನಾಭರಣಗಳು, 29.10 ಲಕ್ಷ ರೂ. ಬೆಲೆ ಬಾಳುವ ವಾಹನಗಳು, 15 ಸಾವಿರ ರೂ. ಬೆಲೆಬಾಳುವ ಇತರೆ ವಸ್ತುಗಳು ಸೇರಿ 87,98,632 ರೂ. ಚರ ಆಸ್ತಿ.

* ಮೋಹನ್. ಕೆ, ಅಬಕಾರಿ ಅಧೀಕ್ಷಕರು, ಅಬಕಾರಿ ಜಂಟಿ ಆಯುಕ್ತರ ಕಛೇರಿ, ಬೆಂಗಳೂರು ದಕ್ಷಿಣ, ಬೆಂಗಳೂರು. (4,37,84,098 ರೂ.).
5 ಸ್ಥಳಗಳಲ್ಲಿ ಶೋಧನಾ ಕಾರ್ಯ. 3 ನಿವೇಶನಗಳು, 2 ವಾಸದ ಮನೆಗಳು, 2–25 ಎಕರೆ ಕೃಷಿ ಜಮೀನು ಸೇರಿ ಒಟ್ಟು ಸ್ಥಿರ ಆಸ್ತಿಯ ಮೌಲ್ಯ 3,22,08,000 ರೂ.
ಅದೇ ರೀತಿ, 1,17,898 ರೂ. ನಗದು, 44,58,200 ರೂ. ಬೆಲೆ ಬಾಳುವ ಚಿನ್ನಾಭರಣಗಳು, 35 ಲಕ್ಷ ರೂ. ಬೆಲೆಬಾಳುವ ವಾಹನಗಳು, 35 ಲಕ್ಷ ರೂ. ಬ್ಯಾಂಕ್ ಎಫ್.ಡಿ ಸೇರಿ ಒಟ್ಟು 1,15,76,098 ರೂ. ಮೌಲ್ಯದ ಚರ ಆಸ್ತಿ ಪತ್ತೆ.

* ಮಹೇಶ್, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು. (6.89 ಕೋಟಿ ರೂ.)
7 ಸ್ಥಳಗಳಲ್ಲಿ ಶೋಧನಾ ಕಾರ್ಯ. 25 ನಿವೇಶನಗಳು, 1 ವಾಸದ ಮನೆ, 25 ಎಕರೆ ಕೃಷಿ ಜಮೀನು ಸೇರಿ ಒಟ್ಟು 4,76,33,956 ರೂ. ಮೌಲ್ಯದ ಸ್ಥಿರ ಆಸ್ತಿ. 1,82,284 ರೂ. ನಗದು, 15 ಲಕ್ಷ ರೂ. ಬೆಲೆ ಬಾಳುವ ಚಿನ್ನಾಭರಣಗಳು, 25 ಲಕ್ಷ ರೂ. ಮೌಲ್ಯದ ವಾಹನಗಳು, 1,71,05,000 ರೂ. ಬೆಲೆಬಾಳುವ ಇತರೆ ವಸ್ತುಗಳು ಸೇರಿ ಒಟ್ಟು 2,12,87,284 ರೂ. ಮೌಲ್ಯದ ಚರ ಆಸ್ತಿ.

## ಸಂಪುಟ ಪುನಾರಚನೆ ಬಗ್ಗೆ ನನಗೆ ಗೊತ್ತಿಲ್ಲ : ಗೃಹ ಸಚಿವ ಡಾ ಜಿ ಪರಮೇಶ್ವರ್

ಮೈಸೂರು : ಸಚಿವ ಸಂಪುಟ ಪುನಾರಚನೆ ಬಗ್ಗೆ ನನಗೆ ಗೊತ್ತಿಲ್ಲ. ಅದು ಸಿಎಂ ವಿವೇಚನೆಗೆ ಬಿಟ್ಟಿದ್ದು ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು ತಿಳಿಸಿದ್ದಾರೆ.

ಇಂದು ಮೈಸೂರಿನ ಕಾಂಗ್ರೆಸ್ ಭವನದ ಬಳಿ ಮಾಧ್ಯಮವರೊಂದಿಗೆ ಅವರು ಮಾತನಾಡಿದರು. ಸಿಎಂ ದೆಹಲಿಗೆ ಭೇಟಿ ನೀಡಿದ್ದಾರೆ, ಸಚಿವ ಸಂಪುಟ ಪುನಾರಚನೆ ಏನಾದ್ರು ಆಗುತ್ತಾ? ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ನನಗೆ ಗೊತ್ತಿರುವ ಹಾಗೆ ಸಿಎಂ ಅಲ್ಲಿಯೊಂದು ಸಹಕಾರ ಇಲಾಖೆಯ ಕಾರ್ಯಕ್ರಮವಿದೆ. ಆ ಕಾರ್ಯಕ್ರಮಕ್ಕೆ ಹೋಗಿದ್ದಾರೆ. ಅದು ಬಿಟ್ಟರೆ ಬೇರೆ ಯಾವ ಬೆಳವಣಿಗೆ ಇರಲಿಕ್ಕೆ ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ವಕ್ಫ್ ಕುರಿತು ನಾಳೆ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ : ವಿರೋಧ ಪಕ್ಷವಾಗಿ ಅವರ ಕೆಲಸವನ್ನ ಮಾಡಿದ್ದಾರೆ. ಮುಖ್ಯಮಂತ್ರಿಗಳು ಈಗಾಗಲೇ ಸ್ಪಷ್ಟನೆ ಕೊಟ್ಟಿದ್ದಾರೆ. ವಕ್ಫ್ ಇಲಾಖೆಯವರು ನೋಟಿಸ್ ಕೊಟ್ಟಿದ್ರು, ನಾವದನ್ನ ವಾಪಸ್ ತೆಗೆದುಕೊಳ್ಳಬೇಕು. ಆನಂತರ ಅದನ್ನೆಲ್ಲಾ ಪರಿಶೀಲನೆ ಮಾಡುತ್ತೇವೆ ಎಂದು ಹೇಳಿಕೆ ಕೊಟ್ಟಿದ್ದಾರೆ. ಆದರೂ ಇವರು ರಾಜಕೀಯ ಕಾರಣಕ್ಕಾಗಿ ಎಲ್ಲ ಜಿಲ್ಲೆಗಳಲ್ಲಿ ಪ್ರತಿಭಟನೆಯನ್ನ ಮಾಡುತ್ತಿದ್ದಾರೆ ಎಂದಿದ್ದಾರೆ.

ಸಂಪುಟದಿಂದ ಕೆಲವು ಸಚಿವರನ್ನು ಕೈ ಬಿಡುವ ವಿಚಾರದ




ಕುರಿತು ಮಾತನಾಡಿದ ಅವರು, ನನಗೆ ಅದರ ಬಗ್ಗೆ ಗೊತ್ತಿಲ್ಲ. ಅದನ್ನೆಲ್ಲಾ ನಮಗೆಲ್ಲ ಹೇಳಿ ಮಾಡುವುದಿಲ್ಲ, ಅವರು ಹಾಗೂ ಹೈಕಮಾಂಡ್‌ನವರು ಚರ್ಚೆ ಮಾಡಿಕೊಂಡು ಸಂದರ್ಭಾನುಸಾರವಾಗಿ ಮಾಡುತ್ತಾರೆ ಎಂದು ಹೇಳಿದ್ದಾರೆ. ಜಮೀರ್ ಅಹಮ್ಮದ್ ಅವರನ್ನ ಕೈ ಬಿಡುತ್ತಾರೆಯೇ? ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಅದರ ಬಗ್ಗೆ ನನಗೆ ಗೊತ್ತಿಲ್ಲ ಎಂದು ತಿಳಿಸಿದ್ದಾರೆ.

ಎಕ್ಸಿಟ್ ಪೋಲ್‌ನಲ್ಲಿ ಎನ್‌ಡಿಎ ಪರವಾಗಿ ರಿಸಲ್ಟ್ ಬರಲಿದೆ ಎಂದು ಕಂಡುಬರುತ್ತಿದೆ ಎಂಬ ಪ್ರಶ್ನೆಗೆ, ಎಕ್ಸಿಟ್? ಪೋಲ್?ಗಳು ಎಲ್ಲಾ ಸಂದರ್ಭಗಳಲ್ಲಿ ನಿಜವಾಗುವುದಿಲ್ಲ. ನಾನು ಮಹಾರಾಷ್ಟ್ರ ಉಸ್ತುವಾರಿ ಇದ್ದೆ. ಅಲ್ಲಿ ವಾತಾವರಣ ಬೇರೆಯೇ ಇದೆ. ಅದರಲ್ಲಿ ಎರಡು ಮೂರು ಚಾನಲ್?ನವರು ಮಹಾ ಅಘಾಡಿಗೆ 162 ಸೀಟು ಕೊಟ್ಟಿದ್ದಾರೆ. ಬಿಜೆಪಿಗೆ ಅವರ ಅಲಯನ್ಸ್‌ಗೆ 128 ಸೀಟು ಕೊಟ್ಟಿದ್ದಾರೆ. ಅದಕ್ಕೇನು ಹೇಳಬೇಕು ನಾವು. ಕೆಲವರು ಎನ್‌ಡಿಎ ಪರವಾಗಿ ಕೊಟ್ಟಿದ್ದಾರೆ, ಕೆಲವರು ಇಂಡಿಯಾ ಪರವಾಗಿ ಕೊಟ್ಟಿದ್ದಾರೆ. ಇಂಡಿಯಾ ಒಕ್ಕೂಟ ಅಧಿಕಾರಕ್ಕೆ ಬರುತ್ತೆ ಎಂದು ನನಗೆ ವಿಶ್ವಾಸ ಇದೆ ಎಂದಿದ್ದಾರೆ. ರಾಜ್ಯದಲ್ಲಿ ಮೂರು ಉಪ ಚುನಾವಣೆಗಳಲ್ಲಿ ನಾವು ಗೆಲ್ಲುತ್ತೇವೆ ಎಂಬ ವಿಶ್ವಾಸವಿದೆ. ನಮಗೆ ಇರುವ ಮಾಹಿತಿ ಪ್ರಕಾರ ಮೂರರಲ್ಲಿಯೂ ಗೆಲ್ಲುತ್ತೇವೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರವನ್ನ ಮೊದಲು ಕೇಳಲಿ : ಬಿಪಿಎಲ್ ಕಾರ್ಡ್ ರದ್ದತಿ ವಿಚಾರದಲ್ಲಿ ಕಾಂಗ್ರೆಸ್ ಬಡವರ ಹೊಟ್ಟೆ ಮೇಲೆ ಹೊಡೆಯುತ್ತಿದೆ ಎಂಬ ಬಿಜೆಪಿ ಆರೋಪದ ಕುರಿತು ಪ್ರತಿಕ್ರಿಯಿಸಿದ ಅವರು, ಅವರು ಮೊದಲು ಕೇಂದ್ರ ಸರ್ಕಾರವನ್ನು ಕೇಳಬೇಕು. ಬಿಜೆಪಿಯವರು ರಾಜ್ಯದಲ್ಲಿ ನಮ್ಮನ್ನ ಕೇಳುವ ಮೊದಲು ಕೇಂದ್ರ ಸರ್ಕಾರ 5.8 ಕೋಟಿ ಬಿಪಿಎಲ್ ಕಾರ್ಡ್‌ಗಳನ್ನ ರದ್ದು ಮಾಡಿದೆ. ಅವರನ್ನ ಕೇಳಲಿ ಮೊದಲು, ಆಮೇಲೆ ನಮ್ಮನ್ನ ಕೇಳಲಿ ಎಂದಿದ್ದಾರೆ.

## ಬಿಪಿಎಲ್- ಎಪಿಎಲ್ ಕಾರ್ಡ್ ಯಥಾಸ್ಥಿತಿ ಕಾಯ್ದುಕೊಳ್ಳಲು ನಿರ್ಧಾರ



ಬೆಂಗಳೂರು: ಕೇಂದ್ರ ಮತ್ತು ರಾಜ್ಯ ಸರ್ಕಾರದ ಒಟ್ಟು 1,50,59,431 ಕಾರ್ಡ್‌ಗಳಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆ ಮೇರೆಗೆ ಸದ್ಯ 1,02,509 ಕಾರ್ಡ್‌ಗಳನ್ನು ಪರಿಷ್ಕರಣೆ ಮಾಡಿದ್ದೇವೆ. ಉಳಿದ ಎಲ್ಲ ಬಿಪಿಎಲ್ , ಎಪಿಎಲ್ ಕಾರ್ಡ್‌ಗಳನ್ನು ಯಥಾಸ್ಥಿತಿ ಕಾಯ್ದುಕೊಳ್ಳಲು ನಿರ್ಧರಿಸಲಾಗಿದೆ ಎಂದು ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಾನದಂಡಗಳ ಅನ್ವಯ ಪರಿಶೀಲನೆ ಮಾಡಿ ಪರಿಷ್ಕರಣೆ ಮಾಡಲಾಗಿದೆ. ಕೇಂದ್ರ ಸರ್ಕಾರದ ನಿಯಮಗಳ ಅನ್ವಯ ಪರಿಷ್ಕರಿಸಲಾಗಿದೆ. ಅನರ್ಹ ಎಂಬ ಕಾರ್ಡ್‌ಗಳನ್ನು ತಾತ್ಕಾಲಿಕವಾಗಿ ಅಮಾನತ್ತಿನಲ್ಲಿ ಇಡಲಾಗಿದೆ. ಬಿಪಿಎಲ್‌ಗೆ ಅನರ್ಹರು ಎಂದು ಕಂಡು ಬಂದಿರುವ ಕಾರ್ಡ್‌ಗಳನ್ನು ಎಪಿಎಲ್‌ಗೆ ಸೇರಿಸಲಾಗಿದೆ. ಬಿಪಿಎಲ್‌ಗೆ ಅರ್ಹರಿದ್ದೂ ಕೂಡ ಎಪಿಎಲ್‌ಗೆ ಸೇರಿಸಿದ್ದರೇ ಅಂಥವರಿಗೆ ಮರು ಹಂಚಿಕೆ ಮಾಡುತ್ತೇವೆ ಎಂದರು.

ಬಿಪಿಎಲ್‌ಗೆ ಅರ್ಹರಿದ್ದವರ ಕಾರ್ಡ್ ರದ್ದಾಗಿದ್ದರೆ ಒಂದು ವಾರ ಕಾಲಾವಕಾಶ ನೀಡಿ, ಮರು ನೋಂದಣಿ ಮಾಡಿಕೊಂಡು ಕಾರ್ಡ್ ಮರುಹಂಚಿಕೆ ಮಾಡುತ್ತೇವೆ ಎಂದು ತಿಳಿಸಿದರು.

ಬಿಪಿಎಲ್ ಕಾರ್ಡ್‌ದಾರರನ್ನು ಎಪಿಎಲ್‌ಗೆ ಸೇರ್ಪಡೆ ಮಾಡಿರುವ ವಿಚಾರವಾಗಿ ಮಾತನಾಡಿದ ಅವರು, ಇದರಲ್ಲಿ ಅಧಿಕಾರಿಗಳ ತಪ್ಪಿಲ್ಲ, ಎಲ್ಲ ಗೊಂದಲದ ಹೊಣೆ ನಾನೇ ಹೊರುವೆ. ಅಧಿಕಾರಿಗಳ ಜೊತೆ ಸಭೆ ನಡೆಸಿ ಸೂಕ್ತ ಸಲಹೆ ಸೂಚನೆ ನೀಡುವೆ. ಯಾವುದೇ ಅರ್ಹ ಬಿಪಿಎಲ್ ಕಾರ್ಡ್ ರದ್ದುಪಡಿಸುವುದಿಲ್ಲ ಎಂದು ಭರವಸೆ ನೀಡಿದರು.

ಮಾನದಂಡಗಳ ಅನ್ವಯ ಪರಿಶೀಲನೆ ಮಾಡಿ ಪರಿಷ್ಕರಣೆ ಮಾಡಲಾಗಿದೆ. ಕೇಂದ್ರ ಸರ್ಕಾರದ ನಿಯಮಗಳ ಅನ್ವಯ ಪರಿಷ್ಕರಿಸಲಾಗಿದೆ. ಅನರ್ಹ ಎಂಬ ಕಾರ್ಡ್‌ಗಳನ್ನು ತಾತ್ಕಾಲಿಕವಾಗಿ ಅಮಾನತ್ತಿನಲ್ಲಿ ಇಡಲಾಗಿದೆ. ಬಿಪಿಎಲ್‌ಗೆ ಅನರ್ಹರು ಎಂದು ಕಂಡು ಬಂದಿರುವ ಕಾರ್ಡ್‌ಗಳನ್ನು ಎಪಿಎಲ್ ಗೆ ಸೇ–ರಿಸಲಾಗಿದೆ. ಬಿಪಿಎಲ್‌ಗೆ ಅರ್ಹರಿದ್ದೂ ಕೂಡ ಎಪಿಎಲ್‌ಗೆ ಸೇರಿಸಿದ್ದರೇ ಅಂಥ–'ವರಿಗೆ ಮರು ಹಂಚಿಕೆ ಮಾಡುತ್ತೇವೆ.

ಅರ್ಹ ಬಿಪಿಎಲ್ ಕಾರ್ಡುದಾರರಿಗೆ ಅನ್ಯಾಯ ಆಗಲು ಬಿಡುವುದಿಲ್ಲ. ನಮ್ಮ ಸರ್ಕಾರ ಮತ್ತು ನಮ್ಮ ಪಕ್ಷ ಅನ್ಯಾಯ ಮಾಡಲ್ಲ. ರದ್ದುಗೊಳಿಸುವ ಫಲಾನುಭವಿಗಳ ಪಟ್ಟಿ ನೀಡಲು ಹೇಳಿದ್ದೇವೆ. ಎಲ್ಲರಿಂದ ಮರು ಅರ್ಜಿ ಪಡೆಯುತ್ತೇವೆ. ಐದು ಗ್ಯಾರಂಟಿ ಜಾರಿ ನೋಡಿಕೊಳ್ಳಲು ತಾಲೂಕು ಸಮಿತಿಗಳಿವೆ. ರಾಜ್ಯಮಟ್ಟದ ಸಮಿತಿ ಕೂಡ ಇದೆ. ಸಮಿತಿ ಉಸ್ತುವಾರಿಗಳನ್ನು ನೇಮಕ ಮಾಡಿ ನ್ಯಾಯ ಕೊಡುತ್ತದೆ. ಯಾರು ಭಯಪಡಬೇಕಾಗಿಲ್ಲ ಎಂದು ಕೊಲ್ಲೂರಿನಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.

## ಸಮಸ್ಯೆಗಳ ಪರಿಹಾರಕ್ಕೆ ಲೋಕಾಯುಕ್ತ ಮೊದಲ ಆದ್ಯತೆ ಕರ್ತವ್ಯ ಲೋಪದ ಬಗ್ಗೆ ನಂತರ ತನಿಖೆ, ಕ್ರಮ ಜಾರಿ ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೇಂದ್ರ



**ಧಾರವಾಡ** ಸಾರ್ಜನಿಕರ ಸಮಸ್ಯೆಗಳ ಪರಿಹಾರಕ್ಕೆ ಕರ್ನಾಟಕ ಲೋಕಾಯುಕ್ತ ಮೊದಲ ಆಧ್ಯತೆ ನೀಡುತ್ತದೆ ಎಂದು ಕರ್ನಾಟಕ ಉಪ ಲೋಕಾಯುಕ್ತ ನ್ಯಾಮೂರ್ತಿ ಕೆ.ಎಂ.ಫಣೀಂದ್ರ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸಾರ್ವಜನಿಕರಿಂದ ಕುಂದುಕೊರತೆಗಳ ಬಗ್ಗೆ ದೂರು ಸ್ವೀಕಾರ, ವಿಚಾರಣೆ ಹಾಗೂ ವಿಲೇವಾರಿ ಸಭೆ ಉದ್ಘಾಟಿಸಿ, ಮಾತನಾಡಿದರು.

ಜೀವಿಸುವ ಹಕ್ಕು ಮೂಲಭೂತ ಹಕ್ಕಾಗಿದೆ. ಅದು ಪ್ರತಿಯೊಬ್ಬರು ಗೌರವಯುತವಾಗಿ ಬದುಕುವ ಅವಕಾಶ ಮತ್ತು ಹಕ್ಕನ್ನು ಪ್ರತಿನಿಧಿಸುತ್ತದೆ. ಉತ್ತಮ ಪ್ರಕೃತಿ, ನೆಲ, ಜಲ, ಮಣ್ಣು, ಪರಿಸರ ಕಾಪಾಡುವುದು ಮತ್ತು ಪಡೆಯುವುದು ನಮ್ಮ ಹಕ್ಕು ಮತ್ತು ಕರ್ತವ್ಯವಾಗಿದೆ. ಭಾರತದ ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳು, ಮೂಲಭೂತ ಕರ್ತವ್ಯಗಳು ಮತ್ತು ರಾಜ್ಯ ನೀತಿ ನಿರ್ದೇಶಕ ತತ್ವಗಳು ಪರಸ್ಪರ ಸಂಬಂಧ ಹೊಂದಿವೆ ಎಂದು ನ್ಯಾಯಮೂರ್ತಿ ಫಣೀಂದ್ರ ಅವರು ತಿಳಿಸಿದರು.

ಆಧುನಿಕ ಸರಕಾರಗಳು ಉತ್ತಮವಾದ ಜೀವನ ಮಾಡಲು ಸವಲತ್ತುಗಳನ್ನು ನೀಡುತ್ತದೆ. ಮತ್ತು ಅರ್ಹರಿಗೆ ಸರಕಾರಿ ಸವಲತ್ತುಗಳನ್ನು ಸರಿಯಾಗಿ ತಲುಪಿಸುವ ಜವಾಬ್ದಾರಿ ಕಾರ್ಯಾಂಗದಾಗಿದ್ದು, ಸರಕಾರದ ಕಲ್ಪಿತ ಕಾರ್ಯಗಳ ಅನುಷ್ಠಾನ ಕಾರ್ಯಾಂಗದಾಗಿದೆ ಎಂದು ಅವರು ತಿಳಿಸಿದರು. ಪ್ರತಿಯೊಂದು ವ್ಯವಸ್ಥೆಯಲ್ಲಿ ಕಾನೂನಿನ ರಚನೆ ಇದೆ. ಮನುಷ್ಯನು ಆಸ್ತಿ, ಪಾಸ್ತಿಗಳನ್ನು ಕಾಪಾಡಿಕೊಳ್ಳುವಂತಹ ಕಾನೂನು ವ್ಯವಸ್ಥೆ ನಮ್ಮಲ್ಲಿ ಇದೆ. ಆಸ್ತಿ ಅಂತಸ್ತುಗಳ ಮೇಲೆ ವಿಲ್ ಮಾಡುವ ಮೂಲಕ ಆಸ್ತಿ ಹಕ್ಕುಗಳನ್ನು ಚಲಾಯಿಸಬಹುದು ಎಂದು ಅವರು ಹೇಳಿದರು.

ಕರ್ನಾಟಕ ಲೋಕಾಯುಕ್ತವು ನಿಯಮಾನುಸಾರ ಕರ್ತವ್ಯ ನಿರ್ವಹಿಸುವ ಸರಕಾರಿ ನೌಕರರಿಗೆ ಸಹಾಯ ಮಾಡುತ್ತದೆ. ಸುಳ್ಳು ದೂರು, ಕರ್ತವ್ಯ ನಿರ್ವಹಣೆಗೆ ಅಡಚಣೆ ಉಂಟಾದರೆ ತನಿಖೆ ಮಾಡಿ, ಸೂಕ್ತ ರಕ್ಷಣೆ ನೀಡುತ್ತದೆ. ಕರ್ತವ್ಯ ಲೋಪ ಮಾಡುವ ಅಧಿಕಾರಿ, ನೌಕರರ ವಿರುದ್ಧ ಲೋಕಾಯುಕ್ತ ಕಾಯ್ದೆ ಪ್ರಕಾರ ಕಠಿಣ ಕ್ರಮಕ್ಕೆ ಶಿಫಾರಸ್ಸು ಮಾಡುತ್ತದೆ ಎಂದು ಅವರು ಹೇಳಿದರು.

ಸಾರ್ವಜನಿಕ ಸೇವೆಯೇ ನಮ್ಮ ಗುರಿ. ವಿನಾಕಾರಣ ವಿಳಂಬ, ತಪ್ಪು ಮಾಹಿತಿ, ನಿಧಾನಗತಿ ಅನುಸರಿಸುವ ಮೂಲಕ ಕರ್ತವ್ಯ ಲೋಪ ಮಾಡಬೇಡಿ. ಎಚ್ಚರಿಕೆಯಿಂದ ಮತ್ತು ಸೇವಾ ಮನೋಭಾವನೆಯಿಂದ ಕರ್ತವ್ಯ ನಿರ್ವಹಿಸಿ ಎಂದು ಅಧಿಕಾರಿಗಳಿಗೆ ನ್ಯಾಯಮೂರ್ತಿಗಳು ಹೇಳಿದರು. (ಕೊನೆಯ ಪುಟಕ್ಕೆ)

## ಲೋಕಾಪೂರದಿಂದ ರಾಮದುರ್ಗ ಮಾರ್ಗವಾಗಿ ಧಾರವಾಡಕ್ಕೆ ರೇಲ್ವೆ ಮಾರ್ಗ ನಿರ್ಮಾಣಕ್ಕೆ ರಾಜ್ಯ ಸರಕಾರದಿಂದ ಭೂಮಿ ಕೊಡಿಸಲು ಒತ್ತಾಯಿಸಿ ಸಚಿವರಿಗೆ ಮನವಿ



ರಾಮದುರ್ಗ : ಲೋಕಾಪೂರದಿಂದ ರಾಮದುರ್ಗ ಮಾರ್ಗವಾಗಿಧಾರವಾಡ ವರೆಗೆರೇಲ್ವೆ ಮಾರ್ಗ ಆರಂಬಿಸುವಂತೆ ಒತ್ತಾಯಿಸಿತಾಲೂಕಾರೇಲ್ವೆ ಹೋರಾಟಕ್ರಿಯಾ ಸಮಿತಿಯ ಮುಖಂಡರುಜಿಲ್ಲಾಉಸ್ತುವಾರಿ ಹಾಗೂಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿರವರಿಗೆ ಮನವಿ ಸಲ್ಲಿಸಿದರು.

ರೇಲ್ವೆ ಹೋರಾಟ ಸಮಿತಿ ಸದಸ್ಯರುಗೋಕಾಕದಲ್ಲಿ ಸಚಿವ ಜಾರಕಿಹೊಳಿ ಅವರನ್ನು ಭೇಟಿಯಾಗಿ ಶೀಘ್ರ ರಾಮದುರ್ಗಕ್ಕೆರೇಲ್ವೆಯೋಜನೆ ಆರಂಭಿಸುವಂತೆ ಒತ್ತಾಯಿಸಿದರು.ಕಳೆದ 20 ವರ್ಷಗಳಿಂದ ರಾಮದುರ್ಗದಜನತೆರೇಲ್ವೆಮಾರ್ಗಕ್ಕೆ ಒತ್ತಾಯಿಸಿ ನಿರಂತರ ಹೋರಾಟ ಮಾಡುತ್ತಾ ಬಂದಿದ್ದಾರೆ. ಹೋರಾಟದಫಲದಿಂದ 2016–17 ರಲ್ಲಿಸರ್ವೇ ನಡೆದು 2019 ರಲ್ಲಿ ರೂ.1667 ಕೋಟಿಕ್ರೀಯಾಯೋಜನೆ ನಂತರಕೆಲಸ ಪ್ರಾರಂಭವಾಗದೇ ಉಳಿದಿದೆ. ಕೂಡಲೇ ಮತ್ತೆರಾಜ್ಯ ಸರಕಾರರೇಲ್ವೆ ಮಾರ್ಗ ನಿರ್ಮಾಣ–ಕ್ಕೆ ಸರ್ವೇ ಮಾಡಿಸಿ, ಜಮೀನು ನೀಡಲು ಮುಖ್ಯಮಂತ್ರಿಗಳನ್ನು ಒತ್ತಾಯಿಸಿ, ಜನತೆಯ ಬೇಡಿಕೆಗೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಸತೀಶ ಜಾರಕಿಹೊಳಿ ಅವರು,ಸ್ಥಳೀಯ ಶಾಸಕ ಅಶೋಕ ಪಟ್ಟಣ ಮತ್ತು ನಾವು ಸೇರಿಕೊಂಡುಲೆ ೞಕಾಪೂರಧಾರವಾಡಕ್ಕೆರೈಲ್ವೆ ಮಾರ್ಗ ಪ್ರಾರಂಭ ಮಾಡುವಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮತ್ತುಆರ್ಥಿಕ ಸ್ಥಿತಿಗತಿಗಳ ಕು–ರಿತುಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು–ಎಂದು ಹೇಳಿದರು.

ಈ ಸಂಧರ್ಭದಲ್ಲಿರಾಮದುರ್ಗತಾಲೂಕಾರೈಲ್ವೆ ಹೋರಾಟಕ್ರಿಯಾ ಸಮಿತಿಯ ಮುಖಂಡರುಜಿ.ಎಮ್.ಜೈನೇಖಾನ್, ಮೊಹಮ್ಮದಶಫಿ ಬೆಣ್ಣಿಚಂದ್ರು ಮಾಳದಕರ, ಎಮ್. ಕೆ. ಯಾದವಾಡ, ಸುಭಾಸ್‌ಘೋಡಕೆ,ಅಭಿಜಿತ ಮುನವಳ್ಳಿ, ದಾದಾಪೀರಕೆರೂರ, ಸಂಜೆಯ ಕಪಾಲಿ, ಮಾನವ ಬಂಧುತ್ವ ವೇದಿಕೆ ತಾಲೂಕಾ ಅಧ್ಯಕ್ಷ ಭೀಮಶಿ ಕನಕನ್ನವರಸೇರಿದಂತೆಇತರ–ರಿದ್ದರು.

## ನಬಾರ್ಡ್ ನೀಡುವ ಸಾಲದಲ್ಲಿ ಇಳಿಕೆ : ರಾಜ್ಯದ ರೈತರಿಗೆ ಮಾಡುತ್ತಿರುವ ಅನ್ಯಾಯ : ಮುಖ್ಯಮಂತ್ರಿ

ಹೊಸದಿಲ್ಲಿ : ನಬಾರ್ಡ್ ನೀಡುವ ಸಾಲದ ಮೊತ್ತದಲ್ಲಿ ಅರ್ಧದಷ್ಟು ಕಡಿತಗೊಳಿಸಿರುವುದರಿಂದ ನಾವು ವಾಣಿಜ್ಯ ಬ್ಯಾಂಕುಗಳಿಗೆ ಹೋಗಬೇಕಾಗುತ್ತದೆ. ವಾಣಿಜ್ಯ ಬ್ಯಾಂಕುಗಳಲ್ಲಿ 10 ರಿಂದ 12 ಶೇಕಡಾ ಬಡ್ಡಿ ಹಾಕುತ್ತಾರೆ. ಇದು ರೈತರಿಗೆ ಮಾಡುತ್ತಿರುವ ಅನ್ಯಾಯವಲ್ಲವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಹೊಸದಿಲ್ಲಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈ ಬಗ್ಗೆ ಪ್ರಧಾನಮಂತ್ರಿ, ಕೇಂದ್ರ ಹಣಕಾಸು ಸಚಿವರಿಗೆ ಪತ್ರ ಬರೆದಿದ್ದು, ಇದನ್ನು ಆರ್.ಬಿ.ಐ ಒಪ್ಪಿಲ್ಲ ಎಂದು ಸಚಿವರು ಉತ್ತರವನ್ನೂ ಬರೆದಿದ್ದಾರೆ. ನಬಾರ್ಡ್ ಕೇಂದ್ರ ಸರ್ಕಾರದ ಕೆಳಗೆ ಕಾರ್ಯನಿರ್ವಹಿಸುತ್ತಿದೆ. ಕೇಂದ್ರ ಸಚಿವರೇ ಅಸಹಾಯಕತೆಯನು ವ್ಯಕ್ತಪಡಿಸಿದರೆ ಹೇಗೆ ಎಂದರು.

ನಬಾರ್ಡ್ ನಲ್ಲಿ ಕಳೆದ ವರ್ಷ 5600 ಕೋಟಿ ರೂ. ಗಳನ್ನು ಅಲ್ಪಾವಧಿ ಸಾಲಕ್ಕಾಗಿ ನೀಡಲಾಗಿತ್ತು. ಈ ವರ್ಷ 2340 ಕೊಟಿ ರೂ.ಗಳನ್ನು ನೀಡಿದ್ದಾರೆ. 3220 ಕೋಟಿ ರೂ.ಗಳನ್ನು ಕಡಿತಗೊಳಿಸಲಾಗಿದೆ. ಶೇ.58 ರಷ್ಟು ಕಡಿಮೆ ಮಾಡಿರುವುದು ರೈತರಿಗೆ ಮಾಡಿರುವ ದ್ರೋಹ. ನಬಾರ್ಡ್ ಶೇ.4.50 ಬಡ್ಡಿ ದರದಲ್ಲಿ ಸಾಲ ಕೊಡುತ್ತಾರೆ. 5 ವರ್ಷಗಳ ಅಂಕಿ ಅಂಶಗಳನ್ನು ತೆಗೆದು ನೋಡಿದರೆ ಸಾಲ ಕೊಡುವುದು ಯಾವಾಗಲೂ ಹೆಚ್ಚಾಗುತ್ತದೆಯೇ ಹೊರತು ಕಡಿಮೆಯಾಗುವುದಿಲ್ಲ. ಈ ಕುರಿತು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿ ವಿವರಿಸಲಾಗಿದೆ. ಆರು ವರ್ಷಗಳಿಂದ ಜಾಸ್ತಿ ಕೊಟ್ಟಿದ್ದು, ಈಗ ಕಡಿಮೆ ಮಾಡಿದರೆ ಹೇಗೆ? ಎಂದು ಪ್ರಶ್ನಿಸಿದರು.



**ಬಿಜೆಪಿಗೆ ಬಡವರ ಕುರಿತು ಯಾವ ಕಾಳಜಿಯೂ ಇಲ್ಲ** : ಸರ್ಕಾರಿ ನೌಕರರು, ತೆರಿಗೆದಾರರನ್ನು ಬಿಟ್ಟು ಬೇರೆ ಯಾರನ್ನೂ ಬಿಪಿಎಲ್ ಕಾರ್ಡಿನಿಂದ ತೆಗೆಯಬೇಡಿ ಎಂದು ಸೂಚಿಸಿರುವುದಾಗಿ ಸ್ಪಷ್ಟಪಡಿಸಿದ ಮುಖ್ಯಮಂತ್ರಿಗಳು, ಬಿಜೆಪಿಯವರು ರಾಜಕೀಯಕ್ಕಾಗಿ ಈ ವಿಚಾರವನ್ನು ಪ್ರಸ್ತಾಪಿಸುತ್ತಿದ್ದಾರೆ. ಆಹಾರ ಭದ್ರತಾ ಕಾಯ್ದೆಯನ್ನು ಜಾರಿಗೆ ತಂದಿದ್ದು ಯಾರು? . ಅದನ್ನು ಜಾರಿಗೆ ತಂದಿದ್ದು ಮಾಜಿ ಪ್ರಧಾನಿ ಮನ್ ಮೋಹನ್ ಸಿಂಗ್ ಅವರು. ರಾಜ್ಯಸಭೆಯಲ್ಲಿ ಮಂಡಿಸಿದಾಗ ಮುರಳಿ ಮನೋಹರ್ ಜೋಶಿ ಅವರು ಅದನ್ನು ವಿರೋಧಿಸಿ ಭಾಷಣ ಮಾಡಿದ್ದಾರೆ. ಅದು ಆಹಾರ ಭದ್ರತಾ ಕಾಯ್ದೆಯಲ್ಲ, ಮತ ಭದ್ರತಾ ಕಾಯ್ದೆ ಎಂದು ಕರೆದಿದ್ದರು . ಅಂದರೆ ಆಹಾರ ಭದ್ರತಾ ಕಾಯ್ದೆಗೆ ಅವರು ವಿರೋಧವಾಗಿದ್ದರು. ಇವರಿಗೆ ಮಾತನಾಡಲು ಯಾವ ನೈತಿಕ ಹಕ್ಕಿದೆ ? ಎಂದರು.

**ಬಿಪಿಎಲ್ ಕಾರ್ಡು ರೂಪಿಸಿರುವುದು ಬಡವರಿಗಾಗಿ** : ಕರ್ನಾಟಕದಲ್ಲಿ 7 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಟ್ಟಿದ್ದು ಸಿದ್ದರಾಮಯ್ಯನ ಸರಕಾರ. 7 ರಿಂದ 5 ಕೆ.ಜಿಗೆ ಇಳಿಸಿದ್ದು ಬಿ.ಎಸ್.ಯಡಿಯೂರಪ್ಪ. ಆರ್.ಅಶೋಕ್ ಅವರು ಸಚಿವ ಸಂಪುಟದಲ್ಲಿದ್ದರು. 2 ಕೆ.ಜಿಯನ್ನು ಕಡಿಮೆ ಮಾಡಿದಾಗ ಯಾಕೆ ಉಸಿರೆತ್ತಲಿಲ್ಲ. ಆಹಾರ ಭದ್ರತಾ ಕಾಯ್ದೆಯನ್ನು ವಿರೋಧಿಸಿದ ಬಿಜೆಪಿ ಬಡವರ ಬಗ್ಗೆ ಮಾತನಾಡುತ್ತಾರೆ. ಆಹಾರ ಪದಾರ್ಥಗಳನ್ನು ಉಚಿತವಾಗಿ ಕೊಡಬೇಕೆಂದು ಯೋಜನೆ ಜಾರಿಗೆ ತಂದಿದ್ದು ನಾವು. ಸರಕಾರಿ ನೌಕರರು, ತೆರಿಗೆದಾರರಿಗೆ ಬಿಪಿಎಲ್ ಕಾರ್ಡು ಕೊಡಬಾರದು ಎಂದು ಹೇಳಿದ್ದೇವೆ. ಈ ಯೋಜನೆ ಮಾಡಿರುವುದು ಬಡವರಿಗಾಗಿ. ಸರಕಾರಿ ನೌಕರರು ಬಿಪಿಎಲ್ ಗೆ ಅರ್ಹರೇ? ಎಂದು ಪ್ರಶ್ನಿಸಿದರು.

ಬಿಜೆಪಿ ಭರವಸೆ ನೀಡಿದ್ದ ಶೇ.10 ರಷ್ಟನ್ನೂ ಈಡೇರಿಸಿಲ್ಲ : ಬಿಜೆಪಿ ಮೂರು ವರ್ಷಗಳ ಅಧಿಕಾರದಲ್ಲಿದ್ದು ಏನೇನು ಮಾಡಿದ್ದಾರೆ? 2018 ರಲ್ಲಿ 600 ಭರವಸೆ ನೀಡಿ ಅದರಲ್ಲಿ ಎಷ್ಟು ಭರವಸೆಗಳನ್ನು ಈಡೇರಿಸಿದ್ದಾರೆ? 1 ಲಕ್ಷದವರೆಗೆ ಸಾಲ ಮನ್ನಾ ಮಾಡುತ್ತೇವೆ ಎಂದು ಮೊದಲನೇ ಸಚಿವ ಸಂಪುಟದಲ್ಲಿಯೇ ಹೇಳಿದ್ದರು ಮಾಡಿದ್ದಾರಾ? ಎಂದು ಪ್ರಶ್ನಿಸಿದರು. ಶೇ.10 ರಷ್ಟು ಭರವಸೆಗಳನ್ನೂ ಈಡೇರಿಸಿಲ್ಲ. ರಾಜಕಾರಣಕ್ಕಾಗಿ ಹೇಳುತ್ತಿದ್ದಾರೆ ಎಂದರು.

## ಗದಗ ಜಿಲ್ಲಾ ಮಹಿಳಾ ಕಾಂಗ್ರೆಸ್ ವತಿಯಿಂದ ದಿ. ಪ್ರಧಾನಿ ಇಂದಿರಾ ಗಾಂಧಿ ಜನ್ಮ ದಿನಾಚರಣೆ



ಗದಗ: ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಮಹಿಳಾ ಕಾಂಗ್ರೆಸ್ ಘಟಕದ ವತಿಯಿಂದ ಮಂಗಳವಾರ ದಿ. ಪ್ರಧಾನಿ ಇಂದಿರಾ ಗಾಂಧಿ ಅವರ 107ನೇ ಜನ್ಮದಿನವನ್ನು ಆಚರಿಸಲಾಯಿತು.

ಜಿಲ್ಲಾ ಮಹಿಳಾ ಕಾಂಗ್ರೆಸ್ ಘಟಕದ ಅಧ್ಯಕ್ಷೆ ನೀಲಮ್ಮ ಬೋಳನವರ ಮಾತನಾಡಿ, ಇಂದಿರಾ ಗಾಂಧಿ ಅವರು ಬಡವರಿಗಾಗಿ, ಮಹಿಳೆಯರಿಗಾಗಿ, ದೀನದಲಿತರ ಬಗ್ಗೆ ಕಾಳಜಿ ಹೊಂದಿದ್ದರು. ಅವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಬಡವರ, ಶ್ರಮಿಕರ ಕಲ್ಯಾಣಕ್ಕಾಗಿ ಶ್ರಮಿಸಿದರು. ಇಂದಿರಾ ಗಾಂಧಿ ಅವರು ಇಂದಿನ ಮಹಿಳೆಯರಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.

ಕೆಪಿಸಿಸಿ ಸದಸ್ಯೆ ಸುಜಾತಾ ದೊಡ್ಡಮನಿ, ಮುಖಂಡರಾದ ಮುಸ್ಕಾನ ಸಯ್ಯದ್, ಶಕುಂತಲಾ ಅಕ್ಕಿ, ಲಲಿತ ಗೊಳಗೊಳಕಿ, ವಹೀದ ಖಲೀಫ್, ಜಾನಕಿ ಮಲ್ಲಾಪೂರ, ಸಾವಿತ್ರಿ ಹೂಗಾರ, ಪರವೀನಬಾನು ಮುಲ್ಲಾ, ರೇಖಾ ಬದಿ, ಸಹೀರಾಬಾನು ಬಳ್ಳಾರಿ, ದ್ರಾಕ್ಷಾಯಿಣಿ ಹಾಸಿಲಕರ, ಗೀತಾ ಹಬೀಬ, ಶೋಭಾ ಕೆರಕಲಮಟ್ಟಿ, ರಾಜೇಶ್ವರಿ ಮೇಗೂರ, ಲಕ್ಷ್ಮೀ ಜಾಲಿಕಟ್ಟಿ, ಚೇತನಾ ಸೀತಾರಹಳ್ಳಿ ಸೇರಿ ಹಲವರಿದ್ದರು.

### ಚಿಲ್ಲಾಳೇಶ್ವರ ಶಾಲೆಯಲ್ಲಿ ಕನಕದಾಸ ಜಯಂತಿ ಆಚರಣೆ

## ಕನಕದಾಸರ ಕೀರ್ತನೆಗಳ ಅನುಸರಿಸಿ: ನಾಗರತ್ನ

**ಗದಗ:** ಜಾತೀಯತೆ ತೊಲಗಿಸಿ, ಸಮಾನತೆ ಸಾರಲು ವಿಶ್ವಕ್ಕೆ ಸಂದೇಶ ಸಾರಿದ ಕನಕದಾಸರ ಕೀರ್ತನೆಗಳನ್ನು ನಾವೆಲ್ಲರೂ ಕೇಳಿ ಅವುಗಳನ್ನು ಜೀವನದಲ್ಲಿ ಪಾಲಿಸಿ, ಅನುಸರಿಸಬೇಕು ಎಂದು ಶ್ರೀಮತಿ ನಾಗರತ್ನ ಕುಸುಗಲ್ ಹೇಳಿದರು.

ನಗರದ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ತೋಂಟದ ಚಿಲ್ಲಾಳೇಶ್ವರ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಆಯೋಜಿಸಿದ್ದ ಭಕ್ತ ಕನಕದಾಸರ ಜಯಂತಿಯಲ್ಲಿ ಅವರು ಮಾತನಾಡಿದರು.



ಕನಕದಾಸರ ಹುಟ್ಟು, ಅವರ ಬಾಲ್ಯ, ಅವರ ಸಮಗ್ರ ಜೀವನ ಚರಿತ್ರೆಯನ್ನು ಮತ್ತು ಅವರ ದೈವ ಭಕ್ತಿಯನ್ನು ಉದಾಹರಣೆಗಳ ಮೂಲಕ ವಿವರಿಸಿದರು.

ಇನ್ನೋರ್ವ ಅತಿಥಿ, ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್.ಟಿ ಕುರಹಟ್ಟಿ ಅವರು ಮಾತನಾಡಿ, 'ಕುಲ–ಕುಲವೆಂದು ಹೊಡೆದಾಡದಿರಿ, ನಿಮ್ಮ ಕುಲದ ನೆಲೆಯೇನಾದರೂ ಬಲ್ಲಿರಾ' ಎನ್ನುವ ಕನಕದಾಸರ ಕೀರ್ತನೆಯನ್ನು ಮಕ್ಕಳಿಗೆ ತಿಳಿಸಿಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ನಾಗರತ್ನ ಕುಸುಗಲ್ ಹಾಗೂ ಶ್ರೀಮತಿ ಮಾಧವಿ ಪಲ್ಲೇದ ಶಿಕ್ಷಕಿಯರು ಭಕ್ತ ಕನಕದಾಸರ ಕೀರ್ತನೆಗಳನ್ನು ಹಾಡಿದರು.

ವಿದ್ಯಾರ್ಥಿಗಳಾದ ಕಾರ್ತಿಕ ರೋಣದ ಮತ್ತು ಮಲ್ಲಿಕಾರ್ಜುನ ಇಟಗಿ ಭಕ್ತ ಕನಕದಾಸರ ಕುರಿತು ಭಾಷಣವನ್ನು ಮಾಡಿದರು. ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲ ಗುರುಮಾತೆಯರು ಹಾಜರಿದ್ದರು.

ಕುಮಾರಿ ಸೋನಾಕ್ಷಿ ಪವಾರ ಹಾಗೂ ಸಂಗಡಿಗರು ವಚನ ಪ್ರಾಥನೆ ಮಾಡಿದರು. ಕುಮಾರಿ ಲಕ್ಷ್ಮೀ ಪಟ್ಟಣ ಕಾರ್ಯಕ್ರಮವನ್ನು ನಿರೂಪಣೆ ಮಾಡಿದರು. ಕುಮಾರಿ ಅಕ್ಷತಾ ಭಾಂಡಗೆ ಸ್ವಾಗತಿಸಿದರು. ಕುಮಾರಿ ಅಪೂರ್ವ ಮುರ್ಲಾಪೂರ ವಂದಿಸಿದರು.

### ಚೂರು–ಪಾರು

## ನ.೨೭ ರಂದು ವಿಕಲಚೇತನರಿಗೆ ವಿವಿಧ ಕ್ರೀಡಾಕೂಟಗಳು

ಕೊಪ್ಪಳ : ಕೊಪ್ಪಳ ಜಿಲ್ಲೆಯಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ನಿಮಿತ್ತ ಜಿಲ್ಲೆಯ ವಿಕಲಚೇತನರಿಗೆ ವಿವಿಧ ಕ್ರೀಡಾಕೂಟಗಳನ್ನು ನವೆಂಬರ 27ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಲೂಕು ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ವಿಕಲಚೇತನರು ಈ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಳಿಯಾಳ ಆರ್ಸೆಟಿ ಸಂಸ್ಥೆ: ವಿವಿಧ ತರಬೇತಿಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ : ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್ಸೆಟಿ ಸಂಸ್ಥೆಯಿಂದ ಡಿಸೆಂಬರ್ ತಿಂಗಳಲ್ಲಿ ಜೆ.ಸಿ.ಬಿ ಚಾಲನಾ ತರಬೇತಿ ಮತ್ತು ಜನೇವರಿ ತಿಂಗಳಲ್ಲಿ ಟ್ರಾವೆಲ್ ಮತ್ತು ಟೂರಿಸ್ಟ ಗೈಡ್ ಹಾಗೂ ಫೆಬ್ರವರಿ ತಿಂಗಳಲ್ಲಿ ಮೊಬೈಲ್ ಫೋನ್ ರಿಪೇರಿ ಮತ್ತು ಸರ್ವಿಸಿಂಗ್ ಉಚಿತ ತರಬೇತಿಗಳನ್ನು ಉಚಿತವಾಗಿ ನೀಡಲಾಗುತ್ತಿದ್ದು, ಆಸಕ್ತ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕರಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ನಿರುದ್ಯೋಗಿ ಯುವಕ ಮತ್ತು ಯುವತಿಯರಿಗಾಗಿ ಡಿಸೆಂಬರ್ ತಿಂಗಳಲ್ಲಿ ಜೆ.ಸಿ.ಬಿ ಚಾಲನಾ ತರಬೇತಿ ಮತ್ತು ಜನೇವರಿ ತಿಂಗಳಲ್ಲಿ ಟ್ರಾವೆಲ್ ಮತ್ತು ಟೂರಿಸ್ಟ ಗೈಡ್ ಹಾಗೂ ಫೆಬ್ರವರಿ ತಿಂಗಳಲ್ಲಿ ಮೊಬೈಲ್ ಫೋನ್ ರಿಪೇರಿ ಮತ್ತು ಸರ್ವಿಸಿಂಗ್ ತರಬೇತಿಗಳನ್ನು ನೀಡಲಾಗುತ್ತದೆ. ಈ ತರಬೇತಿಗಳು ಸ್ವ–ಉದ್ಯೋಗ ಪ್ರಾರಂಭಿಸಿ, ಸ್ವಾವಲಂಬಿ ಜೀವನ ನಡೆಸಲು ಅನುಕೂಲವಾಗಲಿವೆ. ತರಬೇತಿಯು ಊಟ ಹಾಗೂ ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುತ್ತದೆ. ತರಬೇತಿಯಲ್ಲಿ ಕೌಶಲ್ಯ, ಸಾಧನಾ ಪ್ರೇರಣಾ ತರಬೇತಿ , ಉದ್ಯಮಶೀಲತೆಯ ದಕ್ಷ ಗುಣಗಳು, ಹೊಸ ಉದ್ಯಮದ ಸ್ಥಾಪನೆ ಬಗ್ಗೆ ಮಾಹಿತಿ ಮಾರುಕಟ್ಟೆಯ ಸಮೀಕ್ಷೆ, ಮಾರಾಟದ ತಂತ್ರಗಳು, ಯಶಸ್ವಿ ಉದ್ಯಮಗಳಿಂದ ಅನುಭಬಮವ ಹಂಚಿಕೆ , ಕ್ಷೇತ್ರ ಭೇಟಿ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ–ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳ ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ನೀಡಲಾಗುತ್ತದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ನವೆಂಬರ್ 30 ಕೊನೆ ದಿನವಾಗಿದ್ದು. ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ, ಆರ್ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ವಿಳಾಸಕ್ಕೆ ಅಥವಾ ಮೊ.ಸಂ: 821736973, 9483485489, 9482188780 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

### ಅಂತರಾಷ್ಟ್ರೀಯ ದತ್ತು ಮಾಸಾಚರಣೆ

## ದತ್ತು ಸ್ವೀಕಾರ ಕುರಿತು ಜನರಲ್ಲಿ ಜಾಗೃತಿ ಅವಶ್ಯ



**ಗದಗ** : ಅನಾಥ ಮಕ್ಕಳನ್ನು ದತ್ತು ಸ್ವೀಕಾರ ಮಾಡಲು ಇಚ್ಛಿಸುವರು ದತ್ತು ಸ್ವೀಕಾರ ಕೇಂದ್ರದಲ್ಲಿ ನೊಂದಾಯಿಸಿಕೊಂಡು ಅನಾಥ ಮಕ್ಕಳನ್ನು ದತ್ತು ಪಡೆಯುವ ವ್ಯವಸ್ಥೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಬುಧವಾರ ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು,ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಪೊಲೀಸ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಹಮ್ಮಿಕೊಂಡ ಜಾಥವನ್ನು ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡ್ರ ಚಾಲನೆ ನೀಡಿದರು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮಾತನಾಡಿ ದತ್ತು ಮಾಸಾಚರಣೆಯನ್ನು ಪ್ರತಿ ವರ್ಷ ನವೆಂಬರ್ ತಿಂಗಳಲ್ಲಿ ಆಚರಿಸುತ್ತಾರೆ, ಮಕ್ಕಳಿಲ್ಲದ ಪೋಷಕರು ದತ್ತು ಸ್ವೀಕಾರ ಕೇಂದ್ರದಲ್ಲಿ ನೊಂದಾಯಿಸಿಕೊಂಡು ಅನಾಥ ಮಕ್ಕಳನ್ನು ಪಡೆಯಬಹುದು ಎಂಬ ಮಾಹಿತಿ ಇನ್ನೂ ಸಾಕಷ್ಟು ಜನಕ್ಕೆ ಗೊತ್ತಾಗಬೇಕು ಆ ನಿಟ್ಟಿನಲ್ಲಿ ಈ ಜಾಥದ ಮೂಲಕ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್.ಶಿವನಗೌಡ್ರ ಅವರು ಮಾತನಾಡಿ ದತ್ತು ಸ್ವೀಕಾರದ ಕುರಿತು ಜನರಿಗೆ ಮಾಹಿತಿ ನೀಡಿವ ಸಲುವಾಗಿ ನವೆಂಬರ್ ತಿಂಗಳಲ್ಲಿ ಅಂತರಾಷ್ಟ್ರೀಯ ದತ್ತು ಮಾಸಾಚಾರಣೆ ಎಂದು ಆಚರಿಸಲಾಗುತ್ತದೆ, ತಂದೆ ತಾಯಿ ಅವರು ಮಕ್ಕಳನ್ನು ಹೆತ್ತು ಬೀದಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಮಕ್ಕಳನ್ನು ಬಿಟ್ಟು ಹೋದಾಗ ಅಂತಹ ಮಕ್ಕಳು ಅನಾಥರಾಗುತ್ತಾರೆ.

ಮಕ್ಕಳನ್ನು ಹೊಂದಿಲ್ಲದವರು ದತ್ತು ಸ್ವೀಕಾರ ಕೇಂದ್ರದಲ್ಲಿ ನೊಂದಾಯಿಸಿಕೊಂಡು ಈ ಅನಾಥ ಮಕ್ಕಳನ್ನು ಲಾಲನೆ ಪೋಷಣೆ ಮಾಡಬಹುದಾಗಿದೆ.ಇನ್ನೂ ಕೇಲವು ಸಂದರ್ಭಗಳಲ್ಲಿ ಕೆಲವು ಮಕ್ಕಳ ಪೋಷಕರು ಅನಾರೋಗ್ಯದಿಂದ ಅಥವಾ ನಾನಾ ಕಾರಣಗಳಿಂದಾಗಿ ಮಕ್ಕಳನ್ನು ಸಾಕುವುದಕ್ಕೆ ಆಗುತ್ತಿರುವುದಿಲ್ಲ ಅಂತಹ ಪ್ರಸಂಗಗಳಲ್ಲಿ ತಾತ್ಕಾಲಿಕವಾಗಿ ಮಗುವನ್ನು ಪೋಷಕತ್ವದಲ್ಲಿ ಇಟ್ಟುಕೊಂಡು ಮೂಲ ಕುಟುಂಬದ ಪರಿಸ್ಥಿತಿ ಸುಧಾರಿಸಿದ ಮೇಲೆ ಮರಳಿ ಮಕ್ಕಳನ್ನು ಅಲ್ಲಿಗೆ ಕಳುಹಿಸುವ ವ್ಯವಸ್ಥೆ ಇರುತ್ತದೆ.ಎಷ್ಟೋ ಸಂದರ್ಭದಲ್ಲಿ ಮಗುವಿಗೆ ಕುಟುಂಬದ ಅವಶ್ಯಕತೆ ಇರುತ್ತದೆ,ಹಾಗೂ ಪೋಷಕರಿಗೆ ಮಗು ಬೇಕಾಗಿರುತ್ತದೆ ಹಾಗಾಗಿ ಈ ವ್ಯವಸ್ಥೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಿ ಜನರಲ್ಲಿ ಜಾಗೃತಿ ಮೂಡಿಸಿದಾಗ ಅನಾಥ ಮಕ್ಕಳ ಹಾಗೂ ಮಕ್ಕಳಿಲ್ಲದವರಿಗೆ ಸಹಾಯಕವಾಗುತ್ತದೆ ಎಂದು ಹೇಳಿದರು.

ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಜಾಥಾ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಟಿಪ್ಪು ಸುಲ್ತಾನ್ ವೃತ್ತದವರೆಗೆ ಸಂಚರಿಸಿ ಮಗು ತೊಟ್ಟಿಲಲ್ಲಿ ಬೆಳಗಬೇಕಾದ ಬೆಳಕು.ತೊಟ್ಟಿಯಲ್ಲಿ ಕೊನೆಯಾಗದಿರಲಿ ಅದರ ಬದುಕು,ಮಕ್ಕಳ ರಕ್ಷಣೆ ನಮ್ಮೆಲ್ಲರ ಹೊಣೆ, ಮಕ್ಕಳು ಹೊರೆಯಲ್ಲ ಮಾರುವುದು ಸರಿಯಲ್ಲ,ನೀನೊಂದು ಮಗುವಮ್ಮಾ ನಿನಗೊಂದು ಮಗುವೇ, ಇಂದಿನ ಮಕ್ಕಳ ಇಂದಿನ ಪ್ರಜೆಗಳು, ಕಾನೂನು ಬಾಹಿರ ದತ್ತು ಆಗುವುದಿಲ್ಲ ನಿಮ್ಮ ಸ್ವತ್ತು ಎಂದು ಪೋಷಣೆಗಳನ್ನು ಕೂಗಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ನಿರೂಪಣಾಧಿಕಾರಿ ಶ್ರೀಮತಿ ರಾಧ ಮನ್ನೂರು,ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರು,ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಜಯದೇವಿ ಕವಲೂರು,ಸದಸ್ಯರಾದ ಬಸವರಾಜ ಸಂಶಿ,ಡಿ,ಐ ಈರಗಾರ,ಶ್ರೀಮತಿ ಎಸ್ ಆರ್ ಬ್ಯಾಹಟ್ಟಿ,ಬಾಲಕರ ಬಾಲಮಕದಿರ ಅಧೀಕ್ಷಕರಾದ ಗಿರೀಜಾ ದೊಡ್ಡಮನಿ, ಹಾಜರಿದ್ದರು.

### ಸಹಕಾರ ಸಚಿವ ರಾಜಣ್ಣರಿಂದ

## ಮಲ್ಲಿಕಾರ್ಜುನ ಮಾಡಮ್ಮನವರಗೆ ಸನ್ಮಾನ



ಬೆಳಗಾವಿ: ರಾಜ್ಯ ಮಟ್ಟದ 71ನೇ ಸಹಕಾರಿ ಸಪ್ತಾಹ ಸಮಾರೋಪ ಸಮಾರಂಭದಲ್ಲಿ ಸಮೀಪದ ಮಾರಿಹಾಳ ಗ್ರಾಮದ ವಿವಿಧೋದ್ದೇಶ ಸಹಕಾರಿ ಸಂಘವನ್ನು ರಾಜ್ಯದಲ್ಲಿ ಉತ್ತಮ ಸಹಕಾರಿ ಸಂಘವೆಂದು ಗುರತಿಸಿ ರಾಜ್ಯ ಸಹಕಾರಿ ಸಚಿವ ರಾಜಣ್ಣ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಮಾದಮ್ಮನವರ ಅವರನ್ನು ಸತ್ಕರಿಸಿ ಸ್ಮರಣಿಕೆ ನೀಡಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಮಾಹದೇವ ಧನಾಯಿ, ಸಂಘದ ಮುಖ್ಯಕಾರ್ಯದರ್ಶಿ ರುದ್ರಪ್ಪ ಚಂದನ್ನವರ, ಗುರುನಾಥ ಅಕ್ಕತಂಗೆರಹಳ್ಳ,ಶಂಕರಗೌಡ ನಿರ್ವಾಣಿ,ರಾಮ ಹುಣ್ಣುರ, ಸುಗಂಧಾ ಪುಜಾರ, ಸವಿತಾ ಧರ್ಮೋಜಿ, ಸಂಜಯ ಚಾಟೆ, ವಿನೋದ ಚೌಹಾನ, ಸಮೀರ ಮುಲ್ಲಾ, ಗಿರಿಜಾ ಪಾಟೀಲ, ಕಲಗೌಡ ಪಾಟೀಲ ಜಿಲ್ಲೆಯ ಶಾಸಕರು, ರಾಜ್ಯದ ಸಹಕಾರಿಗಳು ಇದ್ದರು.

ಉತ್ತಮ ಸಹಕಾರಿ ಸಂಘದ ಆಯ್ಕೆಗೆ ಮಾಜಿ ಶಾಸಕ ಸಂಜಯ ಪಾಟೀಲ, ಜಿಲ್ಲಾ ಬಿಜೆಪಿ ಅಧ್ಯಕ್ಷ ಸುಭಾಷ ಪಾಟೀಲ, ಡಿಸಿಸಿ ಬ್ಯಾಂಕ್ ನಿರ್ದೇಶಕ ರಾಜು ಅಂಕಲಗಿ, ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯರಾದ ಎಫ್.ಎಸ್.ಸಿದ್ದನಗೌಡರ ಮಾರಿಹಾಳ, ಕರಡಿಗುದ್ದಿ ಸುಳೆಭಾಂವಿ ಯದ್ದಲಭಾವಿಂಹಟ್ಟಿ ಗ್ರಾಮದ ರೈತರು ಹರ್ಷವ್ಯಕ್ತಪಡಿಸಿದ್ದಾರೆ.

# ಲಕ್ಕುಂಡಿಯಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆ ಅಭಿಯಾನ

ಗದಗ : ಜಿಲ್ಲೆಯ ಲಕ್ಕುಂಡಿ ಗ್ರಾಮವು ಐತಿಹಾಸಿಕ ಪಾರಂಪರಿಕ ಪ್ರದೇಶವಾಗಿದ್ದು ಈ ಪಾರಂಪರಿಕ ಗ್ರಾಮದಲ್ಲಿ ಸಾಕಷ್ಟು ಶಿಲೆಗಳು, ಶಾಸನಗಳು ಮತ್ತು ಪ್ರಾಚ್ಯಾವಶೇಷಗಳು ಗ್ರಾಮದಲ್ಲಿ ಹಾಗೂ ಗ್ರಾಮಸ್ಥರ ಮನೆಗಳಲ್ಲಿ ಲಭ್ಯವಿರುತ್ತವೆ.

ಐತಿಹಾಸಿಕ ಲಕ್ಕುಂಡಿಯನ್ನು ವಿಶ್ವ ಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆ ಪಟ್ಟಿಗೆ ಸೇರಿಸಿ ಜಾಗತಿಕ ಮಟ್ಟದಲ್ಲಿ ಗುರುತಿಸುವ ಕಾರ್ಯ ಪರಿಣಾಮಕಾರಿಯಾಗಬೇಕು. ಈ ನಿಟ್ಟಿನಲ್ಲಿ ಪೂರಕ ಚಟುವಟಿಕೆಗಳನ್ನು ಕೈಗೊಳ್ಳುವ ಸಲುವಾಗಿ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಇಂತಹ ಅವಶೇಷಗಳನ್ನು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿಪ್ರಾಧಿಕಾರ ಜೊತೆಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಲಕ್ಕುಂಡಿ ಗ್ರಾಮದಲ್ಲಿ 10 ತಂಡಗಳನ್ನು ಅಭಿಯಾನದ ರೂಪದಲ್ಲಿ ಗ್ರಾಮದ ಮನೆ, ಕಟ್ಟೆ, ತಿಪ್ಪಿ, ಒಳಗಟ್ಟಿ ಇತರೆಡೆಗಳಲ್ಲಿರುವ ಪ್ರಾಚ್ಯಾವೇಶಗಳನ್ನು ಸಂಗ್ರಹಿಸಲು ನಿರ್ದೇಶಿಸಲಾಗಿದೆ.

ಈ ನಿಟ್ಟಿನಲ್ಲಿ ನವೆಂಬರ್ 22 ರಿಂದ 24 ರವರೆಗೆ ಮೂರು ದಿನಗಳ ಕಾಲ ಲಕ್ಕುಂಡಿ ಪಾರಂಪರಿಕ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಪ್ರಾಚ್ಯಾವಶೇಷಗಳ (ಸಂಗ್ರಹಣಾ ಅಭಿಯಾನವನ್ನು) ಅನ್ವೇಷಣೆಯನ್ನು ಹಮ್ಮಿಕೊಳ್ಳಲಾಗಿದೆ.

ತಂಡಗಳ ವಿವರ ಇಂತಿದೆ:

ವಾರ್ಡ ಸಂಖ್ಯೆ 5 ಕರಿಯವರ ಓಣಿ, ತಹಶೀಲ್ದಾರರ ಓಣಿ ವ್ಯಾಪ್ತಿಯಲ್ಲಿ ರಾಜ್ಯದ ಕಾನೂನು, ನ್ಯಾಯ ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಮಟ್ಟದ ಸಲಹಾ ಸಮಿತಿ ಅಧ್ಯಕ್ಷರಾದ ಎಚ್.ಕೆ.ಪಾಟೀಲ ಅವರು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಲಕ್ಕುಂಡಿ ಪಾರಂಪರಿಕ ಪ್ರದೇಶ .ಪ್ರಾಧಿಕಾರದ ರಾಜ್ಯ ಮಟ್ಟದ ಸಲಹಾ ಸಮಿತಿಯ ಸದಸ್ಯರಾದ ಸಿದ್ಧಲಿಂಗೇಶ್ವರ ಪಾಟೀಲ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಡಾ.ಶರಣು ಗೋಗೇರಿ, ಗದಗ ಗ್ರಾಮೀಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ವಿ.ವಿ.ನಡುವಿನಮನಿ ಹಾಗೂ ಗ್ರಾಮ ಪಂಚಾಯತ್ ಸದಸ್ಯರುಗಳಾದ ಪೀರಸಾಬ ನದಾಫ್ , ಶ್ರೀಮತಿ ರಜಿಯಾಬೇಗಂ ಆರ್ ತಹಶೀಲ್ದಾರ, ಶ್ರೀಮತಿ ಅನ್ನಪೂರ್ಣ ರಿತ್ತಿ ಅವರನ್ನು ತಂಡವು ಒಳಗೊಂಡಿದೆ.

ವಾರ್ಡ ಸಂಖ್ಯೆ 9 , ಕುಂಬಾರ ಓಣಿ ಕಮತರ ಓಣಿ ಮತ್ತು ಗೌರಿ ಓಣಿ ವ್ಯಾಪ್ತಿಯಲ್ಲಿ ನರಗುಂದ ಶಾಸಕರಾದ ಸಿ.ಸಿ.ಪಾಟೀಲ ಅವರು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಎಸ್.ಎಸ್.ನೀಲಗುಂದ ಹಾಗೂ ಗ್ರಾಮ ಪಂಚಾಯತ್ ಸದಸ್ಯರಾದ ಶ್ರೀಮತಿ ಮಂಜುಳಾ ಮೆಣಸಿನಕಾಯಿ, ಲಲಿತಾ ಗದಗಿನ, ವೀರಣ್ಣ ಮಲ್ಲಪ್ಪ ಚಕ್ರಸಾಲಿ, ಮಹಾಂತೇಶ ಕಮತರ, ಶಿವಪ್ಪ ಬಳಿಗೇರ ಅವರನ್ನು ತಂಡವು ಒಳಗೊಂಡಿದೆ.

ವಾರ್ಡ ಸಂಖ್ಯೆ 2 ರ ಅಂಬಕ್ಕಿಯವರ ಓಣಿ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ಸಲ್ಮಾ ಫಾಹೀನ್ ಅವರು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ ಮೀನಾ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್ ಹಾಗೂ ಗ್ರಾಮ ಪಂಚಾಯತ್ ಸದಸ್ಯರಾದ ರಮೇಶ ಸಿ ಭಾವಿ , ಶ್ರೀಮತಿ ಅನಸವ್ವ ಅಂಬಕ್ಕಿ ಅವರನ್ನು ತಂಡವು ಒಳಗೊಂಡಿದೆ.



ವಾರ್ಡ 8 ರ ಅನ್ನದಾನೇಶ್ವರ ನಗರ, ಕುರುಬರ ಓಣಿ ಮತ್ತು ಬಜಾರ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕರಾದ ಕೆ.ವಿ.ರಾಜೇಂದ್ರ ಅವರು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ , ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ ಹಾಗೂ ಗ್ರಾಮ ಪಂಚಾಯತ್ ಸದಸ್ಯರಾದ ವಿರುಪಾಕ್ಷಪ್ಪ ಬೆಟಗೇರಿ, ಶ್ರೀಮತಿ ನೀಲವ್ವ ಬಂಡಿ, ಶ್ರೀಮತಿ ಶಾಂತವ್ವ ಮಣಕವಾಡ ಅವರನ್ನು ತಂಡವು ಒಳಗೊಂಡಿದೆ.

ವಾರ್ಡ ಸಂಖ್ಯೆ 3 ಗೊಲ್ಲರ ಓಣಿ ಕಲ್ಮೇಶ್ವರ ನಗರ, ಕೊರವರ ಓಣಿ ವ್ಯಾಪ್ತಿಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಉಪವಿಭಾಗಾಧಿಕಾರಿ ಎಂ.ಗಂಗಪ್ಪ, ತಹಶೀಲ್ದಾರರಾದ ಶ್ರೀನಿವಾಸ ಕುಲಕರ್ಣಿ ಹಾಗೂ ಗ್ರಾಮ ಪಂಚಾಯತ್ ಸದಸ್ಯರಾದ ಶ್ರೀಮತಿ ರೋಷನಬಿ ನದಾಫ್ , ಬಸವರಾಜ ಹಟ್ಟಿ, ಕುಬೇರಪ್ಪ ಬೆಂತೂರ ಅವರನ್ನು ತಂಡವು ಒಳಗೊಂಡಿದೆ.

ವಾರ್ಡ ಸಂಖ್ಯೆ 6 ಮಲ್ಲಿಕಾರ್ಜುನ ಗುಡಿ ಓಣಿ , ಯರಗುಡಿಯವರ ಓಣಿ ಮತ್ತು ಬಜಾರ್ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾದಿಕಾರಿ ಭರತ್ ಎಸ್ ಅವರು ತಂಡದ ಮುಖ್ಯಸ್ಥರಾಗಿದ್ದು , ಸಂಚಾಲಕರಾಗಿ ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಹಾಗೂ ಗ್ರಾಮ ಪಂಚಾಯತ್ ಸದಸ್ಯರಾದ ಶ್ರೀಮತಿ ಅಮೀನಾ ಹುಬ್ಬಳ್ಳಿ ಹಾಗೂ ಬಸವರಾಜ ಯಲಿಶಿರುಂದ ಅವರನ್ನು ತಂಡವು ಒಳಗೊಂಡಿದೆ.

ವಾರ್ಡ ಸಂಖ್ಯೆ 1 ಗೌಡ ಓಣಿ ವ್ಯಾಪ್ತಿಯಲ್ಲಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಅವರು ತಂಡದ ಮುಖ್ಯಸ್ಥರಾಗಿದ್ದು ಹೆಚ್ಚುವರಿ ಪೊಲೀಸ ವರಿಷ್ಠಾದಿಕಾರಿ ಎಂ.ಬಿ.ಸಂಕದ ಹಾಗೂ ಗ್ರಾ.ಪಂ. ಸದಸ್ಯರಾದ ಪುಷ್ಪಲತಾ ಪಾಟೀಲ, ಸುಮಿತ್ರವ್ವ ರೋಣದ , ರೇವಣಸಿದ್ಧಪ್ಪ ಮುಳಗುಂದ ಅವರನ್ನು ತಂಡವು ಒಳಗೊಂಡಿದೆ.

ವಾರ್ಡ ಸಂಖ್ಯೆ 7 ಕುರುಬರ ಓಣಿ ವ್ಯಾಪ್ತಿಯಲ್ಲಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜು ಅವರು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರಡಿ , ಪುರಾತತ್ವ ಮತ್ತುಸಂಗ್ರಹಾಲಯ ಪರಂಪರೆ ಇಲಾಖೆಯ ಕ್ಯೂರೇಟರ್ ರಾಜಾರಾಮ್ ಹಾಗೂ ಗ್ರಾ.ಪಂ. ಸದಸ್ಯರಾದ ಶ್ರೇಯಾ ಕಟಿಗಾರ, ಹನುಮಂತಪ್ಪ ಬಂಗಾರಿಯವರ, ಲಕ್ಷ್ಮಣ ಗುಡಸಲವಾಸಿ ಅವರನ್ನು ತಂಡವು ಒಳಗೊಂಡಿದೆ.

ವಾರ್ಡ ಸಂಖ್ಯೆ 4 ನದಾಫ್ ಗಲ್ಲಿ ,ಬಿನ್ನಾಳ ಬಸವೇಶ್ವರ ಓಣಿ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ ಕುಲಪತಿ ಗಳು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಗ್ರಾ. ಪಂ.ರಾ. ವಿಶ್ವ ವಿದ್ಯಾಲಯದ ವಿಶೇಷಾಧಿಕಾರಿ ಉಮೇಶ ಬಾರಕೇರ ಹಾಗೂ ಗ್ರಾ.ಪಂ. ಸದಸ್ಯರಾದ ಫಕೀರವ್ವ ಬೇಲೇರಿ, ಚಂದ್ರವ್ವ ರಿತ್ತಿ ಅವರನ್ನು ತಂಡವು ಒಳಗೊಂಡಿದೆ. ವಾರ್ಡ ಸಂಖ್ಯೆ 10 ಕಟಗಿಯವರ ಓಣಿ ಹಿರೇಹಾಳರವರ ಓಣಿ, ಅನ್ನದಾನೇಶ್ವರ ನಗರ ವ್ಯಾಪ್ತಿಯಲ್ಲಿ ಲಕ್ಕುಂಡಿ ಗ್ರಾಮ ಪಂಚಾಯತ್ ಅಧ್ಯಕ್ಷರು ತಂಡದ ಮುಖ್ಯಸ್ಥರಾಗಿರುತ್ತಾರೆ. ಸಂಚಾಲಕರಾಗಿ ಲಕ್ಕುಂಡಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರಾಜಕುಮಾರ ಭಜಂತ್ರಿ, ಹಾಗೂ ಗ್ರಾ.ಪಂ. ಸದಸ್ಯರಾದ ಗಂಗವ್ವ ಪೂಜಾರ, ಈರವ್ವ ಛಬ್ಬರಭಾವಿ, ರುದ್ರಪ್ಪ ಮುಸ್ಕಿನಭಾವಿ ಅವರನ್ನು ತಂಡವು ಒಳಗೊಂಡಿದೆ.

ಪ್ರತಿ ತಂಡಗಳಿಗೆ ಪ್ರತ್ಯೇಕವಾಗಿ ಇತಿಹಾಸ ಉಪನ್ಯಾಸಕರುಗಳನ್ನು ಹಾಗೂ ಪ್ರವಾಸಿ ಮಿತ್ರರನ್ನು ನಿಯೋಜಿಸಲಾಗಿದೆ.

ನವೆಂಬರ್ 22 ರಿಂದ 24 ರವರೆಗೆ ಜರುಗುವ ಲಕ್ಕುಂಡಿ ಪಾರಂಪರಿಕ ಪ್ರದೇಶ ವ್ಯಾಪ್ತಿಯಲ್ಲಿ ಪ್ರಾಚ್ಯಾವಶೇಷಗಳ ಸಂಗ್ರಹಣಾ ಅಭಿಯಾನದ ವೇಳಾಪಟ್ಟಿ ಈ ಕೆಳಗಿನಂತಿದೆ:

ನವೆಂಬರ್ 22 ರಂದು ಬೆ 9.30 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಪ್ರಾಚ್ಯಾವಶೇಷಗಳನ್ನು ಸಂಗ್ರಹಿಸುವ ಕುರಿತು ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ , ಸ್ವಯಂ ಸೇವಕರುಗಳಿಗೆ ಹಾಗೂ ತಂಡದ ಸದಸ್ಯರುಗಳು ತರಬೇತಿಯಲ್ಲಿ ಭಾಗವಹಿಸುವುದು.

ನವೆಂಬರ್ 22 ರಂದು ಮಧ್ಯಾಹ್ನ 3 ಗಂಟೆಗೆ ಲಕ್ಕುಂಡಿ ಗ್ರಾಮದ ಕ್ಷೇತ್ರ ಕಾರ್ಯಕ್ಕೆ ತೆರಳಿ ತಮಗೆ ವಹಿಸಿರುವ ಸ್ಥಳ ಹಾಗೂ ಲಭ್ಯವಿರಬಹುದಾದ ಪ್ರಾಚ್ಯಾವಶೇಷಗಳನ್ನು ಗುರುತಿಸುವುದು. ನವೆಂಬರ್ 23 ರಂದು ಲಕ್ಕುಂಡಿ ಗ್ರಾಮದಲ್ಲಿ ಪ್ರಾಚ್ಯವಸ್ತುಗಳ ಸಂಗ್ರಹಣೆ ಮತ್ತು ಶೇಖರಣೆ ಕುರಿತು ಮನೆ–ಮನೆ ಸಮೀಕ್ಷೆ ಕೈಗೊಳ್ಳುವುದು ಹಾಗೂ ಸಮೀಕ್ಷೆಯ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ಕ್ರೂಢೀಕರಿಸುವುದು.

ನವೆಂಬರ್ 24 ರಂದು ಲಕ್ಕುಂಡಿ ಗ್ರಾಮದಲ್ಲಿ ಅಭಿಯಾನದ ತಂಡದವರೊಂದಿಗೆ ಹಿಂದಿನ ದಿನ ಸಮೀಕ್ಷೆಯಲ್ಲಿ ಗುರುತಿಸಲಾದ ಪ್ರಾಚ್ಯಾವಶೇಷಗಳನ್ನು ಸಂಗ್ರಹಿಸುವುದು.

ನವೆಂಬರ್ 22 ರಿಂದ 24 ರವರೆಗೆ ಜರುಗುವ ಪ್ರಾಚ್ಯಾವಶೇಷಗಳ ಅನ್ವೇಷಣೆ ಅಭಿಯಾನವನ್ನು ತಂಡದವರು ಪರಸ್ಪರ ಸಮನ್ವಯತೆ ಸಾಧಿಸಿ ಸಂಪೂರ್ಣ ಯಶಸ್ವಿಗೊಳಿಸಲು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ.

# ಬರೀ ಹೃದ್ರೋಗಿಗಳಿಗೆ ಮಾತ್ರವಲ್ಲ ಈ ಕಾಯಿಲೆ ಇರುವವರಿಗೂ ಆವಕಾಡೋ ಒಳ್ಳೆಯದು



ಮಾರುಕಟ್ಟೆಯಲ್ಲಿ ಸಿಗುವ ಆವಕಾಡೊ ಸಿಕ್ಕಾಪಟ್ಟೆ ದುಬಾರಿ. ಆದ–'ರೂ ಇದು ಆರೋಗ್ಯಕ್ಕೆ ಹೆಚ್ಚಿನ ಪ್ರಯೋಜನಗಳನ್ನು ಹೊಂದಿದೆ. ನಮ್ಮ ಜೀರ್ಣಾಂಗ ವ್ಯವಸ್ಥೆಯನ್ನು ಕೂಡ ಸುಧಾರಿಸುತ್ತದೆ. ಅವು ರುಚಿಕರವಾಗಿರುವುದು ಮಾತ್ರವಲ್ಲ, ವಿಟಮಿನ್‌ಗಳು, ಖನಿಜಗಳು ಮತ್ತು ಇತರ ಪೋಷಕಾಂಶಗಳಿಂದ ತುಂಬಿರುತ್ತವೆ, ಅದು ನಿಮ್ಮನ್ನು ಆರೋಗ್ಯವಾಗಿಡಲು ಸಹಾಯ ಮಾಡುತ್ತದೆ. ಇದನ್ನು ನಿಯಮಿತವಾಗಿ ಸೇವಿಸಿದರೆ, ಮಲಬದ್ಧತೆ ಮತ್ತು ಗ್ಯಾಸ್‌ನಂತಹ ಸಮಸ್ಯೆಗಳು ದೂರವಾಗುತ್ತವೆ.

**ಆವಕಾಡೊದಲ್ಲಿನ ಪೋಷ ಕಾಂಶಗಳು**

ಆವಕಾಡೊ ಫೈಬರ್ ಭ–ರಿತ ಹಣ್ಣಾಗಿದ್ದು ಸಾಕಷ್ಟು ಪ್ರಮಾಣದಲ್ಲಿ ವಿಟಮಿನ್ ಕೆ, ವಿಟಮಿನ್ ಬಿ6, ವಿಟಮಿನ್ ಸಿ ಮತ್ತು ವಿಟಮಿನ್ ಇ ಇದೆ. ಇದು ಮೂಳೆಗಳನ್ನು ಗಟ್ಟಿಗೊಳಿಸುತ್ತದೆ. ಶಕ್ತಿಯುತವಾದ ಉತ್ಕರ್ಷಣ ನಿರೋಧಕವಾಗಿರುವುದರಿಂದ, ಇದು ಫ್ರೀ ರಾಡಿಕಲ್‌ಗಳ ಕೆಟ್ಟ ಪರಿಣಾಮಗಳಿಂದ ನಮ್ಮ ಕೋಶಗಳನ್ನು ರಕ್ಷಿಸುತ್ತದೆ.

**ವೈದ್ಯರು ಏನಂತಾರೇ?**

ದೆಹಲಿಯ ಸರೋಜ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಡಯೆಟಿ–ಕ್ಸ್ ಊಔಆ, ಡಾ ನಿಧಿ ಧವನ್ ಅವರ ಪ್ರಕಾರ, ಮೆಗ್ನೀಸಿಯಮ್‌ನ ಉತ್ತಮ ಮೂಲವಾಗಿರುವುದರಿಂದ, ಆವಕಾಡೋ ಸೇವನೆಯು ನರಗಳು ಮತ್ತು ಸ್ನಾಯುಗಳಿಗೆ ಸಹ ಒಳ್ಳೆಯದು. ಆವಕಾಡೊವನ್ನು ಸೇವಿಸುವುದರಿಂದ, ಗರ್ಭಿಣಿಯರು ಸಾಕಷ್ಟು ಪ್ರಮಾಣದ ಫೋಲೇಟ್ ಅನ್ನು ಪಡೆಯುತ್ತಾರೆ, ಇದು ಮಗುವಿನ ಬೆನ್ನುಹುರಿ ಮತ್ತು ಮೆದುಳಿನ ಬೆಳವಣಿಗೆಗೆ ಅವಶ್ಯಕವಾಗಿದೆ.

ಇದು ನಿಮ್ಮನ್ನು ಅನೇಕ ರೋಗಗಳಿಂದ ದೂರವಿಡುತ್ತದೆ. ಜೀವಸತ್ವಗಳು ಮತ್ತು ಖನಿಜಗಳ ಉತ್ತಮ ಮೂಲವಾಗಿರುವುದರಿಂದ, ಇದು ದೇಹಕ್ಕೆ ಅನೇಕ ಪ್ರಮುಖ ಪ್ರಯೋಜನಗಳನ್ನು ನೀಡುತ್ತದೆ.

**ಮಧುಮೇಹ ನಿಯಂತ್ರಣ**

ಆವಕಾಡೋ ಕಡಿಮೆ ಗ್ಲೈಸೆಮಿಕ್ ಸೂಚಿಯನ್ನು ಹೊಂದಿರುವುದ–ರಿಂದ ನಮ್ಮ ರಕ್ತದಲ್ಲಿನ ಸಕ್ಕರೆಯನ್ನು ಸ ವ ಂ ತ ೋ ಲ ನ ಗ ೊ ಳ ಿ ಸ ು ತ ್ತ ದ ೆ. ಮಧುಮೇಹಿಗಳು ತಮ್ಮ ಆಹಾರದಲ್ಲಿ ಅವಕಾಡೊವನ್ನು ಸೇರಿಸಿಕೊಳ್ಳಬೇಕು. ಆರೋಗ್ಯಕರ ಕೊಬ್ಬುಗಳು ಇದರಲ್ಲಿ ಕಂಡುಬರುತ್ತವೆ, ಇದು ರಕ್ತದಲ್ಲಿನ ಸಕ್ಕರೆ ಮಟ್ಟದಲ್ಲಿ ಹಠಾತ್ ಬದಲಾವಣೆಗಳನ್ನು ತಡೆಯುತ್ತದೆ. ಆವಕಾಡೊ ಸೇರಿದಂತೆ ಸಸ್ಯ ಆಧಾರಿತ ಆಹಾರವನ್ನು ತಿನ್ನುವುದು ಟೈಪ್ 2 ಮಧುಮೇಹವನ್ನು ಅಭಿವೃದ್ಧಿಪಡಿಸುವ ಸಾಧ್ಯತೆಯನ್ನು ಕಡಿಮೆಮಾಡುತ್ತದೆ.

**ಹೃದಯದ ಆರೋಗ್ಯಕ್ಕೆ ಪ್ರಯೋಜನಕಾರಿ**

ಆವಕಾಡೋ ಪೊಟ್ಯಾಸಿಯಮ್ ಅನ್ನು ಹೊಂದಿರುತ್ತದೆ, ಇದು ಹೃದಯದ ಆರೋಗ್ಯಕ್ಕೆ ಅವಶ್ಯಕವಾಗಿದೆ. ಆವಕಾಡೊ ಅಪರ್ಯಾಪ್ತ ಕೊಬ್ಬನ್ನು ಹೊಂದಿರುತ್ತದೆ, ಇದು ಕೊಲೆಸ್ಟ್ರಾಲ್ ಮಟ್ಟವನ್ನು ಸಮತೋಲನಗೊಳಿಸುತ್ತದೆ. ಆವಕಾಡೊಗಳು ನಿರ್ದಿಷ್ಟವಾಗಿ ಕೆಟ್ಟ



ಕೊಲೆಸ್ಟ್ರಾಲ್, ಟ್ರೈಗ್ಲಿಸರೈಡ್‌ಗಳು ಮತ್ತು ರಕ್ತದೊತ್ತಡವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಇದನ್ನು ನಿಯಮಿತವಾಗಿ ಸೇವಿಸುವುದರಿಂದ ಹೃದಯಾಘಾತ ಮತ್ತು ರಕ್ತದೊತ್ತಡ ಸಂಬಂಧಿತ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ಆವಕಾಡೊ ಪೊಟ್ಯಾಸಿಯಮ್ ಅನ್ನು ಹೊಂದಿರುತ್ತದೆ, ಇದು ರಕ್ತದೊತ್ತಡವನ್ನು ನಿಯಂತ್ರಿಸುತ್ತದೆ ಮತ್ತು ಹೃದಯದ ಆರೋಗ್ಯವನ್ನು ಸುಧಾರಿಸುತ್ತದೆ.

**ತೂಕ ನಷ್ಟಕ್ಕೆ**

ಆವಕಾಡೊಗಳು ಹೆಚ್ಚಿನ ಕೊಬ್ಬನ್ನು ಹೊಂದಿರುತ್ತವೆ, ಇದು ಮುಖ್ಯವಾಗಿ ಆರೋಗ್ಯಕರ ಮೊನೊಸಾಚುರೇಟೆಡ್ ಕೊಬ್ಬು. ಇದು ಕಡಿಮೆ ಪ್ರಮಾಣದ ಕ್ಯಾಲೊರಿಗಳನ್ನು ಹೊಂದಿರುತ್ತದೆ. ಇದರಲ್ಲಿ ಫೈಬರ್ ಇರುವ ಕಾರಣ, ದೀರ್ಘಕಾಲದವರೆಗೆ ಹಸಿವಾಗುವುದಿಲ್ಲ, ಇದು ಕೊಬ್ಬನ್ನು ಸುಡುವ ಪ್ರಕ್ರಿಯೆಯನ್ನು ವೇಗಗೊಳಿಸುತ್ತದೆ ಮತ್ತು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ. ನಿಮ್ಮ ಸೊಂಟವನ್ನು ಟ್ರಿಮ್ ಮಾಡಲು ಸಹಾಯ ಮಾಡುತ್ತದೆ ಎಂದು ಸಂಶೋಧನೆ ಕಂಡುಹಿಡಿದಿದೆ. ಹಾಗಾಗಿ ಆವಕಾಡೊ ತೂಕ ಇಳಿಸಿಕೊಳ್ಳಲು ಬಯಸುವವರಿಗೆ ಬೆಸ್ಟ್ ಹಣ್ಣು.

**ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸಲು**

ಆವಕಾಡೊ ಹೆಚ್ಚಿನ ಫೈಬರ್ ಅನ್ನು ಹೊಂದಿರುತ್ತದೆ, ಇದು ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿಸಲು ಸಹಾಯ ಮಾಡುತ್ತದೆ. ಇದನ್ನು ಸೇವಿಸುವುದ–ರಿಂದ ಗ್ಯಾಸ್ ಮತ್ತು ಅಜೀರ್ಣದಂತಹ ಸಮಸ್ಯೆಗಳು ಕಡಿಮೆಯಾಗುತ್ತವೆ. ಫೈಬರ್ ಸೇವನೆಯು ಕರುಳಿಗೆ ಪ್ರಯೋಜನಕಾ–ರಿಯಾಗಿದೆ. ಇದು ನಮ್ಮ ಕರುಳನ್ನು ಸ್ವಚ್ಛಗೊಳಿಸುತ್ತದೆ ಮತ್ತು ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸುತ್ತದೆ.

**ಮೆದುಳಿನ ಕಾರ್ಯವನ್ನು ಹೆಚ್ಚಿಸಲು ಸಹಕಾರಿ**

ಆವಕಾ?ದಲ್ಲಿ ವಿಟಮಿನ್ ಬಿ6 ಇರುವುದರಿಂದ ಇದು ಮೆದುಳಿನ ಕಾರ್ಯವನ್ನು ಸುಧಾರಿಸುತ್ತದೆ. ಇದನ್ನು ಸೇವಿಸುವುದರಿಂದ ನಮ್ಮ ಜ್ಞಾಪಕಶಕ್ತಿಯು ಸುಧಾರಿಸುತ್ತದೆ ಮತ್ತು ನಮ್ಮ ಮನಸ್ಥಿತಿಯನ್ನು ಸುಧಾರಿಸುತ್ತದೆ. ಇದು ಆಲ್ಝೈಮರ್ ಕಾಯಿಲೆಯಿಂದ ರಕ್ಷಿಸಲು ಸಹಾಯ ಮಾಡುತ್ತದೆ. ಆಲ್ಝೈಮರ್ ಕಾಯಿಲೆಯಿಂದಾಗಿ ವ್ಯಕ್ತಿಯು ಕ್ರಮೇಣ ತನ್ನ ನೆನಪಿನ ಶಕ್ತಿಯನ್ನು ಕಳೆದುಕೊಳ್ಳಲಾರಂಭಿಸುತ್ತಾನೆ. ಅಂತಹವ–ರಿಗೆ ಆವಕಾಡೋ ಸೇವನೆ ಒಳ್ಳೆಯದು. ಇದು ಮೆದುಳಿನಲ್ಲಿ ನರಪ್ರೇಕ್ಷಕಗಳನ್ನು ಉತ್ಪಾದಿಸುವ ಮೂಲಕ ಮೆದುಳಿನ ಕೋಶಗಳನ್ನು ಪೋಷಿಸುತ್ತದೆ.

**ರಜತಾ**


ರಜತ ಬಂಗೇರ ಅವರು ಒಂದು ದಶಕದ ಅನುಭವ ಹೊಂದಿರುವ ಅನುಭವಿ ಪತ್ರಕರ್ತರಾಗಿದ್ದಾರೆ. ಮುದ್ರಣ ಮಾಧ್ಯಮದಲ್ಲಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದ ಇವರು ಲೈಫ್‌ಸ್ಟೈಲ್ ಪತ್ರಕರ್ತರಾಗಿ ತಮ್ಮ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿದರು.

ಆರೋಗ್ಯ , ಅಡುಗೆ, ಫ್ಯಾಷನ್ ಮತ್ತು ಪ್ರಯಾಣದ ಬಗ್ಗೆ ಲೇಖನಗಳನ್ನು ಬರೆಯುವುದರಲ್ಲಿ ಆಸಕ್ತಿಹೊಂದಿರುವ ಇವರು ಓದುಗರಿಗೆ ಉತ್ತಮ ಲೇಖನಗಳನ್ನು ಒದಗಿಸುತ್ತಿದ್ದಾರೆ. ಪ್ರಸ್ತುತ, ರಜತ ಅವರು ನಮ್ಮ ಲೈಫ್‌ಸ್ಟೈಲ್ ಸಂಪಾದಕರಾಗಿ ಕೆಲಸ ಮಾಡುತ್ತಿದ್ದಾರೆ. ಅವರು ಕಳೆದ ಎಂಟು ವರ್ಷಗಳಿಂದ ಈ ಪಾತ್ರವನ್ನು ನಿರ್ವಹಿಸಿದ್ದಾರೆ.


ಈ ಸ್ಥಾನದಲ್ಲಿ, ಉನ್ನತ–ಗುಣಮಟ್ಟದ ವಿಷಯವನ್ನು ಓದುಗರಿಗೆ ಒದಗಿಸುತ್ತಿದ್ದಾರೆ.

ಉದಯೋನ್ಮುಖ ಪ್ರವೃತ್ತಿಗಳನ್ನು ಗುರುತಿಸುವ ಮತ್ತು ಉತ್ತಮ ಲೇಖನಗಳನ್ನು ರಚಿಸುವ ಇವರು ನಮ್ಮ ಸಂಸ್ಥೆಯ ಪ್ರಮುಖ ಲೈಫ್‌ಸ್ಟೈಲ್ ಪತ್ರಕರ್ತರಲ್ಲಿ ಒಬ್ಬರೆಂದು ಖ್ಯಾತಿಯನ್ನು ಗಳಿಸಿದ್ದಾರೆ. ಕೆಲಸವನ್ನು ಹೊರತುಪಡಿಸಿ, ರಜತ ಹೊಸ ಸ್ಥಳಗಳನ್ನು ಅನ್ವೇಷಿಸಲು ಮತ್ತು ತನ್ನ ಪ್ರಯಾಣದ ಮೂಲಕ ವಿಭಿನ್ನ ಸಂಸ್ಕೃತಿಗಳನ್ನು ಅನುಭವಿಸುವುದನ್ನು ಆನಂದಿಸುತ್ತಾರೆ.

ಅವರು ಅತ್ಯಾಸಕ್ತಿಯ ನೃತ್ಯಗಾರ್ತಿಯೂ ಆಗಿದ್ದು, ಶಾಸ್ತ್ರೀಯ ಭಾರತೀಯ ನೃತ್ಯ ಪ್ರಕಾರಗಳಲ್ಲಿ ನಿರ್ದಿಷ್ಟ ಆಸಕ್ತಿಯನ್ನು ಹೊಂದಿದ್ದಾರೆ. ಈ ಹವ್ಯಾಸಗಳು ಅವರ ಬರವಣಿಗೆಯನ್ನು ಪ್ರೇರೇಪಿಸುತ್ತವೆ



## ರೋಗನಿರೋಧಕ ಶಕ್ತಿ ವೃದ್ಧಿಸಲು, ಬೆಳಗ್ಗೆ ಖಾಲಿ ಹೊಟ್ಟೆಗೆ ಈ ಬೀಜಗಳನ್ನು ಸೇವನೆ ಮಾಡಿ



ಆಹಾರ ಕ್ರಮದಲ್ಲಿ ಎಲ್ಲಾ ರೀತಿಯ ಪೋಷಕಾಂಶಗಳು ದೇಹಕ್ಕೆ ಸಿಗುವುದು ತುಂಬಾ ಕಡಿಮೆ. ಹೀಗಾಗಿ ಕೆಲವೊಮ್ಮೆ ಈ ಕೊರತೆ ನೀಗಿಸಲು ಕೆಲವು ಬೀಜಗಳನ್ನು ಆಹಾರ ಕ್ರಮದಲ್ಲಿ ಸೇರ್ಪಡೆ ಮಾಡಿದರೆ, ಆಗ ಇದು ದೇಹದಲ್ಲಿ ರೋಗನಿರೋಧ ಶಕ್ತಿ ವೃದ್ಧಿ ಮಾಡುವುದು ಮತ್ತು ದೇಹಕ್ಕೆ ಶಕ್ತಿ ನೀಡುವುದು.

ದೇಹದಲ್ಲಿ ರೋಗನಿರೋಧ ಶಕ್ತಿಯು ಕಡಿಮೆಯಾಗಿದ್ದರೆ, ಆಗ ನಾನಾ ರೀತಿಯ ಆರೋಗ್ಯ ಸಮಸ್ಯೆಗಳು ಬರಬಹುದು. ಅದರಲ್ಲೂ ಕೆಲವೊಮ್ಮೆ ಆಹಾರ ಸೇವನೆ ಮಾಡಿದರೂ ಕೂಡ ಸುಸ್ತು, ನಿಶ್ಯಕ್ತಿ ಕಾಡಬಹುದು. ಇದಕ್ಕೆಲ್ಲಾ ಕಾರಣ ದೇಹದಲ್ಲಿ ಪೋಷಕಾಂಶಗಳು ಸರಿಯಾಗಿ ಇಲ್ಲದೆ ಇರುವುದು. ಪೋಷಕಾಂಶಗಳು ಸಮತೋಲನದಲ್ಲಿ ಇಲ್ಲದೆ ಇದ್ದರೆ ಆಗ ದೇಹದ ರೋಗನಿರೋಧ ಶಕ್ತಿಯು ಕೂಡ ದುರ್ಬಲವಾಗುವುದು.

ನಿತ್ಯದ ಆಹಾರ ಕ್ರಮದಲ್ಲಿ ಮುಖ್ಯವಾಗಿ ಕಾರ್ಬೋಹೈಡ್ರೇಟ್ಸ್, ಹಾಲಿನ ಉತ್ಪನ್ನಗಳು, ಪ್ರೋಟೀನ್, ಹಣ್ಣುಗಳು ಹಾಗೂ ತರಕಾ–ರಿಗಳು ಮತ್ತು ಕೊಬ್ಬು ಇರಲೇಬೇಕು. ಆದರೆ ದುರಾದೃಷ್ಟವೆಂದರೆ ನಾವು ಇದೆಲ್ಲವನ್ನು ನಮ್ಮ ಆಹಾರ ಕ್ರಮದಲ್ಲಿ ಸೇರ್ಪಡೆ ಮಾಡಿಕೊಳ್ಳಲು ಆಗಲ್ಲ. ಇದ–ರಿಂದಾಗಿ ದೇಹದಲ್ಲಿ ನಿಶ್ಯಕ್ತಿ, ಬಳಲಿಕೆ ಕಾಡುವುದು. ಪುಣೆ ಕೊಲಂಬಿಯಾ ಏಶ್ಯಾ ಆಸ್ಪತ್ರೆಯ ಡಯಾಟಿಸಿಯನ್ ಶಾಲಿನಿ ಸೋಮಸುಂದರ್ ಅವರು ಈ ಬಗ್ಗೆ ಮಾತನಾಡಿದ್ದಾರೆ.ಈ ಐದು ಬೀಜಗಳನ್ನು ಆಹಾರ ಕ್ರಮದಲ್ಲಿ ಸೇರ್ಪಡೆ ಮಾಡಿಕೊಂಡರೆ ಆಗ ಖಂಡಿತವಾಗಿಯೂ ದೇಹದಲ್ಲಿ ರೋಗನಿರೋಧ ಶಕ್ತಿಯು ವೃದ್ಧಿ ಆಗುವುದು ಮತ್ತು ದೇಹಕ್ಕೆ ಶಕ್ತಿ ಕೂಡ ಬರುವುದು. ಅಂತಹ ಕಾಳುಗಳ ಬಗ್ಗೆ ತಿಳಿಯಿರಿ.

**ಸೂರ್ಯಕಾಂತಿ ಬೀಜಗಳು**

ಆಹಾರ ಕ್ರಮದಲ್ಲಿ ಆಯಂಟಿಆ–ಕ್ಸಿಡೆಂಟ್ ಅಂಶವು ಕಡಿಮೆ ಇದ್ದರೆ, ಆಗ ಸೂರ್ಯಕಾಂತಿ ಬೀಜಗಳನ್ನು ಸೇರ್ಪಡೆ ಮಾಡಿಕೊಂಡರೆ, ಆಗ ಆಹಾರದಲ್ಲಿ ಸಮತೋಲನ ಬರುವುದು. ಸೂರ್ಯಕಾಂತಿಯಲ್ಲಿ ಉನ್ನತ ಮಟ್ಟದ ಆ?ಯಂಟಿಆಕ್ಸಿಡೆಂಟ್ ಮತ್ತು ಒಳ್ಳೆಯ ಕೊಬ್ಬು ಇದೆ. ಇದರಲ್ಲಿ ಅಧಿಕ ಮಟ್ಟದ ಮೆಗ್ನಿಶಿಯಂ ಮತ್ತು ವಿಟಮಿನ್ ಇ ಕೂಡ ಇದೆ. ಚರ್ಮವು ಕಾಂತಿ ಕಳೆದುಕೊಂಡಿದ್ದರೆ, ಆಗ ನೀವು ಸೂರ್ಯಕಾಂತಿ ಬೀಜಗಳನ್ನು ಆಹಾರ ಕ್ರಮದಲ್ಲಿ ಸೇರ್ಪಡೆ ಮಾಡಿ.

**ಎಳ್ಳು** ಎಳ್ಳು ತಿಂದರೆ ಆಗ ಇದ–ರಿಂದ ಹಲವಾರು ಆರೋಗ್ಯ ಲಾಭಗಳು ಸಿಗುವುದು. ಚಳಿಗಾಲದಲ್ಲಿ ಎಳ್ಳನ್ನು ಸೇವನೆ ಮಾಡಿದರೆ ಆಗ ಇದರಿಂದ ದೇಹವು ಬಿಸಿಯಾಗಿರುವುದು. ಎಳ್ಳಿನಲ್ಲಿ ಸತುವಿನ ಅಂಶವು ಉತ್ತಮ ಪ್ರಮಾಣ ದಲ್ಲಿದೆ ಮತ್ತು ರೋಗನಿರೋಧ ಶಕ್ತಿ ವೃದ್ಧಿಸಲು ಸಹಕಾರಿ. ಇದು ಮಧು ಮೇಹಿಗಳಿಗೆ ಕೂಡ ತುಂಬಾ ಒಳ್ಳೆಯದು ಎಂದು ಪರಿಗಣಿಸಲಾಗಿದೆ. ಆದರೆ ಇದನ್ನು ಮಿತ ಪ್ರಮಾಣದಲ್ಲಿ ಸೇವನೆ ಮಾಡಬೇಕು. ದಿನಕ್ಕೆ ಒಂದು ಚಮಚ ಸೇವಿಸಿದರೆ ಒಳ್ಳೆಯದು ಎಂದು ಸೋಮಸುಂದರ್ ಹೇಳುವರು.

**ಸೆಣಬಿನ ಬೀಜಗಳು**

ಸಸ್ಯಾಹಾರಿಗಳು ಪ್ರೋಟೀನ್ ಸೇವನೆ ಬಗ್ಗೆ ಚಿಂತೆಯಾಗಿದ್ದರೆ, ಆಗ ಸೆಣಬಿನ ಬೀಜದ ಸೇವನೆ ಮಾಡಿದರೆ ಒಳ್ಳೆಯದು. ಸೆಣಬಿನ ಬೀಜದಲ್ಲಿ ಉತ್ತಮ ಪ್ರಮಾಣದಲ್ಲಿ ಪ್ರೋಟೀನ್ ಅಂಶವು ಇದೆ. ಇದು ಸ್ನಾಯುಗಳ ದ್ರವ್ಯರಾಶಿಯನ್ನು ಉತ್ತಮಪಡಿಸಿ, ಶಕ್ತಿ ಒದಗಿಸಿ,



ರೋಗನಿರೋಧ ಶಕ್ತಿ ವೃದ್ಧಿಸುವುದು. ಇದು ತೂಕ ಇಳಿಸಲು ಮತ್ತು ಹಸಿವನ್ನು ನಿಯಂತ್ರಿಸಲು ತುಂಬಾ ಸಹಕಾರಿ ಆಗಿದೆ. ಇದರಲ್ಲಿನ ಕೊಬ್ಬಿನಾಮ್ಲಗಳು ಋತುಚಕ್ರದ ಸಂದರ್ಭದಲ್ಲಿನ ಸಮಸ್ಯೆಗಳನ್ನು ದೂರವಿಡಲು ಸಹಕಾರಿ ಆಗಿದೆ.

**ಕುಂಬಳಕಾಯಿ ಬೀಜಗಳು**

ಕುಂಬಳಕಾಯಿ ಬೀಜದಲ್ಲಿ ಪ್ರೋಟೀನ್, ಪೊಟಾಶಿಯಂ ಮತ್ತು ಮೆಗ್ನೀಸಿ ಯಮ್ ಉತ್ತಮ ಪ್ರಮಾಣದಲ್ಲಿರುವ ಜತೆಗೆ ವಿಟಮಿನ್ ಕೆ ಕೂಡ ಇದರ ಲ್ಲಿದೆ. ಇದು ಹೆಚ್ಚಿನ ಆಹಾರದಲ್ಲಿ ಇಲ್ಲದೆ ಇರುವ ಕಾರಣದಿಂದಾಗಿ ಅಸ್ಥಿರಂಧ್ರತೆ ಸಮಸ್ಯೆಯು ಕಾಡಬಹುದು. ವಿಟಮಿನ್ ಕೆ ಮೂಳೆಗಳಲ್ಲಿ ಕ್ಯಾಲ್ಸಿಯಂನ್ನು ಬಂಧಿಸಿಡುವುದು ಮತ್ತು ಮೂಳೆಗಳನ್ನು ಬಲಪಡಿಸು ವುದು. ಕುಂಬಳಕಾಯಿ ಬೀಜವು ಸಂಧಿವಾತ ಇರುವವರು ಮತ್ತು ಮೂಳೆ ದುರ್ಬಲವಾಗಿರುವವರಿಗೆ ಅತೀ ಅಗತ್ಯವಾಗಿದೆ.

**ಸಬ್ಜಾ ಬೀಜಗಳು**

ಸಬ್ಜಾ ಬೀಜದಲ್ಲಿ ಅತ್ಯುನ್ನತ ಮಟ್ಟದ ಅಲ್ಫಾ ಲಿನೊಲೆನಿಕ್ ಆಮ್ಲವು ಇದೆ. ಇದು ಚಯಾಪಚಯ ವೃದ್ಧಿ ಮಾಡುವುದು ಮತ್ತು ತೂಕ ಇಳಿಕೆಗೆ ಸಹಕಾರಿ ಆಗಿದೆ. ವಿಸೆನಿನ್, ಓರಿಯೆಂಟಿನ್ ಮತ್ತು ಬೀಟಾ ಕ್ಯಾರೋಟಿನ್ ಗಳು ರೋಗನಿರೋಧ ಶಕ್ತಿ ವೃದ್ಧಿ ಮಾಡುವುದು. ಇದರ ಜತೆಗೆ ಶೀತ ಮತ್ತು ಜ್ವರವನ್ನು ದೂರ ಮಾಡಲು ಇದು ಸಹಕಾರಿ ಆಗಿದೆ. ಈ ಬೀಜಗಳನ್ನು ರಾತ್ರಿ ವೇಳೆ ನೀರಿನಲ್ಲಿ ನೆನೆಯಲು ಹಾಕಿ ಬೆಳಗ್ಗೆ ಸೇವನೆ ಮಾಡಿ. ತೂಕ ಇಳಿಕೆಯಿಂದ ರೋಗನಿರೋಧ ಶಕ್ತಿ ವೃದ್ಧಿಸಲು ಇವುಗಳು ಸಹಕಾರಿ ಆಗಿದೆ ಎಂದು ಸೋಮಸುಂದರ್ ಹೇಳಿರುವರು. ಈ ಬೀಜಗಳನ್ನು 15 ಗ್ರಾಂನಷ್ಟು ಪ್ರತಿನಿತ್ಯವೂ ಸೇವನೆ ಮಾಡಿದರೆ ತುಂಬಾ ಒಳ್ಳೆಯದು. ಬಿಸಿ ನೀರಿನೊಂದಿಗೆ ಖಾಲಿ ಹೊಟ್ಟೆಯಲ್ಲಿ ಸೇವನೆ ಮಾಡಿದರೆ ಆಗ ಇದರಿಮದ ಹೊಟ್ಟೆಯು ಶುಚಿಂ–ಮಾಗುವುದು ಎಂದು ಅವರು ವಿವ–ರಿಸಿರುವರು.

## ಯಾವ ಹಿಟ್ಟು ಹೃದಯದ ಆರೋಗ್ಯಕ್ಕೆ ಹಾಗೂ ಮಕ್ಕಳಿಗೆ ಒಳ್ಳೆಯದು



ನಾವು ದಿನನಿತ್ಯ ಬಳಸುವ ಹಿಟ್ಟು ಆರೋಗ್ಯಕರವೇ ಎನ್ನುವುದು ತಿಳಿಯುವುದು ಬಹಳ ಮುಖ್ಯ. ಪ್ರತಿಯೊಂದು ಹಿಟ್ಟು ತನ್ನದೇ ಆದ ತಾಜಾತನದ ಅವಧಿಯನ್ನು ಹೊಂದಿದೆ. ನಾವಿಂದು ಯಾವ ಹಿಟ್ಟಿನ ಸೇವನೆ ಆರೋಗ್ಯಕೆಕ ಉತ್ತಮ ಎನ್ನುವುದನ್ನು ತಿಳಿಯೋಣ.

ಹಿಟ್ಟು ನಮ್ಮ ಆಹಾರದ ಪ್ರಮುಖ ಭಾಗವಾಗಿದೆ. ನಾನಾ ರೀತಿಯ ಹಿಟ್ಟನ್ನು ಜನರು ಅಡುಗೆಗೆ ಬಳಸುತ್ತಾರೆ. ಕೆಲವರು ಗೋಧಿ ಹಿಟ್ಟಿನಿಂದ ಚಪಾತಿ ತಯಾರಿಸಿದರೆ ಇನ್ನೂ ಕೆಲವರು ರಾಗಿ ಹಿಟ್ಟಿನಿಂದ ಮುದ್ದೆ ಮಾಡುತ್ತಾರೆ, ಜೋಳದ ಹಿಟ್ಟಿನಿಂದ ರೊಟ್ಟಿ ತಯಾರಿಸುತ್ತಾರೆ. ಇವೆಲ್ಲವೂ ರುಚಿಕರವೂ ಆಗಿದೆ, ಆರೋಗ್ಯಕವೂ ಹೌದು. ಆದ–'ರೆ ನೀವು ನಿಮಗಾಗಿ ಸರಿಯಾದ ಹಿಟ್ಟನ್ನು ಆರಿಸುತ್ತಿದ್ದೀರಾ ಎಂಬುದು ಸಹ ಒಂದು ದೊಡ್ಡ ಪ್ರಶ್ನೆಯಾಗಿದೆ. ರುಚಿಂ–ಋ ಜೊತೆಗೆ, ನಾವು ನಮಗೆ ಸೂಕ್ತವಾದ ಹಿಟ್ಟನ್ನು ಆರಿಸಿಕೊಳ್ಳುವುದು ಆರೋಗ್ಯಕ್ಕೆ ಬಹಳ ಮುಖ್ಯ. ಅತ್ಯುತ್ತಮ ಪೌಷ್ಟಿಕಾಂಶದ ಗುಣಲಕ್ಷಣಗಳನ್ನು ಹೊಂದಿರುವ ಹಿಟ್ಟು ನಿಮ್ಮ ಆರೋಗ್ಯವನ್ನು ಉತ್ತಮವಾಗಿಡುವುದು ಮಾತ್ರವಲ್ಲದೆ ನಿಮ್ಮ ತೂಕವನ್ನು ನಿಯಂತ್ರಣದಲ್ಲಿಡಲು ಸಹಾಯಮಾಡುತ್ತದೆ.

ಹಿಟ್ಟನ್ನು ತಯಾರಿಸಲು, ಧಾನ್ಯಗಳನ್ನು ನುಣ್ಣಗೆ ಪುಡಿಮಾಡಲಾಗುತ್ತದೆ. ಅವುಗಳ ಪೌಷ್ಟಿಕಾಂಶದ ಅಂಶವನ್ನು ಅವಲಂಬಿಸಿ ಇತರ ಪದಾರ್ಥಗಳೊಂದಿಗೆ ವಿವಿಧ ಹಿಟ್ಟುಗಳನ್ನು ತಯಾರಿಸಲಾಗುತ್ತದೆ. ಆರೋಗ್ಯದ ದೃಷ್ಟಿಯಿಂದ ಸರಿಯಾದ ಹಿಟ್ಟನ್ನು ಹೇಗೆ ಆರಿಸಬೇಕೆಂದು ನಾವು ನಿಮಗೆ ಹೇಳೋಣ.

**ಮಾರುಕಟ್ಟೆಯಲ್ಲಿ ಎಷ್ಟು ರೀತಿಯ ಹಿಟ್ಟು ಲಭ್ಯವಿದೆ**

ಉತ್ತಮ ಹಿಟ್ಟು
ಗೋಧಿ ಹಿಟ್ಟು
ಅಕ್ಕಿ ಹಿಟ್ಟು
ಕಡಲೆ ಹಿಟ್ಟು
ಓಟ್ ಹಿಟ್ಟು
ರಾಗಿ ಹಿಟ್ಟು
ತೆಂಗಿನ ಹಿಟ್ಟು
ಬಾದಾಮಿ ಹಿಟ್ಟು

**ಅಂಟು ಮುಕ್ತ ಹಿಟ್ಟು**

ನೀವು ಅಂಟಿನ ಅಲರ್ಜಿಯನ್ನು ಹೊಂದಿದ್ದರೆ, ಯಾವಾಗಲೂ ಗ್ಲುಟನ್ ಮುಕ್ತ ಹಿಟ್ಟನ್ನು ಖರೀದಿಸಿ. ಹೆಚ್ಚಿನ ಪ್ರಮಾಣದ ಗ್ಲುಟನ್ ಹೊಂದಿರುವ ಹಿಟ್ಟುಗಳನ್ನು ಪಿಜ್ಜಾ ಬೇಸ್‌ಗಳು ಮತ್ತು ಬ್ರೆಡ್‌ಗಳನ್ನು ತಯಾರಿಸಲು ಬಳಸಲಾಗುತ್ತದೆ. ಗ್ಲುಟನ್ ಅಂಶವಿರುವ ಹಿಟ್ಟನ್ನು ಕೇಕ್ ಮತ್ತು ಪೇಸ್ಟ್ರಿಗಳಿಗೆ ಬಳಸಲಾಗುತ್ತದೆ.

**ಹಿಟ್ಟಿನಲ್ಲಿರುವ ಯಾವೆಲ್ಲಾ ಪೋಷಕಾಂಶಗಳಿವೆ**

ಪ್ರತಿ ಹಿಟ್ಟಿನ ಪೌಷ್ಟಿಕಾಂಶದ ಮೌಲ್ಯವು ವಿಭಿನ್ನವಾಗಿರುತ್ತದೆ. ಅಲ್ಲಿ ದೊಡ್ಡ ಪ್ರಮಾಣದ ಫೈಬರ್, ಪ್ರೋಟೀನ್ ಮತ್ತು ಪೋಷಕಾಂಶಗಳು ಕಂಡುಬರುತ್ತವೆ. ಆದ–'ರೆ ಕೆಲವು ಹಿಟ್ಟುಗಳು ಗ್ಲುಟನ್ ಮುಕ್ತ ಮತ್ತು ಕಡಿಮೆ ಕ್ಯಾಲೋರಿ ಹೊಂದಿರುತ್ತವೆ. ನಿಮಗೆ ಬೇಕಾದ ಹಿಟ್ಟು ನಿಮ್ಮ ಮೇಲೆ ಅವಲಂಬಿತವಾಗಿರುತ್ತದೆ.

**ಹೃದಯದ ಆರೋಗ್ಯಕ್ಕೆ ಅತ್ಯುತ್ತಮ ಹಿಟ್ಟು**

ಹೃದಯದ ಆರೋಗ್ಯಕ್ಕಾಗಿ, ಉತ್ತಮ ಪೌಷ್ಟಿಕಾಂಶದ ಪ್ರೊಫೈಲ್ ಹೊಂದಿರುವ ಹಿಟ್ಟನ್ನು ಆಯ್ಕೆ ಮಾಡಬೇಕು. ಗೋಧಿ ಹಿಟ್ಟು, ರಾಗಿ ಹಿಟ್ಟು, ಓಟ್ ಹಿಟ್ಟು, ಹುರುಳಿ ಹಿಟ್ಟು ಇತ್ಯಾದಿಗಳು ಅಪಾರ ಪ್ರಮಾಣದ ಫೈಬರ್ ಅನ್ನು ಹೊಂದಿರುತ್ತವೆ. ಅಂತಹ ಪರಿಸ್ಥಿತಿಯಲ್ಲಿ, ಇದು ಹೃದಯಕ್ಕೆ ತುಂಬಾ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ ಮತ್ತು ಇದು ದೀರ್ಘಕಾಲದವರೆಗೆ ಹೊಟ್ಟೆ ತುಂಬಿರುವಂತೆ ಮಾಡುತ್ತದೆ.

**ಯಾವ ಹಿಟ್ಟು ಮಕ್ಕಳಿಗೆ ಆರೋಗ್ಯಕರ**

ಮಕ್ಕಳಿಗೆ ತಿಂಡಿ ಮಾಡುವಾಗ ಯಾವಾಗಲೂ ಗೋಧಿ ಮತ್ತು ರಾಗಿ ಹಿಟ್ಟನ್ನು ಮಾತ್ರ ಬಳಸಿ. ಇದು ಫೈಬರ್ ಮತ್ತು ಸಂಕೀರ್ಣ ಕಾರ್ಬೋಹೈಡ್ರೇಟ್‌ಗಳ ಜೊತೆಗೆ ಜೀವಸತ್ವಗಳು ಮತ್ತು ಖನಿಜಗಳಲ್ಲಿ ಸಮೃದ್ಧವಾಗಿದೆ. ಮಕ್ಕಳಿಗೆ, ನೀವು ಓಟ್ ಹಿಟ್ಟು, ಗೋಧಿ ಹಿಟ್ಟು, ಬಾರ್ಲಿ ಹಿಟ್ಟು, ಬಾದಾಮಿ ಹಿಟ್ಟು, ರಾಗಿ ಹಿಟ್ಟು ಮತ್ತು ಕ್ವಿನೋವಾ ಹಿಟ್ಟು ಬಳಸಬಹುದು. ಪ್ಯಾನ್‌ಕೇಕ್‌ಗಳು, ಮಫಿನ್‌ಗಳು ಮತ್ತು ಮನೆಯಲ್ಲಿ ತಯಾ–ರಿಸಿದ ಬ್ರೆಡ್‌ನಂತಹ ವಿವಿಧ ಮಕ್ಕಳ ಸ್ನೇಹಿ ಪಾಕವಿಧಾನಗಳನ್ನು ತಯಾರಿಸಲು ಈ ಹಿಟ್ಟನ್ನು ಬಳಸಲಾಗುತ್ತದೆ. ಇದರಿಂದ ಮಕ್ಕಳಿಗೆ ಸಾಕಷ್ಟು ಪೋಷಕಾಂಶಗಳು ದೊರೆಯುತ್ತವೆ ಮತ್ತು ಅವರ ಆರೋಗ್ಯವೂ ಉತ್ತಮವಾಗಿರುತ್ತದೆ.

**ಬಹುದಿನ ಬಾಳಿಕೆ ಬರುವುದು ಮತ್ತು ಸಂಗ್ರಹಣೆ ಹೇಗೆ?**

ವಿವಿಧ ರೀತಿಯ ಹಿಟ್ಟಿನ ಶೆಲ್ಫ್ ಜೀವನವು ವಿಭಿನ್ನವಾಗಿರುತ್ತದೆ ಮತ್ತು ಅವುಗಳ ತಾಜಾತನ ಮತ್ತು ಗುಣಮಟ್ಟವು ಅವುಗಳನ್ನು ಸಂಗ್ರಹಿಸುವ ವಿಧಾನವನ್ನು ಅವಲಂಬಿಸಿರುತ್ತದೆ. ತೆಂಗಿನಕಾಯಿ ಮತ್ತು ಬಾದಾಮಿ ಹಿಟ್ಟು ನೈಸರ್ಗಿಕ ಎಣ್ಣೆಯನ್ನು ಹೊಂದಿರುತ್ತದೆ. ಅಂತಹ ಸಂದರ್ಭಗಳಲ್ಲಿ ಅವು ಬೇಗನೆ ಹಾಳಾಗುತ್ತದೆ. ಹಿಟ್ಟು ಯಾವ ವಿಧ ಮತ್ತು ಅದನ್ನು ಹೇಗೆ ಸಂಗ್ರಹಿಸುವುದು ಎಂಬುದರ ಬಗ್ಗೆ ಗಮನ ಹರಿಸುವುದು ಸಹ ಮುಖ್ಯವಾಗಿದೆ.



# ಪತಿ- ಪತ್ನಿ ಹೊಂದಾಣಿಕೆಯೇ ಜೀವನ-ನಿರಂಜನಶ್ರೀ

**ತಾಳಿಕೋಟೆ,** ಸಾವಿರಾರು ವರ್ಷಗಳಿಂದಲೂ ಭಾರತ ದೇಶದ ಮೇಲೆ ವಿದೇಶಿಗರು ದಾಳಿ ಮಾಡಿದರೂ ಕೂಡಾ ಭಾರತೀಯ ಸಂಸ್ಕೃತಿ ಎಂಬುದು ನಷ್ಟವಾಗಿಲ್ಲಾ ಯಾಕೆಂದರೆ ಇಲ್ಲಿಯ ಕುಟುಂಭ ಪದ್ದತಿಯಿಂದ ಮಾತೃ ದೇವೋ ಭವ, ಪಿತೃದೇವೋ ಭವ ಎಂಬಂತೆ ಎಲ್ಲರಲ್ಲಿ ಗೌರವಿಸುತ್ತಾ ಸಕಲ ಜೀವ ರಾಶಿಗಳಿಗೆ ಲೇಸನ್ನು ಬಯಸುವಂತಹ ಸಂಸ್ಕೃತಿ ಭಾರತದೇಶದಲ್ಲಿದ್ದೇ ಕಾರಣವಾಗಿದೆ ಎಂದು ಖ್ಯಾತ ಆದ್ಯಾತ್ಮೀಕ ಪ್ರವಚನಕಾರರಾದ ಪ.ಪೂ.ಶ್ರೀ ನಿರಂಜನ ಮಹಾ ಸ್ವಾಮಿಗಳು ನುಡಿದರು.

ಬುಧವಾರರಂದು ಯೋಗೋತ್ಸವ ಸಮಿತಿ ತಾಳಿಕೋಟೆ ಇವರ ವತಿಯಿಂದ ಸ್ಥಳೀಯ ಕನ್ನಡ ಶಾಲಾ ಮೈಧಾನದಲ್ಲಿ ಏರ್ಪಡಿಸಲಾದ ಸಾಮೂಹಿಕ ಭಜನೆ, ಹಾಗೂ ಆದ್ಯಾತ್ಮೀಕ ಪ್ರವಚನದ 9ನೇ ದಿನದಂದು ಮಾತನಾಡುತ್ತಿದ್ದ ಅವರು ಮಾನವರಾಗಿ ಜನ್ಮತಾಳಿದ ನಾವು 25 ವರ್ಷ ಬ್ರಹ್ಮಚಾರಿ ಆಶ್ರಮ, 25ವರ್ಷ ಗ್ರಹಸ್ಥಾಶ್ರಮ, 25 ವರ್ಷ ಆದ ನಂತರ ವಾಹನ ಪ್ರಸ್ಥಾಶ್ರಮ ಅಂದರೆ ಮನೆ ಬಿಟ್ಟು ಪ್ರವಚನವನ್ನು ಕೇಳುವದ್ದಾಗಲಿ ಆದ್ಯಾತ್ಮೀಕ ಚಿಂತನೆ ಮಾಡುತ್ತಾ ಸತ್ಸಂಗ ಹಾಗೂ ಜಫ ತಪ ಮಾಡಬೇಕಾಗಿದ್ದು ಇರುತ್ತದೆ ಈಗ ಇಂತಹ ಕಾರ್ಯಗಳಿಗೆ ವಿರೋಧಿಸುವ ಕಾರ್ಯ ನಡೆದಿದೆ ಎಂದು ವಿಶಾಧಿಸಿದ ಶ್ರೀಗಳು ಸುಃಖ ಸಿಗಬೇಕೆಂದರೆ ಹೇಗೆ ಸಿಗಬೇಕು ವಯೋವೃದ್ದತೆ ಕಾಲದಲ್ಲಿ ಎಂದು ಪ್ರಶ್ನೀಸಿದರು.

75ನೇ ವರ್ಷಕ್ಕೆ ಸನ್ಯಾಸಿ ಆಶ್ರಮ ಅಂದರೆ ತ್ಯಾಗ ಮಾಡುವದ್ದಾಗಿದೆ ಬುದ್ದ ತನ್ನ ರಾಜ ವೈಭವವನ್ನು ಬಿಟ್ಟು ಹೆಂಡತಿಗೆ ಹೇಳದೇ ಕೇಳದೇ ತಪಸ್ಸು ಮಾಡಲು ಮುಂದಾದರು ಇದನ್ನು ಅರ್ಥೈಸಿಕೊಂಡ ಹೆಂಡತಿ ನೀವು ತಪಸ್ಸು ಶಕ್ತಿಗೆ ಹೋಗುವದಿದ್ದರೆ ಹೇಳಿ ಹೋಗಬೇಕಿತ್ತು ದೇವರು ಕಂಡರೆ ಅರಣ್ಯದಲ್ಲಿಯೇ ಕಾಣುತ್ತಾನೇನು? ಈ ರಾಜದಾನಿಯಲ್ಲಿ ಕಾಣುವದಿಲ್ಲವೇನು ಎಂದು ಬುದ್ದನಿಗೆ ಪ್ರಶ್ನೀಸಿದ ಪತ್ನಿಯ ಮಾತನ್ನು ಅರೀತುಕೊಂಡ ಬುದ್ದ ಉತ್ತರಿಸಲೇ ಇಲ್ಲಾ ದೇವರು ಎಲ್ಲ ಕಡೆ ಇದ್ದಾನೆ ಮನಸ್ಸನ್ನು ಪರಿವರ್ತನೆಗಾಗಿ ತಪಸ್ಸಿಗಾಗಿ ಬುದ್ದ ಮುಂದಾಗಿದ್ದರು. ಭೌದ್ದ ಧರ್ಮದಲ್ಲಿ ಸನ್ಯಾಸಿಯಾದರೆ ಗೌರವ ಸಿಗುತ್ತದೆ ಎಂದು ಕೆಲವರು ಭಾವಿಸಿದ್ದನ್ನು ನೋಡಿದರೆ ಇದು ಅನಾಚಾರಕ್ಕೆ ದೂಡಿದಂತಾಗಿದೆ ಎಂದರು.

ಬಸವಣ್ಣನವರು ಸಹೀತ ಸ್ವತಃ ಮಧುವೆಯಾಗಿ ಜಗತ್ತಿಗೆ ತಿಳಿಸಿಕೊಡುತ್ತಾರೆ ಮನಸ್ಸಿಗೆ ಶಾಂತಿ ನೆಮ್ಮದಿ ಇರದಿದ್ದರೆ ತೃಪ್ತಿ ಸಿಗುವದಿಲ್ಲಾವೆಂದರು. ಬಸವಣ್ಣನವರು ಹಾಗೂ ನೂರಕ್ಕೆ 98 ಜನರು ಶರಣ,



ಶರಣಿಯರು ಮಧುವೆಯಾಗಿದ್ದರೂ ಭಗವಂತನನ್ನು ಸಾಕ್ಷಾತ್ಕಾರ ಮಾಡಿಕೊಂಡಿದ್ದರು. ಯಾಕೆಂದರೆ ಸಂಸಾರದಲ್ಲಿ ಸದ್ಘತಿಯನ್ನು ಕಾಣಬಹುದೆಂದು ಬಸವಣ್ಣನವರು ಹೇಳಿದ್ದಾರೆ ಸತಿ ಪತಿ ಒಂದಾಗದ ಭಕ್ತಿ ಹಾಲಿನಲ್ಲಿ ವಿಷ ಬೇರೆಸಿದಂತೆ ಕಾರಣ ಸತಿ ಪತಿಗಳು ಒಂದಾಗಿ ಇಬ್ಬರದೂ ಉದ್ದೇಶ ಒಂದಾಗಿರಬೇಕು ಲಿಂಗ ಪೂಜೆ ದ್ಯಾನ ಇಬ್ಬರೂ ಕೂಡೇನೇ ಮಾಡಬೇಕು ಗಂಡ ಹೆಂಡತಿ ಕೂಡಿ ಸಾಧನೆ ಮಾಡಬೇಕು ಅಂದಾಗ ದೇವನ ಒಲುಮೆಯ ಪ್ರಾಪ್ತಿ ಪ್ರಾರಂಭವಾಗುತ್ತದೆ ಎಂದರು.

ಭಾರತ ದೇಶದಲ್ಲಿ ಪೂಜೆ, ಯೋಗ, ಪ್ರಾಣಯಾಮ, ಲಿಂಗ ಪೂಜೆ ದುಡಿಯುವದು ಸರಿಯಾಗಿ ನಿರಂತರ ಮಾಡುತ್ತಾ ಸಾಗಿದರೆ ಜೀವನದಲ್ಲಿ ಯಶಸ್ವಿ ಕಾಣಬಹುದೆಂದರು. ಗಂಡ ಹೆಂಡತಿ ಹೊಂದಾಣಿಕೆ ಎಂಬುದು ಬಹಳೇ ಮುಖ್ಯವಾಗಿದೆ ಹೊಂದಾಣಿಕೆ ಇದ್ದರೆ ಅಮೃತವಾಗುತ್ತದೆ ಇಲ್ಲದಿದ್ದರೆ ವಿಷವಾಗುತ್ತದೆ ಎಂದರು. ಪತಿ ಪತ್ನಿಯ ಹೊಂದಾಣಿಕೆಯೇ ಜೀವನವಾಗಿದ್ದು ಪ್ರೇಮದಿಂದ ಕೂಡಿರಬೇಕು ದಾಂಪತ್ಯ ಜೀವನ ಯಶಸ್ವಿಯಾಗಲು ಭಾರತದ ಇತಿಹಾಸದಲ್ಲಿ ತ್ಯಾಗ ಮನೋಭಾವನೆ ಎಂಬುದು ಇದೆ ಇಲ್ಲಿ ಭೋಗದ ಜೀವನ ಅಲ್ಲಾ ತ್ಯಾಗದ ಜೀವನ ಎಂಬುದು ಈ ದೇಶದಲ್ಲಿದೆ ಎಂದು ಹೇಳಿದ ಶ್ರೀಗಳು ವಿದ್ಯಾವಾಚಸ ಪತಿ ಮಿಸ್ರಾ ಎಂಬವರು ಬರೆದ ಪುಸ್ತಕ ಕುರಿತು ಕಥೆಯೊಂದನ್ನು ವಿವರಿಸಿದ ಶ್ರೀಗಳು ಮಿಸ್ರಾ ಅವರು ಚಿಕ್ಕವರಿರುವಾಗಲೇ ಆದ್ಯಾತ್ಮೀಕ ಚಿಂತನೆಗೆ ಒಳಗಾಗಿದ್ದರು ಅವರ ವಯೋಮಿತಿ ಹೆಚ್ಚಾಗುತ್ತಿದ್ದಂತೆ ಅವರ ತಂದೆ ಅವನಿಗೆ ಮಧುವೆ ಮಾಡಲು ತಯಾರಾದರೂ ಕೂಡಾ ಬರೆಯುವದರಲ್ಲಿಯೇ ಮಗ್ನನಾಗಿರುತ್ತಿದ್ದ ಲಗ್ನವಾಗುತ್ತದೆ ಹೆಂಡತಿ ಬಂದಿರುತ್ತಾಳೆ ಪತಿ ಊಟ, ಉಪಚಾರವೂ ಕೂಡಾ ಹೆಂಡತಿ ಮಾಡುತ್ತಾಳೆ ಅಷ್ಟಾದರೂ ಕೂಡಾ ಇತ ಬರೆಯುವದನ್ನು ಬಿಟ್ಟಿರಲಿಲ್ಲಾ ಹೆಂಡತಿಯೂ ಕೂಡಾ ಇತನು ಬರೆಯುವದಕ್ಕೆ ಸಹಾಯ ಕಲ್ಪಿಸುತ್ತಾ ಸಾಗಿದ್ದರೂ ಪುಸ್ತಕ ಬರೆಯುವದು ಕೊನೇಯ ಪುಟಕ್ಕೆ ಆಗಮಿಸಿದಾಗ ಆತ ಬೆಳಕಿನಲ್ಲಿ ಬರೆಯುವಂತಹ ದೀಪ ಆರಿ ಹೋಗುತ್ತದೆ ಆ ದೀಪಕ್ಕೆ ಎಣ್ಣೆ ಹಾಕಲು ಹೆಂಡತಿ ಬರುತ್ತಾಳೆ ಆಗ ಆಕೆ ತನ್ನ ಹೆಂಡತಿ ಎಂಬುದನ್ನು ಅರೀಯದೇ ನೀನು ಯಾರು ಎಂದು ಪ್ರಶ್ನೀಸುತ್ತಾನೆ ನನ್ನ ಹೆಸರು ವಿದ್ಯಾವತಿ ನಾನು ತಮ್ಮ ಧರ್ಮ ಪತ್ನಿಯಾಗಿದ್ದೇನೆ ಎಂದಳು ವಿವಾಹವಾಗಿ 12ವರ್ಷವಾದರೂ ಸಹ ಯಾವುದೇ ಫಲವಿಲ್ಲದೇ ನಿನ್ನ ತ್ಯಾಗ, ನಿಸ್ಕಾಮ ಪ್ರೇಮ ಸೂರ್ಯ ಚಂದ್ರ ಇರುವವರೆಗೂ ಇರಬೇಕೆಂದ ಮಿಸ್ರಾ ಅವರು ಪತ್ನಿಯ ಹೆಸರನ್ನೇ ಪುಸ್ತಕಕ್ಕೆ ಹೆಸರಿಟ್ಟ ಈಗ ಆ ಪುಸ್ತಕವನ್ನು ಇನ್ನೂ ಪ್ರಚಲಿತದಲ್ಲಿದೆ ಎಂದರು.

ಭಾರತದಲ್ಲಿ ಗ್ರಹಸ್ಥ ಜೀವನವೆಂಬುದು ಯಶಸ್ವಿಯಾಗಿದೆ ನಂಬಿಕೆ, ವಿಸ್ವಾಸ, ಪ್ರೇಮ ಹೊಂದಾಣಿಕೆ ಇದ್ದರೆ ಗ್ರಹಸ್ಥ ಜೀವನ ಯಶಸ್ವಿ ಕಾಣುತ್ತದೆ ಎಂದರು. ಪತಿ, ಪತ್ನಿ ಒಬ್ಬರಿಗೊಬ್ಬರೂ ಕೂಡಿರಬೇಕು ಎಲ್ಲರೂ ಕೂಡಿ ಊಟ ಮಾಡಿದರೆ ಪ್ರೇಮ ಎಂಬುದು ಹೆಚ್ಚಾಗುತ್ತದೆ ಮೆಚ್ಚುಗೆಯ ಮಾತಿನಿಂದ ಪ್ರೇಮ ಹೆಚ್ಚಾಗುತ್ತದೆ ಪತಿ ಪರಮೇಶ್ವರನೆಂದು ಹೇಳಿದ್ದಾರೆ ಭಾರತೀಯ ಸಂಸ್ಕೃತಿಯಲ್ಲಿ ಗಂಡ ಊಟ ಮಾಡಿದ ನಂತ ಹೆಂಡತಿ ಊಟ ಮಾಡಬೇಕು ಗಂಡ ಹೆಂಡತಿ ಆದ್ಯಾತ್ಮೀಕ ಸಾಧನೆ ಮಾಡಿದರೆ ಸರಿಯಾತ್ರಿಗಳಾಗುತ್ತೀರಿ ಇಂತಹದ್ದರಿಂದಲೇ ಹೆಂಡತಿ ತಾಯಿಯಾಗುತ್ತಾಳೆ ಗಂಡನೂ ಸಹ ತಂದೆ ರೂಪ ಕಾಣುತ್ತಾನೆ ಇಂತಹ ಕಾರ್ಯ ಬಸವಣ್ಣನವರು ಮಾಡಿಸಿ ತೋರಿಸಿದ್ದಾರೆಂದರು.

ಇದೇ ಸಮಯದಲ್ಲಿ ಲೇಖಕರಾದ ಬಸವರಾಜಪ್ಪ ಸಿರಗುಪ್ಪನವರು ಪತಿ ಪತ್ನಿ ಹಾಗೂ ಸಂಸಾರ ಹೇಗಿರಬೇಕು ಸಂಸಾರಿಕನಾಗಿ ಪಾರಮಾರ್ತವನ್ನು ಕಾಣುವ ದೃಷ್ಠಿಕೋನಗಳ ಬಗ್ಗೆ ಬಹು ಮಾರ್ಮಿಕವಾಗಿ ವಿವರಿಸಿದರು.

ಈ ಸಮಯದಲ್ಲಿ ಅಸಂಖ್ಯಾತ ಭಕ್ತಸಮೂಹ ಯೋಗೋತ್ಸವ ಸಮಿತಿಯ ಪದಾಧಿಕಾರಿಗಳು, ಹಾಗೂ ಸದಸ್ಯರು ಪಾಲ್ಗೊಂಡಿದ್ದರು.

# ಸಹಕಾರಿ ರತ್ನ ಪ್ರಶಸ್ತಿ ಪಡೆದ ಎಂ.ಎಸ್.ಸರಶೆಟ್ಟಿ ಅವರಿಗೆ ಪುರಸಭೆ ಸದಸ್ಯರಿಂದ ಸನ್ಮಾನ



**ತಾಳಿಕೋಟೆ,** ಪಟ್ಟಣದ ದಿ.ತಾಳಿಕೋಟೆ ಸಹಕಾರಿ ಬ್ಯಾಂಕ್ ನಿ,ದ ನಿರ್ದೇಶಕ ಎಂ.ಎಸ್.ಸರಶೆಟ್ಟಿ ಅವರಿಗೆ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ,ದ ವತಿಯಿಂದ ಸಹಕಾರಿ ರತ್ನ ಪ್ರಶಸ್ತಿ ಪಡೆದಿದ್ದಕ್ಕೆ ಪಟ್ಟಣದ ಪುರಸಭಾ ಸದಸ್ಯರುಗಳು ಬುಧವಾರರಂದು ಸನ್ಮಾನಿಸಿ ಗೌರವಿಸಿದರು.

ಈ ಸಮಯದಲ್ಲಿ ಪುರಸಭಾ ಸದಸ್ಯ ಮಲ್ಲಿಕಾರ್ಜುನ ಪಟ್ಟಣಶೆಟ್ಟಿ ಅವರು ಮಾತನಾಡಿ ಸಮಾಜಿಕ ಸೇವೆಯಲ್ಲಿ ನಿಸ್ವಾರ್ಥದಿಂದ ಸೇವೆ ಸಲ್ಲಿಸುತ್ತಾ ಸಾಗಿದವರಿಗೆ ಮುಂದೆ ಒಂದು ದಿನ ಪ್ರತಿಫ ಸಿಕ್ಕೆ ಸಿಗುತ್ತದೆ ಎಂಬುದಕ್ಕೆ ಎಂ.ಎಸ್.ಸರಶೆಟ್ಟಿ ಅವರಿಗೆ ಸಿಕ್ಕಿರುವ ಸಹಕಾರಿ ರತ್ನ ಪ್ರಶಸ್ತಿಯೇ ಸಾಕ್ಷೀಯಾಗಿದೆ ಎಂ.ಎಸ್.ಸರಶೆಟ್ಟಿ ಅವರು ಸಹಕಾರಿ ಕ್ಷೇತ್ರವಷ್ಟೇ ಅಲ್ಲದೇ ಹಲವಾರು ಕ್ಷೇತ್ರಗಳಲ್ಲಿ ಸಮಾಜಿಕ ಸೇವೆಯಲ್ಲಿ ತೊಡಗಿಕೊಂಡಿದ್ದಾರೆ ಈ ಪ್ರಶಸ್ತಿ ಸಿಕ್ಕಿರುವದು ತಾಳಿಕೋಟೆ ಜನತೆಗೆ ಹೆಮ್ಮೆ ತರುವಂತಹದ್ದಾಗಿದೆ ಎಂದರು.

ಈ ಸಮಯದಲ್ಲಿ ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ.ಕಟ್ಟಿಮನಿ, ಪುರಸಭಾ ಸದಸ್ಯರಾದ ಅಣ್ಣಾಜಿ ಜಗತಾಪ, ವಾಸುದೇವ ಹೆಬಸೂರ, ಪರಶುರಾಮ ತಂಗಡಗಿ, ಡಿ.ವ್ಹಿ.ಪಾಟೀಲ, ಜೈಸಿಂಗ್ ಮೂಲಿಮನಿ, ಮುದಕಪ್ಪ ಬಡಿಗೇರ, ಮುಸ್ತಪಾ ಚೌಧ್ರಿ, ಮೈಹಿಬೂಬ ಲಾಹೋರಿ, ಮೊದಲಾದವರು ಇದ್ದರು.

# ಕುಮಾರಿ ಪೃಥ್ವಿ ಹೆಗಡೆಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ



**ತಾಳಿಕೋಟೆ,** 69 ಕನ್ನಡ ರಾಜ್ಯೋತ್ಸವ ಪ್ರಯುಕ್ತ ರಾಯಬಾಗ ತಾಲೂಕಿನ ಬ್ಯಾಕೋಡದ ಶ್ರೀ ಲಕ್ಕಮ್ಮದೇವಿ ಕಲಾ ಪೋಷಕ ಸಂಘದ ವತಿಯಿಂದ ಧಾರವಾಡದ ರಂಗಾಣದಲ್ಲಿ ನಡೆದ ಕನ್ನಡ ನುಡಿ ಸಂಭ್ರಮ ಕಾರ್ಯಕ್ರಮದಲ್ಲಿ ತಾಳಿಕೋಟೆಯ ನಾಟ್ಯಮಯೂರಿ ಕು. ಪೃಥ್ವಿ ಎಮ್ ಹೆಗಡೆ ಇವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಪುರಸ್ಕರಿಸಲಾಗಿದೆ.

ಭರತ ನಾಟ್ಯ ಕಲಾವಿದೆ ಕುಮಾರಿ ಪೃಥ್ವಿ ಹೆಗಡೆ ಇವಳಿಗೆ ಭರತ ನಾಟ್ಯದಲ್ಲಿ ಹಾಗೂ ಜಾನಪದ ನೃತ್ಯದಲ್ಲಿಯ ಸಾಧನೆಯನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿತ್ತು ಸದರಿ ಪ್ರಶಸ್ತಿಯನ್ನು ಧಾರವಾಡದ ರಂಗಾಯಣದ ನಿರ್ದೇಶಕ ಚಿತ್ರನಟ ರಾಜು ತಾಳಿಕೋಟಿ, ಸಂಘದ ಅಧ್ಯಕ್ಷ ಸಿದ್ರಾಮ ಎಮ್. ನಿಲಜಗಿ ಹಾಗೂ ಪೂಜ್ಯರು, ಅಲ್ಲದೇ ಗಣ್ಯ ಮಾನ್ಯರು ಪ್ರಶಸ್ತಿಯನ್ನು ಪ್ರಧಾನ ಮಾಡಿದರು.


ಇದೇ ಸಮಯದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾದಕರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ತಾಳಿಕೋಟೆಯ ನೃತ್ಯ ಶಿಕ್ಷಕ ವಿನೋದಕುಮಾರ ಚಿಕ್ಕಮಠ ಇವರ ಹತ್ತಿರ ಕಳೆದ 8 ವರ್ಷಗಳಿಂದ ಭರತ ನಾಟ್ಯ ತರಬೇತಿ ಪಡೆದುಕೊಳ್ಳುತ್ತಿರುವ ಕು.ಪೃಥ್ವಿ ಹೆಗಡೆ ಈಗಾಗಲೇ ಕರ್ನಾಟಕ, ಕೇರಳ, ಉತ್ತರ ಪ್ರದೇಶ, ಮಹಾರಾಷ್ಟ್ರ, ಆಂಧ್ರ ಪ್ರದೇಶ, ಹಾಗೂ ಚಂನದ ವಾಹಿನಿಯಲ್ಲಿ ಹಾಗೂ ಶ್ರೀ ಬಸವ ವಾಹಿನಿಯಲ್ಲಿ ತಮ್ಮ ಭರತನಾಟ್ಯ ಹಾಗೂ ಜಾನಪದ ನೃತ್ಯ ಪ್ರದರ್ಶನ ನೀಡಿ ರಾಜ್ಯ, ಅಂತರಾಜ್ಯ, ರಾಷ್ಟ್ರೀಯ, ಅಂತರಾಷ್ಟ್ರೀಯ, ಹಲವಾರು ಪ್ರಶಸ್ತಿ ಪಡೆದುಕೊಂಡು ಇಲ್ಲಿಯವರೆಗೆ 968 ನೃತ್ಯ ಪ್ರದರ್ಶನ ನೀಡಿದ್ದಾಳೆ.

ಪೃಥ್ವಿ ಹೆಗಡೆ ಇವಳಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದ್ದಕ್ಕೆ ಶ್ರೀ ವಿರಕ್ತೇಶ್ವರ ಭರತನಾಟ್ಯ ತರಬೇತಿ ಸಂಸ್ಥೆ ಶಿಕ್ಷಕ ವಿನೋದ ಚಿಕ್ಕಮಠ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

***

# ಸಾರಂಗಶ್ರೀ ಕೃಷಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ



**ಸಿಂದಗಿ:** ಲಿಂ.ಚೆನ್ನವೀರ ಮಹಾಸ್ವಾಮಿಗಳು ತಮ್ಮ ಬದುಕಿನುದ್ದಕ್ಕೂ ಕೃಷಿಯ ಜೀವನವನ್ನು ಮೈಗೂಡಿಸಿಕೊಂಡವರು. ಶೈಕ್ಷಣಿಕ ಮತ್ತು ಸಾಮಾಜಿಕ ಕಾರ್ಯವನ್ನು ಮಾಡುವುದರ ಜೊತೆಗೆ ಕೃಷಿ ಕ್ಷೇತ್ರಕ್ಕೂ ಹೆಚ್ಚು ಒತ್ತು ನೀಡುವ ಮೂಲಕ ಕಾಯಕಯೋಗಿ ಯಾದವರು ಎಂದು ಮರೆಗುದ್ದಿ ಅಡವಿ ಸಿದ್ದೇಶ್ವರ ಮಠದ ಡಾ.ನಿರುಪಾಧೀಶ್ವರ ಮಹಾಸ್ವಾಮಿಗಳು ಹೇಳದರು. ಸಿಂದಗಿಯ ಸಾರಂಗಮಠದ ಪರಮಪೂಜ್ಯ ಲಿಂಗೈಕ್ಯ ಕಾಯಕಯೋಗಿ ಚೆನ್ನವೀರ ಮಹಾಸ್ವಾಮೀಜಿಯವರ 131ನೇಯ ಜಯಂತೋತ್ಸವ ನಿಮಿತ್ಯವಾಗಿ ಲಿಂಗೈಕ್ಯ ಶ್ರೀಗಳ ಹೆಸರಿನ ಮೇಲೆ ಕೊಡಮಾಡುವ ಸಾರಂಗಶ್ರೀ ಕೃಷಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಶ್ರೀಗಳ ಬದುಕು ನಿಜವಾಗಲೂ ಒಂದು ಇತಿಹಾಸ. ಅವರ ವ್ಯಕ್ತಿತ್ವದ ಬಗ್ಗೆ ಅವರ ಕಾರ್ಯದ ಬಗ್ಗೆ ನಾವು ಸದಾ ಸ್ಮರಿಸಿಕೊಂಡು ಅವರ ಗುಣಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ತತ್ವ ಸಿದ್ದಾಂತಗಳನ್ನು ಇಂದಿನ ಯುವ ಪೀಳಿಗೆಗೆ ಪಸರಿಸುವ ಕಾರ್ಯ ಶ್ರೀಮಠದಿಂದ ನಿರಂತರವಾಗಿ ನಡೆಯುತ್ತಿದೆ ಎಂದರು.

ಈ ಸಂದರ್ಭದಲ್ಲಿ ಸಾರಂಗ ಶ್ರೀ ಕೃಷಿ ಪ್ರಶಸ್ತಿ ಪುರಸ್ಕೃತ ಸುನೀಲ ನಾರಾಯಣಕರ ಮಾತನಾಡಿ, ಇಂದಿನ ವೈಜ್ಞಾನಿಕ ಯುಗದಲ್ಲಿ ಕೃಷಿ ಬಗ್ಗೆ ಬಹಳಷ್ಟು ಜನ ನಿರಾಸೆಯನ್ನು ಮೂಡಿಸುತ್ತಿದ್ದಾರೆ ಇದು ನಮಗೆ ಮಾರಕ. ಮಣ್ಣಲ್ಲಿ ಮಣ್ಣಾಗಿ ದುಡಿದವರಿಗೆ ಯಾವ ರೋಗಗಳು ಬರುವುದಿಲ್ಲ. ಶಿಕ್ಷಣದಲ್ಲಿ ಕೃಷಿಯ ಬಗ್ಗೆ ಹೆಚ್ಚು ಅವಕಾಶ ನೀಡಬೇಕು. ಪಾಲಕರು ತಮ್ಮ ಮಕ್ಕಳಿಗೆ ಕೃಷಿ ಬಗ್ಗೆ ಮತ್ತು ಬೆಳೆಗಳ ಬಗ್ಗೆ ವಿವರಣೆಗಳನ್ನು ನೀಡುತ್ತಿರಬೇಕು. ಕೃಷಿಯನ್ನು ಪ್ರೀತಿಸುವ ಗುಣ ನಮ್ಮಲ್ಲಿ ಮೂಡಬೇಕಾಗಿದೆ ಎಂದರು.

ಈ ವೇಳೆ ಜಮಖಂಡಿಯ ಕೊಣ್ಣೂರು ಹೊರಗಿನಮಠದ ಡಾ.ವಿಶ್ವ ಪ್ರಭುದೇವ ಶಿವಾಚಾರ್ಯರು, ಕನ್ನೊಳ್ಳಿ ಹಿರೇಮಠದ ಸಿದ್ದಲಿಂಗ ಶಿವಾಚಾರ್ಯರು ಮಾತನಾಡಿ, ಕಾಯಕಯೋಗಿ ಲಿಂ.ಚೆನ್ನವೀರ ಮಹಾಸ್ವಾಮಿಗಳು ಕೃಷಿ ಸಂತನಾಗಿ ಬದುಕನ್ನ ಮಾಡಿದಂತವರು. ಅವರ ಜಯಂತಿಯೆಂದು ಶ್ರೀಮಠ ಉತ್ತಮ ರೈತನಿಗೆ ಗುರುತಿಸಿ ಪ್ರತಿ ವರ್ಷ ಸಾರಂಗ ಶ್ರೀ ಕೃಷಿ ಪ್ರಶಸ್ತಿ ಪ್ರಧಾನ ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಮಾತನಾಡಿ, ಲಿಂ.ಕಾಯಕಯೋಗಿ ಚನ್ನವೀರ ಮಹಾಸ್ವಾಮಿಗಳು ಮಾಡಿದ ಕಾರ್ಯ ಸ್ಮರಿಸಿ ಅವರೊಬ್ಬರು ಔದಾರ್ಯದ ಗುರುಗಳಾಗಿದ್ದರು ಎಂದರು.

ಈ ವೇಳೆ ಮಹಾ ತಪಸ್ವಿ ಉಜ್ಜಯಿನಿ ಜಗದ್ಗುರು ಸಿದ್ದಲಿಂಗ ಶಿವಾಚಾರ್ಯರ ಕುರಿತಾಗಿ ಗೌರ್ ಗ್ರಾಮದ ಶಿವಲಿಂಗಯ್ಯ ಹಿರೇಮಠ ಪ್ರವಚನ ನೆರವೇರಿಸಿದರು. ಡಾ.ರವಿ ಗೋಲಾ ಮುತ್ತು ಪೂಜಾ ಹಿರೇಮಠ್ ನಿರೂಪಿಸಿದರು. ಡಾ. ಶರಣಬಸವ ಜೋಗುರು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಡಾ.ಎಂ.ಎಂ.ಪಡಶೆಟ್ಟಿ, ಅಶೋಕ ವಾರದ, ಚನ್ನಪ್ಪ ಕತ್ತಿ, ವಿರೇಶ ಜೋಗುರ, ಎಂ.ಎಸ್.ಹೈಯಾಳಕರ ಸೇರಿದಂತೆ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

## ಪ್ರಪಂಚದ ಎರಡನೇ ಮಹಾಯುದ್ಧದ ಗೌರವಧನ ಪಡೆಯುತ್ತಿರುವ ಫಲಾನುಭವಿಗಳ ಗಮನಕ್ಕೆ

ಬೆಳಗಾವಿ : ಪ್ರಪಂಚದ ಎರಡನೇ ಮಹಾಯುದ್ಧದ ಗೌರವಧನ ಪಡೆಯುತ್ತಿರುವ ಫಲಾನುಭವಿಗಳು ಪ್ರತಿ ವರ್ಷ ಜೀವಿತ ಪ್ರಮಾಣ ಪತ್ರ ಸಲ್ಲಿಸುವುದು ಕಡ್ಡಾಯವಾಗಿರುವುದರಿಂದ ಗೌರವಧನ ಪಡೆಯುತ್ತಿರುವ ಎಲ್ಲಾ ಫಲಾನುಭವಿಗಳು ಡಿಸೆಂಬರ್ 31 ರೊಳಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರ ಕಾರ್ಯಾಲಯಕ್ಕೆ ವೈಯಕ್ತಿಕವಾಗಿ ಬಂದು ಜೀವಿತ ಪ್ರಮಾಣ ಪತ್ರವನ್ನು ಸಲ್ಲಿಸುವುದು, ಸಲ್ಲಿಸದೇ ಇರುವ ಫಲಾನುಭವಿಗಳ ಗೌರವಧನವನ್ನು ಸ್ಥಗಿತಗೊಳಿಸಲಾಗುವುದು ಎಂದು ಬೆಳಗಾವಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಬೆಳಗಾವಿ : ಜಿಲ್ಲಾ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದ ವಿಕಲಚೇತನರ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ಸಾಧನೆ ಮಾಡಿರುವ ವಿಕಲಚೇತನ ವ್ಯಕ್ತಿಗಳನ್ನು ಸನ್ಮಾನಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದ ವಿಕಲಚೇತನರ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸಾಧನೆ ಮಾಡಿರುವ ವಿಕಲಚೇತನರು ಅಗತ್ಯ ದಾಖಲಾತಿಗಳೊಂದಿಗೆ ನ.30 ರೊಳಗಾಗಿ ಬೆಳಗಾವಿ ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಬೆಳಗಾವಿ ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಉಪನೀರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾ

# ಮಕ್ಕಳಲ್ಲಿನ ಬದಲಾವಣೆಗಳನ್ನು ಸೂಕ್ಷ್ಮವಾಗಿ ಗಮನಿಸಿ : ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ



ಕಾರವಾರ, : ಮಕ್ಕಳು ತಮ್ಮ ಮೇಲೆ ನಡೆಯುವ ದೌರ್ಜನ್ಯಗಳ ಕುರಿತಂತೆ ಆರಂಭದಲ್ಲಿಯೇ ತಮ್ಮದೇ ಆದ ಭಾಷೆಯಲ್ಲಿ ತಿಳಿಸುವ ಪ್ರಯತ್ನ ಮಾಡುತ್ತಾರೆ, ಪೋಷಕರು ಮಕ್ಕಳ ಮಾತುಗಳನ್ನು ಆಲಿಸಿ, ಅವರಲ್ಲಿನ ಬದಲಾವಣೆಗಳನ್ನು ಸೂಕ್ಷ್ಮವಾಗಿ ಗಮನಿಸುವ ಮೂಲಕ ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಯಬೇಕು ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಉತ್ತರ ಕನ್ನಡ ಇವರ ಸಂಯುಕ್ತಾಶ್ರಯದಲ್ಲಿ "ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016, ತಿದ್ದುಪಡಿ -2023ರ ಮಕ್ಕಳ ಸಂರಕ್ಷಣೆಗಾಗಿರುವ ವಿವಿಧ ಹಂತಗಳ ಮಕ್ಕಳ ಸಂರಕ್ಷಣಾ ಸಮಿತಿಗಳ ಕಾರ್ಯವಿಧಾನ ಹಾಗೂ ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳ ಅನುಷ್ಠಾನದಲ್ಲಿ ವಿವಿಧ ಅಧಿಕಾರಿಗಳಿಗೆ ಕರ್ತವ್ಯ, ಜವಾಬ್ದಾರಿಗಳ ಕುರಿತು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳಲ್ಲಿ ಶೇ.70 ರಷ್ಟು ಮಕ್ಕಳಿಗೆ ಸುರಕ್ಷಿತ ಎಂದು ಕಂಡುಬರುವ ಸ್ಥಳಗಳಲ್ಲೇ ನಡೆಯುತ್ತವೆ. ಶಾಲೆಗಳಲ್ಲಿ, ಮನೆಗಳಲ್ಲಿ, ಅಪರಿಚಿತರಿಗಿಂತ ಪರಿಚಿತ ವ್ಯಕ್ತಿಗಳಿಂದಲೇ ಹೆಚ್ಚು ದೌರ್ಜನ್ಯ ನಡೆಯಲಿದ್ದು, ಹೆಣ್ಣು ಮಕ್ಕಳು ಮಾತ್ರವಲ್ಲದೇ ಗಂಡು ಮಕ್ಕಳ ಮೇಲೆಯೂ ನಡೆಯಲಿದ್ದು, ಇಂತಹ ಸಂದರ್ಭದಲ್ಲಿ ಪೋಷಕರು ಮಕ್ಕಳಲ್ಲಾಗುವ ಬದಲಾವಣೆಗಳನ್ನು ಸೂಕ್ಷ್ಮವಾಗಿ ಅವಲೋಕಿಸಬೇಕು ಎಂದರು.

ಪೋಷಕರು ಮತ್ತು ಶಾಲಾ ಶಿಕ್ಷಕರ ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಯುವಲ್ಲಿ ಪ್ರಮುಖವಾದ ಜವಾಬ್ದಾರಿ ವಹಿಸಲಿದ್ದು, ಮಕ್ಕಳಿಗೆ ಸೂಕ್ತ ಅರಿವು ಮೂಡಿಸಬೇಕು, ಪ್ರಕರಣಗಳು ನಡೆದಲ್ಲಿ ತಕ್ಷಣವೇ ತಮ್ಮ ಗಮನಕ್ಕೆ ತರುವಂತೆ ತಿಳಿಸಬೇಕು. ಮಕ್ಕಳ ಸುರಕ್ಷತೆಗೆ ಗರಿಷ್ಠ ಆದ್ಯತೆ ನೀಡುವ ಮೂಲಕ ಮಕ್ಕಳಿಗಾಗಿ, ಸುರಕ್ಷಿತ ಮತ್ತು ಉತ್ತಮ ಸಮಾಜ ನಿರ್ಮಿಸುವ ಹೊಣೆಗಾರಿಕೆ ಸಮಾಜದಲ್ಲಿನ ಪ್ರತಿಯೊಬ್ಬರಿಗೂ ಇದೆ ಎಂದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಮಾತನಾಡಿ, ಸಮಾಜದಲ್ಲಿ ಮೌಲ್ಯಗಳ ಕುಸಿತದಿಂದಾಗಿ ಮಕ್ಕಳ ಮೇಲೆ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿವೆ. ಮಕ್ಕಳ ರಕ್ಷಣೆಯ ಚಟುವಟಿಕೆಗಳು ಕುಟುಂಬಗಳಲ್ಲಿಯೇ ಆರಂಭವಾಗಬೇಕು. ಮಕ್ಕಳ ಹಕ್ಕುಗಳ ರಕ್ಷಣೆಯು ಯಾವುದೇ ಒಂದು ಇಲಾಖೆಯ ಜವಾಬ್ದಾರಿಯಾಗದೇ ಪ್ರತಿಯೊಂದು ಇಲಾಖೆಯ ಜವಾಬ್ದಾರಿಯಾಗಿದೆ. ಈ ಕುರಿತಂತೆ ಗ್ರಾಮ, ತಾಲೂಕು, ಜಿಲ್ಲಾ ಮಟ್ಟದಲ್ಲಿ ರಚನೆಯಾಗಿರುವ ಸಮಿತಿಗಳು ತಮ್ಮ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸುವ ಮೂಲಕ ಜಿಲ್ಲೆಯಲ್ಲಿ ಮಕ್ಕಳ ಸ್ನೇಹಿ ಸುರಕ್ಷಿತ ವಾತಾವರಣ ನಿರ್ಮಾಣ ಮಾಡಬೇಕು ಎಂದರು.

ಕಾರ್ಯಗಾರದಲ್ಲಿ ವಿಶೇಷ ಉಪನ್ಯಾಸ ನೀಡಿದ ಡಾ. ರಾಘವೇಂದ್ರ ಭಟ್, ಮಕ್ಕಳ ಹಕ್ಕುಗಳ ರಕ್ಷಣೆಯಿಂದ ಮಾತ್ರ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಬೆಳವಣಿಗೆ ಕಾಣಲು ಸಾಧ್ಯ. ಮಕ್ಕಳ ರಕ್ಷಣಾ ನೀತಿಯ ಅನುಷ್ಠಾನಕ್ಕಾಗಿ ಜಿಲ್ಲೆಯ ವಿವಿಧ ಅಧಿಕಾರಿಗಳು ಹಲವು ಜವಾಬ್ದಾರಿಗಳನ್ನು ವಹಿಸಲಾಗಿದ್ದು, ಈ ಕಾರ್ಯದಲ್ಲಿ ಎಲ್ಲಾ ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ಜಿಲ್ಲೆಯಲ್ಲಿ, ಮಕ್ಕಳ ಮೇಲಿನ ದೌರ್ಜನ್ಯ, ಬಾಲ್ಯ ವಿವಾಹ, ಬಾಲ ಮತ್ತು ಕಿಶೋರ ಕಾರ್ಮಿಕರ ಪ್ರಕರಣ, ಮಕ್ಕಳ ಕಾಣೆ ಪ್ರಕರಣ ಮತ್ತು ಶಾಲೆ ಬಿಟ್ಟ ಮಕ್ಕಳ ಸಂಖ್ಯೆಯಲ್ಲಿ ಶೂನ್ಯ ದಾಖಲೆ ಮಾಡಬೇಕು, ಮಕ್ಕಳ ಸಂರಕ್ಷಣೆಯ ಕಾರ್ಯದಲ್ಲಿ ಯಾವುದೇ ಹಂತದಲ್ಲೂ ನಿರ್ಲಕ್ಷ್ಯ ವಹಿಸಬಾರದು ಎಂದರು.

ಕಾರ್ಯಕ್ರಮದಲ್ಲಿ ಮಕ್ಕಳ ಸಂರಕ್ಷಣೆ ಕುರಿತ ಕರಪತ್ರ ಮತ್ತು ಮಾಹಿತಿ ಪತ್ರಗಳ ಬಿಡುಗಡೆ, ಪ್ರತಿಜ್ಞಾ ವಚನ ಸ್ವೀಕಾರ ಹಾಗೂ ಇಬ್ಬರು ಮಕ್ಕಳನ್ನು ದತ್ತು ನೀಡುವ ಕಾರ್ಯಕ್ರಮ ನಡೆಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿರೂಪಾಕ್ಷ ಗೌಡ ಪಾಟೀಲ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸೋನಲ್ ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ತಾಲೂಕು 10ನೇ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ವಿಗೆ ಎಲ್ಲರ ಸಹಕಾರ ಅಗತ್ಯ-ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ



**ಬಸವನಬಾಗೇವಾಡಿ,** : ತಾಲೂಕಿನ ಇವಣಗಿ ಗ್ರಾಮದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಡಿ.2 ರಂದು ಹಮ್ಮಿಕೊಂಡಿರುವ ಬಸವನಬಾಗೇವಾಡಿ ತಾಲೂಕು ಹತ್ತನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅವಿಸ್ಮರಣೀಯವಾಗಿ ಮಾಡುವ ನಿಟ್ಟಿನಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಸೇರಿದಂತೆ ಎಲ್ಲ ಕನ್ನಡ ಮನಸ್ಸುಗಳು ತನು-ಮನ-ಧನದಿಂದ ಸಹಕಾರ ನೀಡುವ ಮೂಲಕ ಸಮ್ಮೇಳನದ ಯಶಸ್ವಿಗೆ ಎಲ್ಲರೂ ಸಹಕಾರ ನೀಡುವ ಅಗತ್ಯವಿದೆ ಎಂದು ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ ಹೇಳಿದರು.

ಪಟ್ಟಣದ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ಇವಣಗಿ ಗ್ರಾಮದಲ್ಲಿ ಹಮ್ಮಿಕೊಂಡಿರುವ ತಾಲೂಕು ಹತ್ತನೇ ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವ ಸಿದ್ಧತೆ ಕುರಿತು ಕರೆಯಲಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳ, ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳ, ಗಣ್ಯರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ವಿಗೆ ವಿವಿಧ ಸಮಿತಿಗಳನ್ನು ರಚನೆ ಮಾಡುವ ಮೂಲಕ ಸಮ್ಮೇಳನವು ಅಚ್ಚುಕಟ್ಟಾಗಿ ನಡೆಯುವಂತೆ ಕನ್ನಡ ಸಾಹಿತ್ಯ ಪರಿಷತ್ತು ಗಮನ ಹರಿಸಬೇಕು. ಸಮಿತಿಗಳಿಗೆ ವಹಿಸುವ ಜವಾಬ್ದಾರಿಯನ್ನು ಸಮಿತಿಯಲ್ಲಿರುವ ಸದಸ್ಯರು ನಿರ್ವಹಿಸಬೇಕು. ಸಮ್ಮೇಳನಕ್ಕೆ ಹತ್ತು ದಿನಗಳ ಮಾತ್ರ ಬಾಕಿಯಿವೆ. ಸಮ್ಮೇಳನದ ತಯಾರಿ ಭರದಿಂದ ಸಾಗಬೇಕಿದೆ. ಪ್ರತಿಯೊಬ್ಬ ನೌಕರ ಬಾಂಧವರು ಸಮ್ಮೇಳನಕ್ಕೆ ಧನಸಹಾಯ ನೀಡುವ ಮೂಲಕ ಸಮ್ಮೇಳನದ ಯಶಸ್ವಿಗೆ ಸಹಕಾರ ನೀಡಬೇಕು. ಎಲ್ಲ ಇಲಾಖೆಯ ಅಧಿಕಾರಿಗಳು ಸಮ್ಮೇಳನಕ್ಕೆ ಸಹಕಾರ ನೀಡಬೇಕೆಂದರು.

ತಾಪಂ ಇಓ ಪ್ರಕಾಶ ದೇಸಾಯಿ ಮಾತನಾಡಿ, ಇವಣಗಿ ಗ್ರಾಮಕ್ಕೆ ಸಂಬಂಧಿಸಿದ ಗ್ರಾಮ ಪಂಚಾಯಿತಿಯಿಂದ ಇಡೀ ಗ್ರಾಮದ ಸ್ವಚ್ಛತೆ ಮಾಡಿಸುವದು ಸೇರಿದಂತೆ ಅಗತ್ಯ ನೆರವು ಸಮ್ಮೇಳನಕ್ಕೆ ನೀಡಲಾಗುವದು. ವಿವಿಧ ಗ್ರಾಮ ಪಂಚಾಯಿತಿಗಳಿಂದ ಸಾಧ್ಯವಾದಷ್ಟು ಸಮ್ಮೇಳನಕ್ಕೆ ಸಹಕಾರ ನೀಡುವ ಭರವಸೆ ನೀಡಿದರು.

ಬಿಇಓ ವಸಂತ ರಾಠೋಡ ಮಾತನಾಡಿ, ಶಿಕ್ಷಣ ಇಲಾಖೆಯಿಂದ ಸಮ್ಮೇಳನದ ಯಶಸ್ವಿಗೆ ಬೇಕಾದ ಸಹಕಾರ ನೀಡಲಾಗುವುದು. ಸಮ್ಮೇಳನದ ದಿನದಂದು ಪಟ್ಟಣದಿಂದ ವಿವಿಧ ಶಾಲೆಗಳ ಬಸ್ ನೆರವು ಪಡೆದುಕೊಂಡು ಸಮ್ಮೇಳನಕ್ಕೆ ಬರುವ ಜನರಿಗೆ ವಾಹನದ ವ್ಯವಸ್ಥೆ ಕಲ್ಪಿಸಲಾಗುವದು ಎಂದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶಿವಾನಂದ ಡೋಣೂರ ಮಾತನಾಡಿ, ಇವಣಗಿ ಗ್ರಾಮದಲ್ಲಿ ಹಮ್ಮಿಕೊಂಡಿರುವ ತಾಲೂಕು ಸಮ್ಮೇಳನದ ಯಶಸ್ವಿಗೆ ಎಲ್ಲ ಇಲಾಖೆಯ ಅಧಿಕಾರಿಗಳು ತುಂಬಾ ಸಹಕಾರ ನೀಡುವ ಅಗತ್ಯವಿದೆ. ಸಮ್ಮೇಳನದ ಯಶಸ್ವಿಗೆ ಗ್ರಾಮಸ್ಥರು ಸೇರಿದಂತೆ ತಾಲೂಕಿನ ಸಮಸ್ತ ಕನ್ನಡ ಮನಸ್ಸುಗಳ ಸಹಕಾರ ನೀಡಬೇಕೆಂದರು.

ಸಭೆಯಲ್ಲಿ ಮನಗೂಳಿ ಪುರಸಭೆ ಮುಖ್ಯಾಧಿಕಾರಿ ಎಸ್.ಐ.ರೇವೂರಕರ, ರವಿ ರಾಠೋಡ, ಅಶೋಕ ಚಲವಾದಿ, ಪರಶುರಾಮ ದಿಂಡವಾರ, ಶಿವಾನಂದ ಮಂಗಾನವರ, ಅರವಿಂದ ಸಾಲವಾಡಗಿ ಇತರರು ಮಾತನಾಡಿದರು.

ಸಭೆಯಲ್ಲಿ ಪಿಎಸ್ಐ ಎಂ.ಆರ್. ಕಂಚಗಾರ, ತೋಟಗಾರಿಕೆ ಇಲಾಖೆಯ ಸಿ.ಬಿ.ಪಾಟೀಲ, ಕೃಷಿ ಇಲಾಖೆಯ ಎಂ. ಎಚ್.ಯರಝರಿ, ಪಶು ಇಲಾಖೆಯ ಡಾ. ಎಸ್.ಬಿ.ಕರಜಗಿ, ಆರೋಗ್ಯ ಇಲಾಖೆಯ ಎಸ್.ಎಸ್.ಮೇಟಿ, ರೇಷ್ಮೆ ಇಲಾಖೆಯ ಎಸ್.ಐ.ಗೋಲಗೊಂಡ, ಹಿಂದುಳಿದ ವರ್ಗಗಳ ಇಲಾಖೆಯ ಸಿ.ಜಿ.ಬಿರಾದಾರ, ಪುರಸಭೆ ಮುಖ್ಯಾಧಿಕಾರಿ ಅಪ್ರೋಜ್ ಪಟೇಲ, ಖಜಾನೆ ಇಲಾಖೆಯ ಎಂ.ಆರ್.ಪಾಟೀಲ, ಕೆ.ಜಿ.ಚವ್ಹಾಣ, ಮಂಜು ಹಳ್ಳೂರ, ಎ.ಎ.ಸಾಂಗ್ಲಿ, ಕಸಾಪ ಪದಾಧಿಕಾರಿಗಳಾದ ಬಸವರಾಜ ಮೇಟಿ, ಯಮನಪ್ಪ ಮಿಣಜಗಿ, ಶಿವಪುತ್ರ ಅಂಕದ,ಪ್ರಕಾಶ ಬೆಣ್ಣೂರ, ಇವಣಗಿ ಗ್ರಾಮದ ಸಿ.ಆರ್.ಸುಬಾನಪ್ಪನವರ, ಪರಸಪ್ಪ ಕಳ್ಳಿಗುಡ್ಡ, ವಿವಿಧ ಸಂಘಟನೆಗಳ ಪದಾಧಿಕಾರಿಗಳಾದ ಅಶೋಕ ಗುಡದಿನ್ನಿ, ಮಹಾಂತೇಶ ಚಕ್ರವರ್ತಿ, ವಿವೇಕಾನಂದ ಕಲ್ಯಾಣಶೆಟ್ಟಿ, ಗೋಪಾಲ ಲಮಾಣಿ, ಮುತ್ತು ಬಿದರಿ ಇತರರು ಇದ್ದರು. ಬಿ.ವ್ಹಿ. ಚಕ್ರಮನಿ ಸ್ವಾಗತಿಸಿದರು. ಶಿವು ಮಡಿಕೇಶ್ವರ ನಿರೂಪಿಸಿದರು. ಎಂ.ಬಿ.ತೋಟದ ವಂದಿಸಿದರು.

****

# ಅಂತರಾಷ್ಟ್ರೀಯ ಮಕ್ಕಳ ಹಕ್ಕುಗಳ ಒಡಂಬಡಿಕೆ 35 ನೇ ವರ್ಷಾಚರಣೆ




ಬೆಳಗಾವಿ: ಅಂತರಾಷ್ಟ್ರೀಯ ಮಕ್ಕಳ ಹಕ್ಕುಗಳ ಒಡಂಬಡಿಕೆ 35 ನೇ ವರ್ಷಾಚರಣೆ" ಅಂಗವಾಗಿ ಜಾಗೃತಿ ಹಾಗೂ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಇಲಾಖೆ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ವಿಶೇಷ ಪೊಲೀಸ್ ಘಟಕ ಬೆಳಗಾವಿ ಹಾಗೂ ಜಿಲ್ಲೆಯ ವಿವಿಧ ಸ್ವಯಂ- ಸೇವಾ ಸಂಸ್ಥೆಗಳಾದ ಮಿರಾಕಲ್ ಫೌಂಡೇಶನ್, ಮಹೇಶ್ ಫೌಂಡೇಶನ್, ಅನ್ನೋಲ್ ತಂಗುಧಾಮ ಹಾಗೂ ಸ್ಪಂದನಾ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಜಾಥಾ ಕಾರ್ಯಕ್ರಮಕ್ಕೆ (ಶ್ರೀ ಪಿ. ಮುರಳಿ ಮೋಹನ ರೆಡ್ಡಿ ಮಾನ್ಯ ಹಿರಿಯ ಸಿವಿಲ್ ನ್ಯಾಯಾಧಿಶರು, ( ಆರ್. ನಾಗರಾಜ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಣ್ಣಪ್ಪಾ ಹೆಗಡೆ 'ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾ-ರಿಗಳು ಶ್ರೀ ಸದಾಶಿವ ಕಟ್ಟಿಮನಿ ಹಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳು ಪೊಲೀಸ್ ಆಯುಕ್ತಾಲಯ, ಜೆ. ಟಿ. ಲೋಕಪ್ಪರಪ್ಪ,- ರೀಮತಿ ವಿ. ಸುಶೀಲ ಕಾರ್ಯದರ್ಶಿಗಳು, ಸ್ಪೈಂದನ ಸಂಸ್ಥೆ ಇವರು ಉದ್ಘಾಟನೆಯ ಮೂಲಕ ಚಾಲನೆಯನ್ನು ನೀಡಿದರು.

ಜಾಥಾ ನಂತರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಭಾಂಗಣದಲ್ಲಿ ಮಕ್ಕಳ ಹಕ್ಕುಗಳ ಒಡಂಬಡಿಕೆ 35ನೇ ವರ್ಷಾಚರಣೆಯ ಬಗ್ಗೆ, ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಜೆ.ಟಿ. ಲೋಕೇಶ್ವರಪ್ಪ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಮಕ್ಕಳ ಹಕ್ಕುಗಳ ಒಡಂಬಡಿಕೆಯ ಇತಿಹಾಸ, ಮಕ್ಕಳಿಗಿರುವ ಮೂಲಭೂತ ಹಕ್ಕುಗಳ ಮತ್ತು ಮಕ್ಕಳಿಗಾಗಿರುವ ಕಾಯಿದೆಗಳ ಬಗ್ಗೆ, ಸಂಕ್ಷಿಪ್ತವಾಗಿ ಮಾತನಾಡಿದರು. ಹಾಗೆಯೇ ಈ ಕಾರ್ಯಕ್ರಮದ ಅತಿಥಿಗಳಾದ ಶ್ರೀಮತಿ, ವಿಸುಶೀಲ ರವರು ಮಾತನಾಡುತ್ತಾ ವಿಶ್ವಸಂಸ್ಥೆಯು 20 ನವೆಂಬರ್ 1989 ರಲ್ಲಿ ಮಕ್ಕಳ ಹಕ್ಕುಗಳ ಒಡಂಬಡಿಕೆಯನ್ನು ರಚಿಸಿ ಜಾಗತಿಕವಾಗಿ ಮಕ್ಕಳಿಗೆ ಇರುವ ಮೂಲಭೂತ ಹಕ್ಕುಗಳ ಬಗ್ಗೆ ತಿಳಿಸಿಕೊಟ್ಟಿತು. ಕಳೆದ 35 ವರ್ಷಗಳಲ್ಲಿ ಮಕ್ಕಳ ಹಕ್ಕುಗಳು ಎಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಂಡಿದೆ ಎಂಬುವುದನ್ನು ಸ್ವ ವಿಸ್ತಾರವಾಗಿ ವಿಮರ್ಶಿಸಿದರು.

ಪಿ. ಮುರಳಿ ಮೋಹನ ರೆಡ್ಡಿ ಮುಖ್ಯ ಹಿರಿಯ ಸಿವಿಲ್ ನ್ಯಾಯಾಧೀಶರು ತಮ್ಮ ಅಧ್ಯಕ್ಷಿಯ ಭಾಷಣದಲ್ಲಿ ಸರ್ಕಾರದ ಮೂರು ಅಂಗಗಳಾದ ಶಾಸಕಾಂಗ, ಕಾರ್ಯಂಗ ಮತ್ತು ನ್ಯಾಯಾಂಗದ ಕಾರ್ಯಗಳ ಮಕ್ಕಳಿಗೆ ತಿಳಿಸುತ್ತಾ ಮಕ್ಕಳು ವಿದ್ಯಾಭ್ಯಾಸದ ಕಡೆಗೆ ಗಮನ ಹರಿಸಬೇಕು ಮತ್ತು ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗಬೇಕು ಎಂಬ ಸಂದೇಶವನ್ನು ನೀಡಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ, ಶ್ರೀ ಮಹೇಶ ಜಾಧವ್, ಸಿಸ್ಮರ, ಎಲ್ಲಿನಾ ರೊಡ್ರಿಗಸ್, ಶ್ರೀಮತಿ ಸಾಧನಾ ಭಧ್ರಿ, ಶ್ರೀಮತಿ ಜಿ. ಬಿ. ಪಟೇಲ್ ವಿದ್ಯಾರ್ಥಿ ಅತಿಗಳಾಗಿ ಕುಮಾರಿ ಅನಿತಾ ಮತ್ತು ಸಾನ್ನಿ ರವರು ಭಾಗವಹಿಸಿದರು. ಈ ಜಾಥಾ ಹಾಗೂ ಜಾಗೃತಿ ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳಿಂದ. ಮಕ್ಕಳು, ಶಿಕ್ಷಕರು, ಹಾಗೂ ವಿವಿಧ ಇಲಾಖೆಯ ಅಧಿಕಾರಿ ವರ್ಗದವರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಈ ಕಾರ್ಯಕ್ರಮವನ್ನು ಕರೆಪ್ಪ ಮಾದಿಗಾರ ನಿರೂಪಿಸಿದರು ಪ್ರವೀಣ ಗೊನ್ಸಾಲಿಸ ಸ್ವಾಗತಿಸಿ ಹಣಮಂತ ಭಜಂತ್ರಿ ಯವರು ವಂಧಿಸಿದರು.

# ಸಮಗ್ರ ತರಬೇತಿ ಪಡೆದು ಉತ್ತಮವಾಗಿ ಕಾರ್ಯ ನಿರ್ವಹಿಸಿ: ಬಸವರಾಜ ಹೆಗ್ಗನಾಯಕ



**ಬೆಳಗಾವಿ** : ಸ್ವಸಹಾಯ ಸಂಘಗಳ ಅಗತ್ಯ ದಾಖಲೆಗಳ ನಿರ್ವಹಣೆ, ಬ್ಯಾಂಕ್ ಲಿಂಕ್, ಕೌಶಲ್ಯಗಳ ತರಬೇತಿ ಆಯೋಜನೆ, ಮಾರುಕಟ್ಟೆಯ ಸಂಪರ್ಕ ಹಾಗೂ ವಿವಿಧ ಯೋಜನೆಗಳಿಗೆ ಬ್ಯಾಂಕ್‌ಗಳಿಂದ ಸಾಲ ಪಡೆಯುವ ಮುಂತಾದ ವಿಷಯಗಳ ಬಗ್ಗೆ ಸಮಗ್ರ ತರಬೇತಿ ನೀಡಲಾಗುತ್ತಿದ್ದು, ಕಾಳಜಿಯಿಂದ ತರಬೇತಿ ಪಡೆದುಕೊಂಡು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಬಸವರಾಜ ಹೆಗ್ಗನಾಯಕ ಅವರು ತಿಳಿಸಿದರು.

ಮಚ್ಚೆ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರದಲ್ಲಿ ಅಥಣಿ ತಾಲೂಕಿನ ಸ್ಥಳಿಯ ಸಮುದಾಯದ ಸಂಪನ್ಮೂಲ ವ್ಯಕ್ತಿಗಳಿಗೆ (ಪ್ರಶಿಕ್ಷಣಾರ್ಥಿಗಳು) ವಸತಿ ಸಹಿತ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಥಣಿ ತಾಲೂಕು ಪಂಚಾಯತಿ ವ್ಯಾಪ್ತಿಯಿಂದ ಒಟ್ಟು 42 ಸ್ಥಳೀಯ ಸಮುದಾಯ ವ್ಯಕ್ತಿಗಳು ಹಾಜರಿದ್ದು, ಸರ್ಕಾರದ ಆಶಯದಂತೆ ಮತ್ತು ಇಲಾಖೆಯ ಮಾರ್ಗಸೂಚಿಗಳ ಅಡಿಯಲ್ಲಿ ಅಚ್ಚುಕಟ್ಟಾಗಿ ತರಬೇತಿಯನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ತರಬೇತಿಯ ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಲಕ್ಷ್ಮಣಗೌಡ ಅವರು ಮಾತನಾಡಿ ಡಿಪಿಆರ್‌ಸಿ ತರಬೇತಿ ಕೇಂದ್ರ ಮಹಿಳೆಯರ ಕಲ್ಯಾಣ-ಕ್ಕಾಗಿ ತೆರೆದಿರುವ ಸಂಸ್ಥೆಯಾಗಿದ್ದು, ತರಬೇತಿ ಪಡೆದು ಸ್ವ-ಸಹಾಯ ಸಂಘದ ಸದಸ್ಯರು ತಮ್ಮ ಜೀವನವನ್ನು ರೂಪಿಸಿಕೊಳ್ಳುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಸಮುದಾಯ ಸಂಪನ್ಮೂಲ ವ್ಯಕ್ತಿಗಳಾದ ಕವಿತಾ ಪತ್ತಾರ, ಸುನಂದಾ ಐಗಳಿ, ರಾಜಶ್ರೀ ಜನಗೌಡ, ಅಶ್ವಿನಿ ತಳವಾರ, ಜ್ಯೋತಿ ಬಿದರಿ, ಸುಮಂಗಲಾ ಬಡಿಗೇರ, ರೇಖಾ ಹೂಗಾರ, ಲಕ್ಷ್ಮೀಬಾಯಿ ನಾಯಿಕ, ಗೀತಾ ದೇವರಮನಿ, ರೇಷ್ಮಾ ಕಾಂಬಳೆ, ಶೃತಿ ಸ್ವಾಮಿ, ಪ್ರೇಮಾ ಸನದಿ, ಗಂಗಾ ಮಲಬೆ, ಅಕ್ಷತಾ ಶಾಸ್ತ್ರಿ, ಅಶ್ವಿನಿ ದುಗ್ಗೆ, ಮಾಲಾ ಮಳವಾಡೆ, ಸವಿತಾ ಈರಣ್ಣವರ, ಸುನಂದಾ ಬಸರಿಕೊಡಿ, ಸುನಿತಾ ದಳವಾಯಿ, ಸಾಯವ್ವ ಇಚೇರಿ ಹಾಗೂ ಆಡಳಿತ ಸಹಾಯಕಿ ಮಂಜುಳಾ ಹೊನಕುಪ್ಪಿ, ಲೆಕ್ಕ ಸಹಾಯಕಿ ಸೋನು ಮುತ್ನಾಳ, ಪ್ರಿಯಾ ಸುತಾರ, ರಮೇಶ ದೇಸಾಯಿ, ಶಾಂತಾರಾಮ ಗೋದೋಳಕರ, ಗೋಪಾಲಕೃಷ್ಣ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದರು.

## ನವೆಂಬರ್.30 ರಂದು ಜಿಲ್ಲಾ ಮಟ್ಟದ ಯುವ ಜನೋತ್ಸವ ಆಯ್ಕೆ

ಬೆಳಗಾವಿ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನೆಹರು ಯುವ ಕೇಂದ್ರ, ಶ್ರೀ ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆಯ ಶ್ರೀ ಸಿದ್ದರಾಮೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪದವಿಪೂರ್ವ ಕಾಲೇಜು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರುಗಳ ಸಂಂ-ಯುಕ್ತಾಶ್ರಯದಲ್ಲಿ ನ. 30 ರಂದು ಶಿವಬಸವನಗರ ಶ್ರೀ ಸಿದ್ದರಾಮೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ 2024-25ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆಯನ್ನು ಜರುಗಿಸಲಾಗುತ್ತಿದೆ.

ಭಾಗವಹಿಸುವ ಸ್ಪರ್ಧಿಗಳಿಗೆ ಉಚಿತ ಪ್ರವೇಶವಿದ್ದು, ವಿಜೇತ ಸ್ಪರ್ಧಾಳುಗಳಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರಗಳನ್ನು ನೀಡಲಾಗುವುದು. ಬೆಳಗಾವಿ ಹೊರತುಪಡಿಸಿ ಇತರೆ ತಾಲೂಕುಗಳಿಂದ ಬರುವಂತಹ ಸ್ಪರ್ಧಿಗಳಿಗೆ ಪ್ರಯಾಣ ಭತ್ಯಯನ್ನು ನೀಡಲಾಗುವುದು ಹಾಗೂ ಊಟೋಪಹಾರ ವ್ಯವಸ್ಥೆ ಮಾಡಲಾಗಿದೆ.

ಸದರಿ ಯುವಜನೋತ್ಸವದಲ್ಲಿ ಯುವಕ ಹಾಗೂ ಯುವತಿಯರು ತಂಡದೊಂದಿಗೆ ಅಥವಾ ವೈಯಕ್ತಿಕವಾಗಿ ಜನಪದ ನೃತ್ಯ, ಜನಪದ ಗೀತೆ, ಕವಿತೆ, ಕಥೆ, ಚಿತ್ರಕಲೆ, ಛಾಯಾಗ್ರಹಣ, ಘೋಷಣೆ ಹಾಗೂ ವಿಷಯಾಧಾರಿತ ಸ್ಪರ್ಧೆಗಳ ಸಂಘಟನೆ ಹಾಗೂ ಗುಡಿ ಕೈಗಾರಿಕೆ, ನೇಕಾರಿಕೆ/ಜವಳಿ ಮತ್ತು ಕೃಷಿ ಉತ್ಪನ್ನಗಳಿಗೆ ಸಂಬಂಧಿಸಿದಂತೆ ಪ್ರದರ್ಶನಗಳನ್ನು ನಡೆಸಲಾಗುತ್ತಿದೆ.

ಆಸಕ್ತರು ನ.28 ರೊಳಗಾಗಿ ಪ್ರೋ. ಪ್ರೇಮೇಶ ದೊಡ್ಡಮನಿ ಮೋಬೈಲ್. 8105524749, ಪ್ರೋ. ಅಭಿನೇತ್ರಿ ಆರ್. 8310320994 ಅಥವಾ ಪ್ರೋ. ಜಯಶ್ರೀ 9148837493 ಸಂಖ್ಯೆಗಳಿಗೆ ಕರೆಮಾಡಿ ಹೆಸರು ನೋಂದಣಿ ಮಾಡಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ. 7411144485 ಅಥವಾ 9620646488 ಸಂಖ್ಯೆಗಳಿಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರಣ್ಯ ಇಲಾಖೆ : ಇಂದು ಮರಗಳ ತೆರವಿಗೆ ಬಹಿರಂಗ ಹರಾಜು

ಧಾರವಾಡ: ಧಾರವಾಡ ಜಿಲ್ಲೆಯ ಬೇಲೂರು ಕೈಗಾರಿಕಾ ಪ್ರದೇಶದ ಪ್ಲಾಟ್ ನಂ.19/ಸಿ ಗುಡಗುಂಟೆ ಇಂಜನೀಯರಿಂಗ್ ವರ್ಕ್ಸ ಕಂಪನಿಯ ಕೆ.ಐ.ಡಿ.ಬಿ. ಡಾಂಬರ ರಸ್ತೆ ನಂ.10 ಮತ್ತು ನಂ. 4 ರ ಬದಿಯಲ್ಲಿರುವ ಅಪಾಯಕಾರಿ 5 ಮರಗಳನ್ನು ತೆರುವುಗೊಳಿಸಲು ಧಾರವಾಡ ವಲಯ ಅರಣ್ಯ ಅಧಿಕಾರಿ ಕಛೇರಿಯಲ್ಲಿ ನವೆಂಬರ್ 22, 2024 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.

ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (ಗಿಖಖ) ರ ಸೆಕ್ಷನ್‌ಗಳಲ್ಲಿ ಅಗತ್ಯ ಪಡಿಸಿರುವಂತೆ ಈ ಬಗ್ಗೆ ತಕರಾರು ಸಲ್ಲಿಸ ಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ, ಧಾರವಾಡ ಹಾಗೂ ಧಾರವಾಡದ ಕೆ.ಸಿ.ಪಾರ್ಕ ಎದುರು ಅರಣ್ಯ ಸಂಕೀರ್ಣದಲ್ಲಿರುವ ಮರ ಅಧಿಕಾರಿಯವರಿಗೆ ಲಿಖಿತ ರೂಪದಲ್ಲಿ ನವೆಂಬರ್ 21, 2024 ರ ಒಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ನಾಪತ್ತೆ



ಬೆಳಗಾವಿ : ಬಾಕ್ಸೈಟ-ರೋಡ ಭಾರತ ನಗರದ ರೋಹಿತ ನೋಮನಾಥ ಸಾಳುಂಕೆ(30) ಅಕ್ಟೋಬರ್ 27 ರಂದು ಗೋವಾ ಕೆಲಸಕ್ಕೆ ಹೋದವನು ಮರಳಿ ಮನೆಗೆ ಬಂದಿಲ್ಲ ಎಂದು ಅಣ್ಣನಾದ ರಾಹುಲ ಸಾಳುಂಕೆ ಎ.ಪಿ.ಎಮ್.ಸಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿರುತ್ತಾರೆ.

ಕಾಣೆಯಾದ ವ್ಯಕ್ತಿಯ ವಿವರ: 5,8 ಎತ್ತರ, ಗೋದಿ ಮೈಬಣ್ಣ, ಮೈಯಿಂದ ಸದೃಡನಾಗಿರುತ್ತಾನೆ.

ಕಾಣೆಯಾದ ವ್ಯಕ್ತಿಯ ಮಾಹಿತಿ ದೊರೆತಲ್ಲಿ ಪೊಲೀಸ್ ಆಯುಕ್ತರು, ಎ.ಪಿ.ಎಮ್.ಸಿ ಪೊಲೀಸ್ ಇನ್ಸಪೆಕ್ಟರ್ ಅಥವಾ ಪೊಲೀಸ್ ಠಾಣೆಯ ದೂರವಾಣಿ. 08312405250, 9480804106, 9480804047 ಸಂಖ್ಯೆಗಳಿಗೆ ಸಂಪರ್ಕಿಸಲು ಎ.ಪಿ.ಎಮ್.ಸಿ ಪೊಲೀಸ್ ಠಾಣಾಧಿಕಾರಿಗಳು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲಾ ಕೊಠಡಿ ನಿರ್ಮಾಣಕ್ಕೆ ಹೆಬ್ಬಾಳಕರ್ ಭೂಮಿ ಪೂಜೆ



ಬೆಳಗಾವಿ: ಬಸರೀಕಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಎರಡು ಹೆಚ್ಚುವರಿ ಕೊಠಡಿಗಳ ನಿರ್ಮಾಣದ ಕಾಮಗಾರಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗುರುವಾರ ಭೂಮಿ ಪೂಜೆ ನೆರವೇ-ರಿಸುವ ಮೂಲಕ ಚಾಲನೆ ನೀಡಿದರು.

ಗ್ರಾಮಸ್ಥರ ಬೇಡಿಕೆಯಂತೆ ಶಾಲೆಗೆ ಹೆಚ್ಚುವರಿ ಕೊಠಡಿಗಳನ್ನು ಮಂಜೂರು ಮಾಡಿಸಿದ್ದೇನೆ. ಮಕ್ಕಳ ವಿದ್ಯಾಭ್ಯಾಸಕ್ಕೆ ಯಾವುದೇ ರೀತಿಯ ತೊಂದರೆಯಾಗಬಾರದೆನ್ನುವ ಕಾರಣ-ಕ್ಕೆ ಇಡೀ ಕ್ಷೇತ್ರದಲ್ಲಿ ಅಗತ್ಯವಿರುವ ಎಲ್ಲ ಮೂಲಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಯಾವುದೇ ಕಾರಣದಿಂದ ನಿಮ್ಮ ಮಕ್ಕಳು ವಿದ್ಯಾಭ್ಯಾಸ ಮೊಟಕುಗೊಳಿಸದಂತೆ ನೋಡಿಕೊಳ್ಳಿ ಎಂದು ಸಚಿವರು ಗ್ರಾಮಸ್ಥರಿಗೆ ಸಲಹೆ ನೀಡಿದರು.

ಇದೇ ವೇಳೆ ಗ್ರಾಮಸ್ಥರ ಕುಂದುಕೊರತೆಗಳನ್ನು ಆಲಿಸಿದ ಸಚಿವರು, ಗ್ರಾಮದ ವಿವಿಧ ಅಭಿವೃದ್ಧಿ ಕೆಲಸಗಳ ಕುರಿತು ಸಹ ಚರ್ಚೆ ನಡೆಸಿದರು. ನೀವು ನಮ್ಮ ಕ್ಷೇತ್ರದ ಶಾಸಕರಾದ ನಂತರವಷ್ಟೇ ನಮ್ಮ ಗ್ರಾಮಕ್ಕೆ ಅಭಿವೃದ್ಧಿ ಕೆಲಸಗಳು ಬರುತ್ತಿವೆ. ಹಿಂದೆ ಅಭಿವೃದ್ಧಿ ಎಂದರೇನೆಂದೇ ತಿಳಿದಿರಲಿಲ್ಲ. ಸದಾ ನಾವು ನಿಮ್ಮ ಬೆಂಬಲಕ್ಕಿರುತ್ತೇವೆ ಎಂದು ಗ್ರಾಮಸ್ಥರು ಸಚಿವರಿಗೆ ಭರವಸೆ ನೀಡಿದರು. ಈ ವೇಳೆ , ಸಿದ್ರಾಯಿ ಪಾಟೀಲ, ಬಸವಣ್ಣಿ ಕೊಂಡಸಕೊಪ್ಪ, ಸುರೇಶ ಶಿಂಧೆ, ಹೊಳೆಪ್ಪ ಪೂಜೇರಿ, ದಿಲೀಪ್ ಕೊಂಡಸಕೊಪ್ಪ, ಪ್ರಶಾಂತ ಕಲ್ಲನಾಂಚೆ, ಸಿದ್ದರಾಮ್ ಕೋಲಕಾರ ಸೇರಿದಂತೆ ಹಿರಿಯರು, ಮಹಿಳೆಯರು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮಸ್ಥರು ಉಪಸ್ಥಿತ-ರಿದ್ದರು.

# ನಾಳೆ ಎರಡನೆಯ ಮಕ್ಕಳ ಸಾಹಿತ್ಯ ಸಮ್ಮೇಳನ



ರಬಕವಿ-ಬನಹಟ್ಟಿ,ನ21: ಇದೇ 23 ರಂದು ಇಲ್ಲಿನ ಪೂರ್ಣಪ್ರಜ್ಞ ಶಿಕ್ಷಣ ಸಂಸ್ಥೆಯ ಸಭಾ ಭವನದಲ್ಲಿ ರಬಕವಿ ಬನಹಟ್ಟಿ ತಾಲ್ಲೂಕು ಎರಡನೆಯ ಮಕ್ಕಳ ಸಾಹಿತ್ಯ ಸಮ್ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಘಟಕದ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷೆ ಶೈಲಾ ಮಿರ್ಜಿ ತಿಳಿಸಿದರು.

ಅವರು ಗುರುವಾರ ಪೂರ್ಣಪ್ರಜ್ಞ ಶಿಕ್ಷಣ ಸಂಸ್ಥೆಯ ಕಾರ್ಯಾಲಯದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಬೆಳಗ್ಗೆ 10 ಕ್ಕೆ ಉದ್ಘಾಟನಾ ಕಾರ್ಯಕ್ರಮ ನಡೆಯಲಿದ್ದು, ರಬಕವಿಯ ಗುರುಸಿದ್ದೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಮಕ್ಕಳ ಸಾಹಿತಿ ಜಯವಂತ ಕಾಡದೇವರ ಅಧ್ಯಕ್ಷತೆ ವಹಿಸಲಿದ್ದಾರೆ. ರಬಕವಿಯ ಡಿ.ಕೆ.ಕೊಟ್ರಶೆಟ್ಟಿ ಶಾಲೆಯ ಎಂಟನೆಯ ತರಗತಿಯ ವಿದ್ಯಾರ್ಥಿನಿ ಸುಹಾನಿ ಮುತ್ತೂರ ಸಮ್ಮೇಳನದ ಸರ್ವಾಧ್ಯಕ್ಷತೆಯನ್ನು ವಹಿಸಲಿದ್ದು, ಶಾಸಕ ಸಿದ್ದು ಸವದಿ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಸದಸ್ಯೆ ಮತ್ತು ಚಿತ್ರ ಕಲಾವಿದ ಮಹಾದೇವ ಕವಿಶೆಟ್ಟಿ ಚಿತ್ರಕಲಾ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

ಮಹಾಲಿಂಗಪುರದ ಧುರೀಣ-ರಾದ ಸಿದ್ದು ಕೊಣ್ಣೂರ, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಕೆ.ಬಸನ್ನವರ, ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿ.ಎನ್. ಅಶೋಕ, ಶಿಕ್ಷಣ ಸಂಸ್ಥೆಯ ಕಾರ್ಯಾಧ್ಯಕ್ಷ ಸಿದ್ದಪ್ಪ ಮೇಣಿ, ಡಾ.ಪದ್ಮಜೀತ ನಾಡಗೌಡ ಪಾಟೀಲ, ವೆಂಕಣಗೌಡ ಪಾಟೀಲ, ಸಿದ್ಧರಾಜ ಪೂಜಾರಿ, ಧರೆಪ್ಪ ಉಳ್ಳಾಗಡ್ಡಿ ಬಸವರಾಜ ಬಾಗೇನವರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 12 ಕ್ಕೆ ಮಕ್ಕಳ ನಗೆ ಹರಟೆ ಗೋಷ್ಠಿ, 12. 45 ಕ್ಕೆ ಮಕ್ಕಳ ಕವಿಗೋಷ್ಠಿ, 1. 45 ಕ್ಕೆ ವಿಚಾರ ಗೋಷ್ಠಿ, 2. 30 ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳು, 4 ಕ್ಕೆ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಶೈಲಾ ಮಿರ್ಜಿ ತಿಳಿಸಿದರು.

ಮಕ್ಕಳ ಸಾಹಿತಿ ಜಯವಂತ ಕಾಡದೇವರ, ಪರಿಷತ್ತಿನ ಪದಾಧಿಕಾರಿಗಳಾದ ಸಾವಿತ್ರಿ ಚಾಂಬರ, ಆರ್.ವಿ.ಬಾಣಕಾರ, ಕಿರಣ ಆಳಗಿ, ಸಿದ್ದಪ್ಪ ಮೇಣಿ, ರಾಮದಾಸ ಸಿಂಗನ್, ಅದೃಶಯ್ಯ ಕಾಡದೇವರ ಇದ್ದರು.



**ಯರಗಟ್ಟಿ : ಸಮೀಪದ ಹಿರೆಬೂದನೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಳಗಲಿ ಗ್ರಾಮದ ಮಹೇಶ ಮಲ್ಲಿಕಾರ್ಜುನ ದೇಸಾಯಿ ಗೋಕಾಕ ತಾಲೂಕಿನ ತವಗದ ಏಕಲವ್ಯ ಆದರ್ಶ ವಿದ್ಯಾಲಯದ ವಿದ್ಯಾರ್ಥಿ ಬಿಹಾರದಲ್ಲಿ ನಡೆದ "ಜನಜಾತಿ ಗೌರವ ದಿವಸ್" ನಿಮಿತ್ತ ಆಯೋಜಿಸಿದ್ದ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿಜೀಯವರು ಗೌರವಿಸಿ ಸನ್ಮಾನಿಸಿದರು.**

## ನಮ್ಮೂರು ನಮ್ಮ ಕೆರೆ ಹಸ್ತಾಂತರ



ಯರಗಟ್ಟಿ: ಗ್ರಾಮಾಭಿವೃದ್ಧಿ ಯೋಜನೆಯ ನಮ್ಮೂರು ನಮ್ಮ ಕೆರೆ ಯೋಜನೆಯಿಂದ ಕೆರೆಗಳ ಅಭಿವೃದ್ಧಿಯಾಗಿ ಪರಿಸರದ ಅಂತರ್ಜಲ ವೃದ್ಧಿಯಾಗುತ್ತಿದ್ದು, ನೀರಿನ ಸಮಸ್ಯೆಗೆ ಪರಿಹಾರ ಸಿಕ್ಕಿದೆ ಎಂದು ಕೋಟದ ಶಿಂದೋಗಿಯ ಪೂಜ್ಯ ಮುಕ್ತಾನಂದ ಮಹಾಸ್ವಾಮಿಗಳು ಹೇಳಿದರು.


ಅವರು ಗ್ರಾಮಾಭಿವೃದ್ಧಿ ಯೋಜನೆಯ ನಮ್ಮೂರು-ನಮ್ಮ ಕೆರೆ ಯೋಜನೆಯಡಿ ಯರಗಟ್ಟಿ ಸಮೀಪದ ರೈನಾಪೂರ ಗ್ರಾಮದ ಅಭಿವೃದ್ಧಿ ಂಡ ಪುರಾತನ ಕೆರೆ ಹಸ್ತಾಂತರ ಕಾರ್ಯ ಕ್ರಮದಲ್ಲಿ ಮಾತನಾಡಿದರು.

ಆಧುನಿಕತೆಗೆ ಸಿಲುಕಿ ಕೆರೆಗಳು ಮಾಯವಾಗುತ್ತಿವೆ. ನೀರಿನ ಉಳಿವಿಗಾಗಿ ಕೆರೆಗಳ ಉಳಿವು ಅತ್ಯಗತ್ಯ ಎಂದರು.

ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಗಣೇಶ್ ಬಿ. ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ರಾಜ್ಯಾದ್ಯಂತ ಇದುವರೆಗೆ 765 ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ. 36 ಕೋಟಿ ರೂ.ಗೂ ಅಧಿಕ ಹಣವನ್ನು ಇದಕ್ಕೆ ವಿನಿಯೋಗ ಮಾಡಲಾಗಿದೆ. ಉಡುಪಿ ಜಿಲ್ಲೆಯಲ್ಲಿ ಇದು ವರೆಗೆ 20 ಕೆರೆಗಳನ್ನು ಅಭಿವೃದ್ಧಿಪಡಿಸಿ, ಸಮಿತಿಯನ್ನು ರಚಿಸಿ ಸಾರ್ವಜನಿಕರ ಉಪಯೋಗಕ್ಕೆ ಹಸ್ತಾತರಿಸಲಾಗಿದೆ ಎಂದರು.

ರೈನಾಪೂರ ಕೆರೆ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಗೋವಿಂದಪ್ಪ ಕಳ್ಳಿಗುದ್ದಿ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ಗ್ರಾಮಾಭಿವೃದ್ಧಿ ಯೋಜನೆಯ ಪ್ರಾಧೇಶಿಕ ನಿರ್ದೇಶಕ ಮನೋಜ್ ಮಿನೇಜನ್, ಗ್ರಾ. ಪಂ. ಅಧ್ಯಕ್ಷೆ ಸತ್ಯವ್ವ ಗೊರಗುದ್ದಿ, ಯೋಜನೆಯ ಜಿಲ್ಲಾ ನಿರ್ದೇಶಕ ಹೆಚ್. ಆರ್. ಲಕುಮಾರ, ತಾಲೂಕು ಯೋಜನಾಧಿಕಾರಿ ಸತೀಶ ಡಿ, ಗ್ರಾ. ಪಂ. ಸದಸ್ಯ ನಂದಗೋಪಾಲ ಕಡೇಮನಿ,

# ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಅಗತ್ಯ



**ರಬಕವಿ-ಬನಹಟ್ಟಿನ :** ವಸತಿ ಶಾಲೆಯ ಮಕ್ಕಳಿಗೆ ಪಠ್ಯದ ಜೊತೆಗೆ ಜೊತೆಗೆ ಕ್ರೀಡೆ ಮತ್ತು ಸಾಂಸ್ಕೃತಿ-ಕ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಪ್ರೋತ್ಸಾಹ ನೀಡುವುದು ಅಗತ್ಯವಾಗಿದೆ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಈಚೇಗೆ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯಲದಲ್ಲಿ ರಾಷ್ಟ್ರಮಟ್ಟದ ಮೂರು ಸಾವಿರ ಮೀಟರ್ ಓಟದ ಸ್ಪರ್ಧೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾದ ಪ್ರವೀಣ ಕಂಠಿ ಅವರನ್ನು ಸನ್ಮಾನಿಸಿ ಮಾತನಾಡಿದರು.

ಪಠ್ಯದ ಜೊತೆಗೆ ಪಠ್ಯೇತರ ಚಟುವಟಿ-ಕೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯಾಗಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಶಿಕ್ಷಕರ ಗಮನ ನೀಡಬೇಕು ಎಂದು ತಿಳಿಸಿದರು.

ವಸತಿ ಶಾಲೆಯ ಪ್ರಾಚಾರ್ಯ ಎಸ್.ಎನ್. ದೇಮಣ್ಣನವರ ಮಾತನಾಡಿ, ಮುಂದಿನ ದಿನಗಳಲ್ಲಿ ಉತ್ತರ ಪ್ರದೇಶದ ಲಖನೌ ದಲ್ಲಿ ನಡೆಯುವ ರಾಷ್ಟ್ರ ಮಟ್ಟದ ಕ್ರೀಡಾಕೂಟದಲ್ಲಿ ಪ್ರವೀಣ ಭಾಗವಹಿಸಲಿದ್ದಾರೆ ಎಂದರು. ತಹಶೀಲ್ದಾರ್ ಗಿರೀಶ ಸ್ವಾದಿ, ದೈಹಿಕ ಶಿಕ್ಷಕ ಎ.ಆರ್. ಹಿಪ್ಪರಗಿ, ಶಿರಸ್ತೆದಾರ ರಾಜಶೇಖರ ಸಾತಿಹಾಳ ಇದ್ದರು.

# ಇಂದು ಸ್ವಯಂ ಪ್ರೇರಿತ ರಕ್ತದಾಸ ಶಿಬಿರ

ಯರಗಟ್ಟಿ: ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪಟ್ಟಣ ಪಂಚಾಯತ ಹಾಗೂ ಆರೋಗ್ಯ ಇಲಾಖೆ ಯರಗಟ್ಟಿ ಇವರ ಆಶ್ರದಲ್ಲಿ ದಿ. 22 ಶುಕ್ರವಾರ ಮುಂಜಾನೆ 09-00 ಗಂಟೆಗೆ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟಕರಾಗಿ ತಹಶೀಲ್ದಾರ ಎಮ. ಎನ್. ಮಠದ, ಮುಖ್ಯ ಅಥಿತಿಗಳಾಗಿ ಜಿಲ್ಲಾ ಆರೋಗ್ಯ ಅಧಿಕಾರಿ ಎಸ್. ಎಸ್. ಗಡೇದ, ತಾಲೂಕಾ ಆರೋಗ್ಯ ಅಧಿಕಾರಿ ಶ್ರೀಪಾಧ ಸಬ್ನಿಸ್, . ಪಂ. ಮುಖ್ಯಾಧಿಕಾರಿ ಡಿ. ಎನ್. ತಹಶೀಲ್ದಾರ, ಹಿರಿಯ ಶಸ್ತ್ರ ಚಿಕಿತ್ಸೆ ತಜ್ಞನ ಡಾ. ಆರ್. ಬಿ. ಯರಝರ್ವಿ, ಮುಖ್ಯ ವೈದ್ಯಾಧಿಕಾರಿ ಡಾ. ಬಿ. ಎಸ್. ಬಳ್ಳೂರ ಪ. ಪಂ. ಸದಸ್ಯರಾದ ನಿಖಿಲ ಪಾಟೀಲ, ಹನಮಂತ ಹಾರುಗೊಪ್ಪ, ಸಲೀಮ ಜಾಮದಾರ ಸೇರಿದಂತೆ ಅನೇಕರು ಆಗಮಿಸಲ್ಲಿದ್ದಾರೆ ಎಂದು ಆಯ್. ಆರ್. ಗಂಜಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಸಮಸ್ಯೆಗಳ ಪರಿಹಾರಕ್ಕೆ ಲೋಕಾಯುಕ್ತ ಮೊದಲ ಆದ್ಯತೆ

(ಮೊದಲನೆಯ ಪುಟದಿಂದ) ಪ್ರತಿಯೊಬ್ಬರಿಗೂ ಇರುವ ಹಕ್ಕುಗಳನ್ನು ಗೌರವಿಸಬೇಕು. ಮೂಲಭೂತ ಕರ್ತವ್ಯಗಳನ್ನು ಸಂರಕ್ಷಣೆ ಮಾಡಿಕೊಳ್ಳಬೇಕು. ನೀರು, ಗಾಳಿ ಸೇರಿದಂತೆ ಮೂಲಭೂತ ಸಂಪತ್ತುಗಳನ್ನು ಕಾಪಾಡಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಅಭಿವೃದ್ಧಿ ಹೊಂದಬೇಕಾಗುವಂತಹ ಹಲವಾರು ಯೋಜನೆಗಳನ್ನು ಸರಕಾರ ಜಾರಿ ಮಾಡಿದೆ. ಕಾನೂನುಗಳಿಂದ ರಚಿಸಲ್ಪಟ್ಟ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವ ಕೆಲಸವನ್ನು ಕಾರ್ಯಾಂಗ ಮಾಡುತ್ತಿದೆ. ಎಲ್ಲರೂ ಒಂದೇ ಎಂಬ ಭಾವನೆಗಳಲ್ಲಿ ಜೀವನ ಸಾಗಿಸಬೇಕು. ಎಂಟು ಕೋಟಿ ಜನರ ಜವಾಬ್ದಾರಿ ಸರಕಾರದ ಹೆಗಲ ಮೇಲಿದೆ. ಪ್ರತಿಯೊಂದು ಯೋಜನೆಯಲ್ಲಿ ಅದರದ್ದೇ ಆದ ನಿಯಮಾವಳಿಗಳಿವೆ ಅದನ್ನು ನಾವು ತಿಳಿದುಕೊಳ್ಳಬೇಕು ಎಂದು ಅವರು ಹೇಳಿದರು. ಯಾವುದೇ ರೀತಿಯ ಭ್ರಷ್ಟಾಚಾರ, ಪಕ್ಷಪಾತಗಳನ್ನು ಸರ್ಕಾರದ ಅಧೀನದಲ್ಲಿರುವ ಅಧಿಕಾ-ರಿಗಳು ಮಾಡಬಾರದು. ಸಮಯಕ್ಕೆ ಸರಿಯಾಗಿ ಕಾರ್ಯ ಅಥವಾ ಕೆಲಸ ನಿರ್ವಹಿಸುವುದು ಅಧಿಕಾರಿಗಳ ಜವಾಬ್ದಾ-ರಿಯಾಗಿದೆ. ಕರ್ತವ್ಯ ಲೋಪವಾದರೆ ಸಾರ್ವಜನಿಕರ ಹಕ್ಕು ಉಲ್ಲಂಘನೆ ಆಗುತ್ತದೆ. ಸಂಬಂಧಿಸಿದ ಅಧಿಕಾ-ರಿಗಳು, ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಿಸಿ ಸರಿಪಡಿಸಬೇಕು ಎಂದು ತಿಳಿಸಿದರು.

ಲೋಕಾಯುಕ್ತ ಕಚೇರಿಯ ಬಗ್ಗೆ ಸಾರ್ವಜನಿಕ-ರಿಗೆ ತಿಳಿಸಬೇಕು. ಲೋಕಾಯುಕ್ತದ 7, 8 ಮತ್ತು 9 ನೇ ಕಲಂಗಳನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು. ಹೈಕೋರ್ಟಗಳಿಗೆ ಇರುವ ಅಧಿಕಾರವನ್ನು ಕಲಂ 17 ರಡಿಯಲ್ಲಿ ಲೋಕಾಯುಕ್ತವು ಕೂಡ ಹೊಂದಿದೆ ಎಂದು ನ್ಯಾಯಮೂರ್ತಿಗಳು ಹೇಳಿದರು.

ಸಮಸ್ಯೆಗಳ ಪರಿಹಾರದ ವಿಳಂಬ ಮತ್ತು ಕರ್ತವ್ಯ ಲೋಪ ಇವುಗಳಡಿಯಲ್ಲಿ ಕ್ರಮ ಜರುಗಿಸಲಾಗುವುದು. ನಂತರ ಸರ್ಕಾರಕ್ಕೆ ವರದಿ ನೀಡಲಾಗುವುದು. ಸರ್ಕಾರದ ಕೆಲಸ ದೇವರ ಕೆಲಸ ಎಂದು ತಿಳಿದು ಸಾರ್ವಜನಿಕರ ತೊಂದರೆಗಳನ್ನು ಬಗೆಹ-ರಿಸುವಂತಹ ಕೆಲಸವನ್ನು ಅಧಿಕಾರಿಗಳು ಮಾಡಬೇಕು ಎಂದು ಅವರು ತಿಳಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಸರಕಾರಿ ಅಧಿಕಾರಿಗಳು ಕಾಯಕವೇ ಕೈಲಾಸ ಎಂಬುದನ್ನು ಅರಿತು ಕೆಲಸ ಮಾಡಿದರೆ ಯಾವುದೇ ದೂರುಗಳು ಬರುವುದಿಲ್ಲ. ನೈತಿಕ ಮೌಲ್ಯಗಳನ್ನು ಅರಿತು ಕೆಲಸ ಮಾಡಬೇಕು ಎಂದು ಹೇಳಿದರು.

ಮಾಡಿರೋ ತಪ್ಪುಗಳನ್ನು ಮತ್ತೆ ಮತ್ತೆ ಮಾಡಬಾರದು. ಅವುಗಳನ್ನು ಅರಿತು ಸರಿಪಡಿಸಿಕೊಳ್ಳಬೇಕು. ಸರ್ಕಾರಿ ಅಧಿಕಾರಿಗಳು ಕಾನೂನಾತ್ಮಕ ಯಾವೆಲ್ಲ ಜವಾಬ್ದಾ-ರಿಗಳಿವೆ ಎಂಬುದನ್ನು ತಾವು ತಿಳಿಯಬೇಕು. ಇಲ್ಲಿಯವರೆಗೆ ಆಗಿರುವ ಲೋಪಗಳನ್ನು ಬಗೆಹರಿಸುವಂತಹ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವೇದಿಕೆಯಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಉಪ ಪೊಲೀಸ್ ಆಯುಕ್ತರಾದ ಸಿ.ಆರ್.ರವೀಶ, ಮಾನಿಂಗ ನಂದಗಾವಿ, ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಕಚೇರಿಯಲ್ಲಿನ ವಿವಾರಣಾ ವಿಭಾಗದ ಅಪರ ನಿಬಂಧಕರಾದ ಪಿ.ಶ್ರೀನಿವಾಸ, ನರಸಿಂಹಸಾ ಎಂ.ವಿ., ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ, ಸಿವಿಲ್ ನ್ಯಾಯಾಧೀಶ ಕಿರಣ ಪಿ.ಎಂ.ಪಾಟೀಲ್, ಧಾರವಾಡ ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಹನುಮಂತರಾಯ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

*****

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 241, Postal Reg No. PMG/KA/NK/BM/135/22-24 / POST AT Vantamury Colony Post Office